₹ 4 ಪುಟ: 4 ಸಂಪುಟ: 4 ಸಂಚಿಕೆ 79 newsbelagavi@gmail.com 9900332089 9900332089



# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ
BELAGAVI VARADI KANNADA DAILY
ಕನ್ನಡ ದಿನಪತ್ರಿಕೆ
Volume : 4 Issue: 79 Wednesday, 10, MAY, 2023 RNI: KARKAN/2020/79084 Regn,No:G-2/PMG/KA/NK/BM/139/2021-23 24

## ಬಿಜೆಪಿಯವರಿಗೆ ಕೆಲಸ ಇಲ್ಲದೆ ಸಿದ್ದರಾಮಯ್ಯ ಹೆಸರಲ್ಲಿ ನನ್ನ ವಿರುದ್ಧ ನಕಲಿ ಪತ್ರ ಬರೆದಿದ್ದಾರೆ: ಡಿ.ಕೆ.ಶಿ



ಬೆಂಗಳೂರು: ಬಿಜೆಪಿ ಅವರಿಗೆ ಮಾಡಲು ಕೆಲಸ ಇಲ್ಲ. ಚುನಾವಣೆಯಲ್ಲಿ ಸೋಲುವ ಭೀತಿಯಿಂದ ಸಿದ್ದರಾಮಯ್ಯ ಅವರ ಹೆಸರಲ್ಲಿ ನನ್ನ ವಿರುದ್ಧ ಪತ್ರ ಬರೆದಿದ್ದಾರೆ ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಕಿಡಿಕಾರಿದ್ದಾರೆ.

ಮೈಸೂರು ಬ್ಯಾಂಕ್ ವೃತ್ತದಲ್ಲಿರುವ ಆಂಜನೇಯ ಸ್ವಾಮಿ ದೇವಾಲಯದಲ್ಲಿ ಮಂಗಳವಾರ ಬೆಳಗ್ಗೆ ಪೂಜೆ ಸಲ್ಲಿಸಿದ ನಂತರ ಸುದ್ದಿಗಾರ ರೊಂದಿಗೆ ಮಾತನಾಡಿದ ಡಿ.ಕೆ. ಶಿವಕುಮಾರ್, ಸಿದ್ದರಾಮಯ್ಯ ಅವರು ನನ್ನ ವಿರುದ್ಧ ಯಾಕೆ ಪತ್ರ ಬರೆಯುತ್ತಾರೆ? ಅವರು ಎಲ್ಲಾ ಕ್ಷೇತ್ರಗಳಲ್ಲಿ ಪ್ರಚಾರ ಮಾಡಿ ಮೊನ್ನೆಯಷ್ಟೇ ನಾವಿಬ್ಬರೂ ಸೇರಿ ಅಭಿಪ್ರಾಯ ಹಂಚಿಕೊಂಡಿದ್ದೇವೆ. ಈಗಲೂ ನಾವು ಮಾಡುತ್ತಿದ್ದೇವೆ. ಅವರಿಗೆ ಜನರ ಬಳಿ ಪ್ರಚಾರಕ್ಕೆ ಸಮಯ ಸಿಗುತ್ತಿಲ್ಲ.

ಇನ್ನು ಈ ರೀತಿ ದೂರಲು ಎಲ್ಲಿ ಸಾಧ್ಯ? ಬಿಜೆಪಿಯವರಿಗೆ ಮಾಡಲು ಕೆಲಸ ಇಲ್ಲ. ಹೀಗಾಗಿ ಅವರ ಹೆಸರಲ್ಲಿ ನಕಲಿ ಪತ್ರ ಬರೆದು ಹಂಚುತ್ತಿದ್ದಾರೆ. ಬಿಜೆಪಿಯಲ್ಲಿರುವ ಆಂತರಿಕ ಹುಳುಕು ಮುಚ್ಚಿಕೊಳ್ಳಲು ಈ ರೀತಿ ಪ್ರಯತ್ನ ಮಾಡುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

ಮೋದಿ ಅವರು ಬಂದು ಬೀದಿ ಬೀದಿ ಅಳೆದಾಡಿದರು. ಮೋದಿ ಅವರು ಬಂದು ರೋಡ್ ಶೋ ಮಾಡಿದರು.

ಅವರ ಜತೆ ಒಬ್ಬ ರಾಜ್ಯ ನಾಯಕನೂ ಇರಲಿಲ್ಲ. ಕನಿಷ್ಠ ಪಕ್ಷ ಆಯಾ ಕ್ಷೇತ್ರದ ಅಭ್ಯರ್ಥಿಯನ್ನಾದರೂ ಜತೆಯಲ್ಲಿ ಇಟ್ಟುಕೊಂಡು ರೋಡ್ ಶೋ ಮಾಡಬಾರದೇ? ಬೇರೆ ಯಾವುದೇ ನಾಯಕರು ಬೆಳೆಯಬಾರದೇ? ನೂತನ ಸಂಸತ್ ಭವನಕ್ಕೂ ಒಬ್ಬರೇ ಹೋಗುತ್ತಾರೆ. ರಾಮ ಮಂದಿರ ಪೂಜೆಗೂ ಒಬ್ಬರೇ ಕೂರುತ್ತಾರೆ.

ಮತ ಕೇಳುವಾಗಲೂ ಒಬ್ಬರೇ ಮಾಡುತ್ತಾರೆ. ನಾಯಕನಾದವ ನಾಯಕರನ್ನು ಸೃಷ್ಟಿ ಮಾಡಬೇಕು. ಈ ಸಮಯದಲ್ಲಿ ಅವರ ನಾಯಕರ ಶಕ್ತಿಯನ್ನು ಅವರೇ ಕುಗ್ಗಿಸುವ ಪ್ರಯತ್ನ ಮಾಡಿದ್ದಾರೆ.

ಇದು ಅಚ್ಚರಿ ತಂದಿದೆ. ಸೋಲುವ ಭೀತಿಯಿಂದ ಇಷ್ಟು ಅಬ್ಬರದ ಪ್ರಚಾರ ಮಾಡಿದ್ದಾರೆ. ಇವರು ಎಷ್ಟೇ ಅಬ್ಬರದ ಪ್ರಚಾರ ಮಾಡಿದರೂ ರಾಜ್ಯದ ಜನ ಕೇಳುವುದಿಲ್ಲ. ಜನರಿಗೆ ಕಾಂಗ್ರೆಸ್ ಪಕ್ಷದ ಗ್ಯಾರಂಟಿ ಯೋಜನೆಗಳ ಅಗತ್ಯವಿದೆ ಎಂದು ತಿಳಿಸಿದರು.

'ದೇಶದಲ್ಲಿ ರಾಮನ ತಂದೆ ದಶರತ ಮಹಾರಾಜನ ದೇವಾಲಯ ಎಲ್ಲೂ ಇಲ್ಲ. ಆದರೆ ರಾಮನ ಬಂಟ ಹನುಮನ ದೇವಾಲಯ ಎಲ್ಲಾ ಕಡೆ ಇದೆ. ಹನುಮಂತ ಸಮಾಜದ ಸೇವಕ. ನಮ್ಮ ಮೇಲೆ ಆಂಜನೇಯನ ಅನುಗ್ರಹ ಸದಾ ಇರಲಿದೆ.

ಆಂಜನೇಯ ಹೇಗೆ ಸಮಾಜಕ್ಕೆ ಸೇವೆ ಮಾಡಿದನೋ ಅದೇ ರೀತಿ ರಾಜ್ಯದ ಸೇವೆ ಮಾಡಲು ಶಕ್ತಿ ನೀಡುವಂತೆ ಹನುಮಂತನಲ್ಲಿ ಪ್ರಾರ್ಥನೆ ಮಾಡಿದ್ದೇವೆ ಎಂದರು.

ಕಾಂಗ್ರೆಸ್ ವಿರುದ್ಧ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಅವರ ಟೀಕೆ ವಿಚಾರವಾಗಿ ಕೇಳಿದ ಪ್ರಶ್ನೆಗೆ, 'ನಾವು ಎನ್ಇಪಿ ರದ್ದು ಸೇರಿದಂತೆ ನಮ್ಮ ಪ್ರಣಾಳಿಕೆಯ ಎಲ್ಲಾ ಅಂಶಗಳಿಗೆ ಬದ್ಧರಾಗಿದ್ದೇವೆ. ನಮ್ಮದು ನಾಗ್ಪುರ ಶಿಕ್ಷಣ ನೀತಿ ಅಲ್ಲ, ನಮಗೆ ರಾಜ್ಯ ಶಿಕ್ಷಣ ನೀತಿ ಬೇಕು. ನಮ್ಮ ರಾಜ್ಯದ ಶಿಕ್ಷಣ ನೀತಿಯಲ್ಲಿ ಇಷ್ಟು ದಿನ ಕಲಿತು ದೊಡ್ಡ ಸಾಧನೆ ಮಾಡಿಲ್ಲವೇ?' ಎಂದು ಪ್ರಶ್ನಿಸಿದರು.

## ಈ ಭಾರಿ ಸ್ಪಷ್ಟ ಬಹುಮತದ ಬಿಜೆಪಿ ಸರ್ಕಾರ ಬರಲಿದೆ: ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ



ಶಿಗ್ಗಾಂವಿ: ಕ್ಷೇತ್ರದ ಕೋಣನಕೇರಿ, ಚಂದಾಪುರ, ಜಕ್ಕಿನಕಟ್ಟಿ, ಯತ್ತಿನಹಳ್ಳಿ, ದುಂಢಸಿ, ಮಮದಾಪುರ ತಾಂಡಾಗಳಲ್ಲಿ ಮನೆಗಳಿಗೆ ತೆರಳಿ ಪ್ರಚಾರ ಮಾಡಿದ ಬಳಿಕ ಅವರು ಮಾತನಾಡಿದರು. ಮನೆ ಮನೆಗೆ ತೆರಳಿ ಪ್ರಚಾರ ಮಾಡಿದ್ದು, ನನಗೆ ಬಹಳ ಖುಷಿ ತಂದಿದೆ. ನಾನು ಬುಧವಾರ ತಾಂಡಾಗಳಿಗೆ ಭೇಟಿ ಮಾಡಿದ್ದೇನೆ. ಜನರೆ ಚುನಾವಣೆ ಮಾಡುತ್ತಿದ್ದಾರೆ, ನಾನು ಮಾಡುತ್ತಿಲ್ಲ. ಚುನಾವಣೆ ಅಲ್ಲಾ, ಇದೊಂದು ಹಬ್ಬ ಅಂತ ಅನಿಸುತ್ತಿದೆ. ಜನರು ಬಹಳಷ್ಟು ತಿಳುವಳಿಕೆಯಿಂದ ಇದ್ದಾರೆ ಎನ್ನುವುದು ಸ್ಪಷ್ಟವಾಗಿದೆ ಎಂದರು.

ಶಿಗ್ಗಾವಿಯಲ್ಲಿ ಕಾಂಗ್ರೆಸ್ ನಾಯಕರು ಪ್ರಚಾರ ಮಾಡಿಲ್ಲ ಎಂಬ ಹೇಳಿಕೆಗೆ ಪ್ರತಿಕ್ರಿಯೆ ನೀಡಿದ ಸಿಎಂ, ನಾನು ಯಾರನ್ನು ಆ ಥರ ನೋಡಿಲ್ಲ. ಅದು ಅವರ ಪಕ್ಷಕ್ಕೆ ಬಿಟ್ಟಿದ್ದು. ನಾವು ಜಾಸ್ತಿ ನಾಯಕರನ್ನು ಕರೆಯಿಸಿ ಪ್ರಚಾರ ಮಾಡಿಲ್ಲ. ನಾನು ಜನರೊಂದಿಗೆ ನೇರ ಸಂಪರ್ಕ ಹೊಂದಿದ್ದೇನೆ. ಪ್ರಧಾನಮಂತ್ರಿಗಳಿಂದ ಹಿಡಿದು ಎಲ್ಲರ ಆಶೀರ್ವಾದ ಇದೆ.

ಈ ಭಾರಿಯೂ ಕಾಂಗ್ರೆಸ್ ಪಕ್ಷ ಸೋಲುವುದು ಶತಸಿದ್ದ ಎಂದರು. ನಾನು ಮೊನ್ನೆ ಟಿವಿಯಲ್ಲಿ ಸಿದ್ದರಾಮಯ್ಯ ಹಾಗೂ ಡಿಕೆಶಿ ಪರಸ್ಪರ ಸಂದರ್ಶನ ನೋಡಿದೆ. ಕಾಂಗ್ರೆಸ್ ನಲ್ಲಿ ಎಲ್ಲವೂ ಸರಿಯಿಲ್ಲ. ಟಿವಿಗೋಸ್ಕರ ಆ ಥರ ಮಾಡಬಾರದು. ನಾಟಕೀಯವಾಗಿ ಕಾಂಗ್ರೆಸ್ ನವರು ಮಾಡುತ್ತ ನಾವು ಒಗ್ಗಟ್ಟಾಗಿ ಇದ್ದೇವೆ ಎಂದು ತೋರಿಸುತ್ತಿದ್ದಾರೆ.

ನಮ್ಮ ಪಕ್ಷದಲ್ಲಿ ಯಾವ ನಾಟಕೀಯತೆ ಎನ್ನುವುದು ಇಲ್ಲಾ. ನಮ್ಮಲ್ಲಿ ಒಗ್ಗಟ್ಟು ಇದೆ. ಪ್ರಚಾರ ಉತ್ತಮವಾಗಿ ಆಗಿದೆ. ಜನರ ಆಶೀರ್ವಾದ ಇದೆ. ಈ ಭಾರಿ ಸ್ಪಷ್ಟ ಬಹುಮತದ ಬಿಜೆಪಿ ಸರ್ಕಾರ ಬರಲಿದೆ ಎಂದರು. ಜನರ ಸಂಪರ್ಕ ಇರುವುದು ರಾಜಕಾರಣದಲ್ಲಿ ಬಹಳ ಮುಖ್ಯ. ಅವರ ಸಮಸ್ಯೆ ಆಲಿಸುವುದು ಬಹಳ ಮುಖ್ಯ. ಇದರ ಜೊತೆಗೆ ಸಮಸ್ಯೆಗಳಿಗೆ ಸ್ಪಂದಿಸುವುದು ಕೂಡ ಮುಖ್ಯ. ಹೀಗಾಗಿ ಸಮಯ ಸಿಕ್ಕಾಗ ನಾನು ಜನರ ಬಳಿ ಹೋಗುತ್ತೇನೆ.

ಅಸೆಂಬ್ಲಿಯಲ್ಲಿ ಸಮಸ್ಯೆಗಳ ಬಗ್ಗೆ ಮಾತನಾಡುತ್ತೇವೆ. ಆದರೆ ಸಮಸ್ಯೆಗಳ ಜೊತೆ ಬದುಕುವುದು ಕಷ್ಟ. ಹೀಗಾಗಿ ಜನರ ಬಳಿ ಇರುವುದೇ ನನಗೆ ಸಂತೋಷ. ನಾನು ಕುಟುಂಬದ ಸಮೇತ ಇಂದು ಬೆಳಿಗ್ಗೆ ಶಿಗ್ಗಾವಿಯಲ್ಲಿ ಮತದಾನ ಮಾಡುತ್ತೇನೆ. ಎಲ್ಲರೂ ಮತದಾನ ಮಾಡಬೇಕು. ಇದು ಪ್ರಜಾಪ್ರಭುತ್ವದ ಹಬ್ಬ ಎಂದರು.

## ಅಭ್ಯರ್ಥಿಗಳ ಸೋಲು-ಗೆಲುವಿನ ಮೇಲೆ ಬೆಟ್ಟಿಂಗ್ ಕಟ್ಟುವವರೇ ಹುಷಾರ್





ಬೆಂಗಳೂರು: ರಾಜ್ಯ ವಿಧಾನಸಭೆ ಚುನಾವಣಾ ಕಣ ರಂಗೇರಿದೆ. ನಾಳೆ(ಮೇ.10) ಕರ್ನಾಟಕದ 224 ವಿಧಾನಸಭಾ ಕ್ಷೇತ್ರಗಳಲ್ಲಿ ಮತದಾನ ನಡೆಯಲಿದೆ. ಈ ಹಿನ್ನಲೆ ಅಹಿತಕರ ಘಟನೆ ನಡೆಯದಂತೆ ಕ್ರಮ ಕೈಗೊಳ್ಳಲಾಗಿದೆ. ಈ ಮಧ್ಯೆ ಚುನಾವಣೆಯಲ್ಲಿ ಅಭ್ಯರ್ಥಿಗಳ ಸೋಲು ಗೆಲುವಿನ ಮೇಲೆ ಬೆಟ್ಟಿಂಗ್ ಶುರುವಾಗಿದೆ.

ಚುನಾವಣೆ ವೇಳೆ ಬೆಟ್ಟಿಂಗ್ ಭೂತ ಬಾಯ್ತೆರೆದಿದೆ. ಈ ಕಾರಣಕ್ಕೆ ಇದೀಗ ಜೂಜು, ಬೆಟ್ಟಿಂಗ್ ಅಡ್ಡೆಗಳ ಮೇಲೆ ಸಿಸಿಬಿ ಪೊಲೀಸರು ಕಣ್ಗಾವಲು ಇಟ್ಟಿದ್ದು, ಬೆಟ್ಟಿಂಗ್ ಅಡ್ಡೆಗಳ ಮೇಲೆ ನಿಗಾವಹಿಸಲು ಹಿರಿಯ ಅಧಿಕಾ-ರಿಗಳಿಗೆ ಸೂಚನೆ ನೀಡಿದ್ದಾರೆ.

ವಿಧಾನಸಭೆ ಚುನಾವಣೆಯಲ್ಲಿ ಗೆಲುವು ಸೋಲುಗಳ ಬಗ್ಗೆ ಬೆಟ್ಟಿಂಗ್: ಮತದಾನಕ್ಕೆ ಇನ್ನು ಒಂದೇ ದಿನ ಬಾಕಿ ಇದ್ದು, ಈ ನಡುವೆ ಅಲ್ಲಲ್ಲಿ ಬೆಟ್ಟಿಂಗ್ ದಂಧೆ ಭರಾಟೆ ಜೋರಾಗಿದೆ. ಕೆಲವು ಪ್ರಮುಖ ಅಭ್ಯರ್ಥಿಗಳು, ದೊಡ್ಡ ಫೈಟ್ ಇರುವ ಕ್ಷೇತ್ರಗಳಲ್ಲಿ ಕೆಲವು ಆ್ಯಪ್ ಮೂಲಕ ಚುನಾವಣೆ ಬೆಟ್ಟಿಂಗ್ ನಡೆಯುತ್ತಿರುವ ಬಗ್ಗೆ ಸಿಸಿಬಿಗೆ ಮಾಹಿತಿ ಬಂದಿದೆ. ಈ ಮಾಹಿತಿ ಆಧರಿಸಿ ಸಿಸಿಬಿ ಪೊಲೀಸರು ಆ್ಯಪ್ಗಳ ಮೇಲೆ ಒಂದು ವಾರದಿಂದಲೇ ನಿಗಾ ಇರಿಸಿದ್ದಾರೆ. ಜೊತೆಗೆ ಕೆಲವು ವ್ಯಕ್ತಿಗಳ ಮೇಲೆಯೂ ನಿಗಾ ಇಡಲಾಗಿದೆ. ಚುನಾವಣೆಯಲ್ಲಿ ಬೆಟ್ಟಿಂಗ್ ಕಂಡು ಬಂದಲ್ಲಿ ಕಠಿಣ ಕ್ರಮಕ್ಕೆ ಪೊಲೀಸರು ನಿರ್ಧ-ರಿಸಿದ್ದಾರೆ.

## ವಿಭಿನ್ನ ರೀತಿಯ ಥೀಮ್ ಮತಗಟ್ಟೆಗಳ ಸ್ಥಾಪನೆ



ಬೆಂಗಳೂರು: ವಿಧಾನಸಭಾ ಚುನಾವಣೆಗೆ ಇನ್ನೊಂದು ದಿನ ಬಾಕಿಯಿದ್ದು, ರಾಜ್ಯದ ಮತಗಟ್ಟೆಗಳಲ್ಲಿ ಕೊನೇ ಹಂತದ ತಯಾರಿ ನಡೆದಿದೆ. ಮತದಾರರನ್ನು ಸೆಳೆಯಲು, ಪ್ರತೋಹಿಸುವ ನಿಟ್ಟಿನಲ್ಲಿ ಈ ಬಾರಿ ಚುನಾವಣಾ ಆಯೋಗ ರಾಜ್ಯ ರಾಜಧಾನಿ ಬೆಂಗಳೂ-ರಿನಲ್ಲಿ ವಿವಿಧ ರೀತಿಯ ಥೀಮ್ ಮತಗಟ್ಟೆಗಳನ್ನು ಸ್ಥಾಪಿಸಿದೆ.

ಬೆಂಗಳೂರಿನಲ್ಲಿ ಹಲವು ರೀತಿಯ ಮತಗಟ್ಟೆಗಳನ್ನು ನಿರ್ಮಿಸಲಾಗಿದ್ದು, ಮತಗಟ್ಟೆ ಬೂತ್ ಗಳು ಮತದಾರರನ್ನು ಆಕರ್ಷಿಸುತ್ತಿವೆ. 28 ಕ್ಷೇತ್ರಗಳಲ್ಲಿ 264 ಥೀಮ್ ಮತಗಟ್ಟೆಗಳನ್ನು ಚುನಾವಣಾ ಆಯೋಗ ಸ್ಥಾಪಿಸಿದೆ.

ಯುವ ಮತದಾರರನ್ನು ಪ್ರೋತ್ಸಾಹಿಸಲು ಯುವ ಮತಗಟ್ಟೆ, ಮಹಿಳಾ ಮತದಾರರನ್ನು ಪ್ರೋತ್ಸಾಹಿಸಲು ಸಖಿ ಪಿಂಕ್ ಮತಗಟ್ಟೆ, ಪರಿಸರ ಜಾಗೃತಿಗಾಗಿ ಹಸಿರು ಮತಗಟ್ಟೆ, ಸಿರಿಧಾನ್ಯ ಪ್ರೋತ್ಸಾಹಕ್ಕಾಗಿ ಸಿರುಧಾನ್ಯ ಮತಗಟ್ಟೆ, ವಿಶೇಷ ಚೇತನರಿಗಾಗಿ ವಿಶೇಷ ಚೇತನ ಮತಗಟ್ಟೆ, ಸಂಸ್ಕೃತಿ ಮತಗಟ್ಟೆ, ವಿಜ್ಞಾನ ಮತ್ತು ತಂತ್ರಜ್ಞಾನ ಮತಗಟ್ಟೆ, ಮಾಜಿ ಸೈನಿಕರ ಮತಗಟ್ಟೆ, ತೃತಿಯ ಲಿಂಗಿ ಮತಗಟ್ಟೆ, ಕ್ರೀಡಾ ಮತಗಟ್ಟೆ ಸೇರಿದಂತೆ ವಿವಿಧ ರೀತಿಯ ಮತಗಟ್ಟೆಗಳು ಗಮನ ಸೆಳೆಯುತ್ತಿವೆ.



## ಐಟಿ ಅಧಿಕಾರಿಗಳಿಗೆ ನನ್ನ ಮನೆಯಲ್ಲಿ ಏನೂ ಸಿಗಲಿಲ್ಲ: ರಾಬರ್ಟ್

ಧಾರವಾಡ: ಹುಬ್ಬಳ್ಳಿ, ಧಾರವಾಡ ಪಶ್ಚಿಮ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ದೀಪಕ ಚಿಂಚೋರೆ ಅವರ ಆಪ್ತ ರಾಬರ್ಟ್ ದದ್ದಾಪುರಿ ಅವರ ಮನೆ ಮೇಲೆ ನಿನ್ನೆಯಷ್ಟೇ ಆದಾಯ ತೆರಿಗೆ ಇಲಾಖೆ ಅಧಿಕಾರಿಗಳು ದಾಳಿ ನಡೆಸಿದ್ದರು.

ಈ ದಾಳಿಗೆ ಸಂಬಂಧಪಟ್ಟಂತೆ ಪ್ರತಿಕ್ರಿಯೆ ನೀಡಿರುವ ರಾಬರ್ಟ್ ದದ್ದಾಪುರಿ, ನಿನ್ನೆ ಸಂಜೆ ಐಟಿ ಅಧಿಕಾರಿಗಳು ನನ್ನ ಮನೆ ಮೇಲೆ ದಾಳಿ ನಡೆಸಿದ್ದರು. ಸುಮಾರು 2 ಗಂಟೆಗಳ ಕಾಲ ಎಲ್ಲವನ್ನೂ ತಪಾಸಣೆ ನಡೆಸಿದರು. ಅಧಿಕಾರಿಗಳು ನನ್ನೊಂದಿಗೆ ಚೆನ್ನಾಗಿಯೇ

ನಡೆದುಕೊಂಡರು. ನಾವು ಕೂಡ ಅವರಿಗೆ ಒಳ್ಳೆಯ ಸಹಕಾರ ಕೊಟ್ಟೆವು. ನಮ್ಮ ಮನೆಯಲ್ಲಿ ಯಾವುದೇ ಅಕ್ರಮ ಹಣ ಅವರಿಗೆ ಸಿಗಲಿಲ್ಲ. ಏನೂ ಸೀಜ್ ಮಾಡಲಿಲ್ಲ. ನನ್ನ ಮನೆ ಮೇಲೆ ಇದೇ ಮೊದಲ ಬಾರಿಗೆ ಐಟಿ ದಾಳಿಯಾಗಿದೆ ಎಂದರು.

ಇದೇ ತಿಂಗಳು 23ಕ್ಕೆ ಕಚೇರಿಗೆ ಬರಲು ಅಧಿಕಾರಿಗಳು ಹೇಳಿದ್ದಾರೆ. ಯಾವ ಪಕ್ಷದಲ್ಲಿದ್ದೀರಿ? ಎಲ್ಲಿ ಪ್ರಚಾರ ಮಾಡುತ್ತಿದ್ದೀರಿ? ಎಷ್ಟು ದಿನದಿಂದ ಪ್ರಚಾರ ಮಾಡುತ್ತಿದ್ದೀರಿ ಅಂತೆಲ್ಲ ಪ್ರಶ್ನೆ ಕೇಳಿದರು ಎಂದು ರಾಬರ್ಟ್ ದದ್ದಾಪುರಿ ಹೇಳಿದರು.

## 50 ಅಡಿ ಎತ್ತರದ ಸೇತುವೆಯಿಂದ ಕೆಳಗೆ ಬಿದ್ದ ಬಸ್ 15 ಜನರ ಸಾವು, 25 ಜನರಿಗೆ ಗಾಯ



ಮಧ್ಯಪ್ರದೇಶ: ದೋಣಿ ದುರಂತದಲ್ಲಿ 22 ಜನ ಸಾವಿಗೀಡಾದ ದುರ್ಘಟನೆ ಬೆನ್ನಲ್ಲೇ ಮಂಗಳವಾರ ಭೀಕರ ಬಸ್ ಅಪಘಾತದಲ್ಲಿ 15 ಮಂದಿ ಮೃತಪಟ್ಟು 25 ಮಂದಿ ಗಾಯಗೊಂಡಿರುವ ಘಟನೆ ಮಧ್ಯಪ್ರದೇಶದಲ್ಲಿ ನಡೆದಿದೆ.

ಅಂದಾಜು 70–80 ಪ್ರಯಾಣಿಕರನ್ನು ಹೊತ್ತೊಯ್ಯುತ್ತಿದ್ದ ಬಸ್ಸೊಂದು 50 ಅಡಿ ಸೇತುವೆಯಿಂದ ಕೆಳಗೆ ಬಿದ್ದ ದುರ್ಘಟನೆ ಮಧ್ಯಪ್ರದೇಶದ ಖಾರ್ಗೋನ್ ಜಿಲ್ಲೆಯಲ್ಲಿ ಸಂಭವಿಸಿದೆ.

50 ಅಡಿ ಎತ್ತರದ ಸೇತುವೆಯಿಂದ ಬಸ್ ಕೆಳಗೆ ಬಿದ್ದ ಪರಿಣಾಮ ಕನಿಷ್ಠ 15 ಜನರು ಸಾವನ್ನಪ್ಪಿದ್ದು, 25 ಜನರು ಗಾಯಗೊಂಡಿದ್ದಾರೆ ಎಂದು ಪೊಲೀಸ್ ವರಿಷ್ಠಾಧಿಕಾರಿ (ಎಸ್‌ಪಿ) ಧರಂ ವೀರ್ ಸಿಂಗ್ ಹೇಳಿದ್ದಾರೆ.

ಇನ್ನು ಈ ದುರ್ಘಟನೆಯಲ್ಲಿ ಮೃತರಾದವರಲ್ಲಿ 6 ಮಂದಿ ಮಹಿಳೆಯರು ಮತ್ತು ಮೂವರು ಮಕ್ಕಳು ಸೇರಿದ್ದಾರೆ ಎಂದು ವರದಿ ತಿಳಿಸಿದೆ.

ಈ ಘಟನೆ ಹಿನ್ನಲೆಯಲ್ಲಿ ಮಧ್ಯಪ್ರದೇಶ ಸರ್ಕಾರ ಮೃತರ ಕುಟುಂಬಗಳಿಗೆ ತಲಾ 4 ಲಕ್ಷ ತಕ್ಷಣದ ಆರ್ಥಿಕ ನೆರವು ಘೋಷಿಸಿದೆ. ಅಲ್ಲದೆ, ಗಂಭೀರವಾಗಿ ಗಾಯಗೊಂಡವರಿಗೆ ತಲಾ 50,000 ಹಾಗೂ ಸಣ್ಣಪುಟ್ಟ ಗಾಯಗೊಂಡವರಿಗೆ 25,000 ನೀಡಲಾಗುವುದು ಎಂದು ಘೋಷಿಸಿದೆ.

## ರಾಜ್ಯಾದ್ಯಂತ 145 ಕೋಟಿ ರೂ. ನಗದು ಜಪ್ತಿ



ಬೆಂಗಳೂರು: ಚುನಾವಣಾ ನೀತಿ ಸಂಹಿತೆ ಜಾರಿಯಾದ ಬಳಿಕ 145 ಕೋಟಿ ನಗದು, 375 ಕೋಟಿ ರೂ. ಮೌಲ್ಯದ ವಸ್ತುಗಳನ್ನು ಜಪ್ತಿ ಮಾಡಲಾಗಿದೆ ಎಂದು ಚುನಾವಣಾ ಅಧಿಕಾರಿ ತಿಳಿಸಿದ್ದಾರೆ.

ರಾಜ್ಯದಲ್ಲಿ ಮತದಾನಕ್ಕೆ ಒಂದು ದಿನವಷ್ಟೇ ಬಾಕಿಯಿದೆ. ಚುನಾವಣಾ ಆಯೋಗದ ಹದ್ದಿನ ಕಣ್ಣು ತಪ್ಪಿಸಿ ಅಕ್ರಮಗಳು ಸಾಕಷ್ಟು ನಡೆಯುತ್ತಿವೆ. ಆದ-'ರೂ ಚುನಾವಣಾ ಅಧಿಕಾರಿಗಳು ದಾಳಿ ನಡೆಸಿ ಕಂತೆ ಕಂತೆ ಕೋಟಿ ಕೋಟಿ ಹಣ ಸೀಜ್ ಮಾಡಿದ್ದಾರೆ. ಜೊತೆಗೆ ಮದ್ಯ, ಬೆಳ್ಳಿ, ಬಂಗಾರ, ಕುಕ್ಕರ್ ಸೇ-ರಿದಂತೆ ಇತರೆ ವಸ್ತುಗಳನ್ನು ವಶಕ್ಕೆ ಪಡೆದಿದ್ದಾರೆ. ಅದೇ ರೀತಿ ಈಗಾಗಲೇ ವಶಕ್ಕೆ ಪಡೆದುಕೊಂಡ ವಸ್ತುಗಳನ್ನು 2018ರ ಚುನಾವಣೆಗೆ ಹೋಲಿಸಿದರೇ ಈ ಬಾರಿ ಶೇ. 100ರಷ್ಟು ಹೆಚ್ಚಾಗಿದೆ.

**ಚುನಾವಣಾ ಆಯೋಗದ ರಣಬೇಟೆ**

- ನಗದು ಸೀಜ್–145.46 ಕೋಟಿ ರೂ.
- ಉಚಿತ ಕೊಡುಗೆಗಳ ಮೌಲ್ಯ–24.21 ಕೋಟಿ ರೂ.
- ವಶಕ್ಕೆ ಪಡೆದ ಮದ್ಯದ ಮೌಲ್ಯ–83.66 ಕೋಟಿ ರೂ.
- ವಶಕ್ಕೆ ಪಡೆದ ಡ್ರಗ್ಸ್ ಮೌಲ್ಯ–33.66 ಕೋಟಿ ರೂ.
- ಸೀಜ್ ಚಿನ್ನಾಭರಣ ಮೌಲ್ಯ–96.59 ಕೋಟಿ ರೂ.
- ವಶಕ್ಕೆ ಪಡೆದ ವಸ್ತುಗಳ ಮೌಲ್ಯ–375.60ಕೋಟಿ ರೂ.

## ಬಿಜೆಪಿಗೆ ನೋಟಿಸ್ ಜಾರಿ

ನವದೆಹಲಿ: 'ವಿಶ್ವದ ಅತೀ ಭ್ರಷ್ಟ ಪಕ್ಷ ಕಾಂಗ್ರೆಸ್' ಎಂದು ಮಾಧ್ಯಮಗಳಲ್ಲಿ ಜಾಹೀರಾತು ನೀಡಿದ್ದಕ್ಕೆ ಚುನಾವಣಾ ಆಯೋಗವು ಬಿಜೆಪಿಗೆ ನೋಟಿಸ್ ಜಾರಿಗೆ ಮಾಡಿದೆ.

ಮಂಗಳವಾರ ಸಂಜೆಯ ಒಳಗಾಗಿ ಈ ಜಾಹೀರಾತಿಗೆ ಸಂಬಂಧಿಸಿ 'ಪರಿಶೀಲಿಸಬಹುದಾದ ಮತ್ತು ಪತ್ತೆಹಚ್ಚಬಹುದಾದ' ಸಾಕ್ಷ್ಯಗಳನ್ನು ಒದಗಿಸಬೇಕು ಎಂದು ನೋಟಿಸ್‌ನಲ್ಲಿ ತಿಳಿಸಲಾಗಿದೆ.

ಬಿಜೆಪಿ ನೀಡಿದ ಜಾಹೀರಾತು ಸಂಬಂಧ, ಕಾಂಗ್ರೆಸ್ ಪಕ್ಷವು ಚುನಾವಣಾ ಆಯೋಗಕ್ಕೆ ದೂರು ನೀಡಿತ್ತು.

ಎದುರಾಳಿ ಪಕ್ಷಗಳ ನೀತಿ ಮತ್ತು ಆಡಳಿತ ಸರ್ಕಾರದ ವಿರುದ್ಧ ಟೀಕೆಯು ರಾಜಕೀಯ ಪಕ್ಷಗಳ ಸಂವಿಧಾನದತ್ತವಾದ ಹಕ್ಕು ಮಾತ್ರವಲ್ಲದೇ, ಭಾರತದ ಚುನಾವಣಾ ಪ್ರಕ್ರಿಯೆಯ ಅಡಿಯಲ್ಲಿ ವಿವಿಧ ರಾಜಕೀಯ ಪಕ್ಷಗಳ ಕೆಲಸವಾಗಿದೆ ಎಂದು ಹೇಳಿರುವ ಚುನಾವಣಾ ಆಯೋಗವು, ಈ ಹಕ್ಕನ್ನು ಚಲಾಯಿಸುವಾಗ ರಾಜಕೀಯ ಪಕ್ಷಗಳು ಸಾರ್ವಜನಿಕ ಸಂವಾದದ ಉನ್ನತ ಗುಣಮಟ್ಟವನ್ನು ಎತ್ತಿಹಿಡಿಯಬೇಕು ಎಂದಿದೆ. ಅಲ್ಲದೆ ಮಾದರಿ ನೀತಿ ಸಂಹಿತೆಯ ವಿವಿಧ ನಿಬಂಧನೆಗಳು ಮತ್ತು ಸಂಬಂಧಿತ ಕಾನೂನುಗಳಿಗೆ ಬದ್ಧವಾಗಿರಬೇಕು ಎಂದು ಸೂಚಿಸಿದೆ.

ಅಲ್ಲದೇ ಈ ಸಂಬಂಧ ಸಾಕ್ಷ್ಯಗಳನ್ನು ಮೇ 9ರ ರಾತ್ರಿ 8 ಗಂಟೆಯ ಒಳಗೆ ನೀಡಬೇಕು. ಜತೆಗೆ ಅದನ್ನು ಸಾರ್ವಜನಿಕಗೊಳಿಸಬೇಕು ಎಂದು ಹೇಳಿದೆ.

ಒಂದು ವೇಳೆ ಸಾಕ್ಷ್ಯ ನೀಡಲು ವಿಫಲವಾಗಿದ್ದೇ ಆದ-'ಲ್ಲಿ, ಬಿಜೆಪಿ ವಿರುದ್ಧ ಮಾದರಿ ನೀತಿ ಸಂಹಿತೆ ಹಾಗೂ ಭಾರತೀಯ ದಂಡ ಸಂಹಿತೆಯಡಿ ಯಾಕೆ ಕ್ರಮ ತೆಗೆದುಕೊಳ್ಳಬಾರದು ಎಂದು ನೋಟಿಸ್‌ನಲ್ಲಿ ಆಯೋಗವು ಪ್ರಶ್ನೆ ಮಾಡಿದೆ.

## ಜೆಡಿಎಸ್ ಅಭ್ಯರ್ಥಿ ನಿವಾಸದ ಮೇಲೆ ಐಟಿ ದಾಳಿ

ಚಿತ್ರದುರ್ಗ: ವಿಧಾನಸಭಾ ಚುನಾವಣೆಗೆ ಕ್ಷಣಗಣನೆ ಆರಂಭವಾಗಿದೆ. ಇದೇ ಸಂದರ್ಭದಲ್ಲಿ ಜೆಡಿಎಸ್ ಅಭ್ಯರ್ಥಿ ರವೀಂದ್ರಪ್ಪ ನಿವಾಸದ ಮೇಲೆ ಐಟಿ ಅಧಿಕಾರಿಗಳು ದಿಢೀರ್ ದಾಳಿ ನಡೆಸಿದ್ದಾರೆ.

ಚಿತ್ರದುರ್ಗ ಜಿಲ್ಲೆ ಹಿರಿಯೂರು ಕ್ಷೇತ್ರದ ಜೆಡಿಎಸ್ ಅಭ್ಯರ್ಥಿಯಾಗಿರುವ ರವೀಂದ್ರಪ್ಪ ಮನೆ ಮೇಲೆ ಐಟಿ ಅಧಿಕಾರಿಗಳು ದಾಳಿ ನಡೆಸಿದ್ದಾರೆ.

6 ಅಧಿಕಾರಿಗಳು ದಾಖಲೆಗಳ ಪರಿಶೀಲನೆ ನಡೆಸಿದ್ದಾರೆ.

ರವೀಂದ್ರಪ್ಪ ಮನೆ ಮೇಲೆ ಇತ್ತೀಚೆಗೆ ನಡೆದ ಎರಡನೇ ಐಟಿ ದಾಳಿ ಇದಾಗಿದೆ. ಏಪ್ರಿಲ್ 28ರಂದು ಕೂಡ ರವೀಮ್ದ್ರಪ್ಪ ನಿವಾಸದ ಮೇಲೆ ತೆರಿಗೆ ಇಲಾಖೆ ಅಧಿಕಾರಿಗಳು ದಾಳಿ ನಡೆಸಿದ್ದರು.

## ರಾಜ್ಯಾದ್ಯಂತ 224 ಕ್ಷೇತ್ರಗಳಿಗೆ ಮತದಾನ

### ಮತದಾರರಿಗೆ ಇಲ್ಲಿದೆ ಪ್ರಮುಖ ಮಾಹಿತಿ

ಬೆಂಗಳೂರು : ಬಹುನಿರೀಕ್ಷಿತ ಕರ್ನಾಟಕ ವಿಧಾನಸಭೆ ಚುನಾವಣೆಗೆ ಮೇ. 10 ರ ಇಂದು ಮತದಾನ ನಡೆಯಲಿದ್ದು, ಈಗಾಗಲೇ ಬಹಿರಂಗ ಪ್ರಚಾರಕ್ಕೆ ತೆರೆಬಿದ್ದಿದೆ.

ಮೇ. 10 ರ ನಾಳೆ ರಾಜ್ಯಾದ್ಯಂತ ಒಂದೇ ಹಂತದಲ್ಲಿ 224 ಕ್ಷೇತ್ರಗಳಿಗೆ ಮತದಾನ ನಡೆಯಲಿದ್ದು, 1.56 ಲಕ್ಷ ಪೊಲೀಸರು ಬಿಗಿ ಭದ್ರತೆ ನಿಯೋಜಿಸಲಾಗಿದೆ.

ಒಟ್ಟು 304 ಡಿವೈಎಸ್ ಪಿಗಳು, 991 ಪಿಐಗಳು, 2610 ಪಿಎಸ್ ಐಗಳು, 5803 ಎಎಸ್ ಐಗಳು,46, 421 ಪೊಲೀಸರು, 27,900 ಗೃಹ ರಕ್ಷಕರು ಸೇ-ರಿದಂತೆ 84.119 ಅಧಿಕಾರಿಗಳು ಹಾಗೂ ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆ. ಜೊತೆಗೆ ಹೊರ ರಾಜ್ಯಗಳಿಂದ 8,500 ಅಧಿಕಾರಿ, ಸಿಬ್ಬಂದಿ ಹಾಗೂ ಗೃಹ ರಕ್ಷಕರನ್ನು ನೇಮಿಸಲಾಗಿದೆ.

ಮತದಾನ ಮಾಡಲು ವೋಟರ್ ಐಡಿ ಇಲ್ಲದಿದ್ದರೆ, ಈ ದಾಖಲೆ ತೋರಿಸಿ ವೋಟ್ ಮಾಡಬಹುದು

ಕರ್ನಾಟಕ ವಿಧಾನಸಭಾ ಸಾರ್ವತ್ರಿಕ ಚುನಾವಣೆಗೆ ಸಂಬಂಧಿಸಿದಂತೆ ಮೇ.10 ರಂದು ಮತದಾನ ನಡೆಯಲಿದ್ದು, ಚುನಾವಣಾ ಗುರುತಿನ ಚೀಟಿ (ಎಪಿಕ್ ಕಾರ್ಡ್) ಹಾಗೂ ಭಾರತ ಚುನಾವಣಾ ಆಯೋಗ ನಿಗಧಿಪಡಿಸಿರುವ ಪರ್ಯಾಯ ದಾಖಲೆಗಳಲ್ಲಿ ಯಾವುದಾದರೂ ಒಂದನ್ನು ಹಾಜರುಪಡಿಸಿ ಮತ ಚಲಾಯಿಸಲು ಅವಕಾಶ ಕಲ್ಪಿಸಲಾಗಿದೆ ಚುನಾವಣಾಧಿಕಾರಿಗಳು ತಿಳಿಸಿದ್ದಾರೆ.

ಮತದಾರರು ಮತ ಚಲಾಯಿಸಲು ಮತಗಟ್ಟೆಗಳಿಗೆ ಹೋದ ಸಂದರ್ಭದಲ್ಲಿ ಅವರು ಹೊಂದಿರುವ ಮತದಾರರ ಭಾವಚಿತ್ರವುಳ್ಳ ಗುರುತಿನ ಚೀಟಿಯನ್ನು ಹಾಜರುಪಡಿಸಬೇಕು.

ಒಂದು ವೇಳೆ ಅದನ್ನು ಹಾಜರುಪಡಿಸಲು ಸಾಧ್ಯವಿಲ್ಲದಿದ್ದಲ್ಲಿ ಈ ಕೆಳಕಂಡ ಯಾವುದಾದರೂ ಒಂದು ಪರ್ಯಾಯ ದಾಖಲಾತಿಯನ್ನು ಮತದಾರರನ್ನು ಗುರುತಿಸುವುದಕ್ಕಾಗಿ ಹಾಜರು ಪಡಿಸಬಹುದಾಗಿದೆ.

**ಮತದಾನ ಮಾಡಲು ಬೇಕಾಗುವ ಪರ್ಯಾಯ ದಾಖಲೆಗಳು**

ಆಧಾರ್ ಕಾರ್ಡ್

ಎಂಎನ್‌ಆರ್‌ಇಜಿಎ ಜಾಬ್ ಕಾರ್ಡ್ ಬ್ಯಾಂಕ್

ಅಂಚೆ ಕಚೇರಿ ನೀಡಿದ ಭಾವಚಿತ್ರವಿರುವ ಪಾಸ್ಬುಕ್ಗಳು

ಕಾರ್ಮಿಕ ಸಚಿವಾಲಯದ ಯೋಜನೆಯಡಿ ನೀಡಲಾದ ಆರೋಗ್ಯ ವಿಮಾ ಸ್ಮಾರ್ಟ್ ಕಾರ್ಡ್

ಡ್ರೈವಿಂಗ್ ಲೈಸನ್ಸ್, ಪಾನ್ ಕಾರ್ಡ್

ಎನ್ಪಿಆರ್ ಅಡಿಯಲ್ಲಿ ಆರ್‌ಜಿಐ ನೀಡಿದ ಸ್ಮಾರ್ಟ್ ಕಾರ್ಡ್

ಭಾರತೀಯ ಪಾಸ್ಪೋರ್ಟ್

ಭಾವಚಿತ್ರದೊಂದಿಗೆ ಪಿಂಚಣಿ ದಾಖಲೆ

ರಾಜ್ಯ, ಕೇಂದ್ರ ಸರ್ಕಾರದ ಸಾರ್ವಜನಿಕ ಉದ್ದಿಮೆಗಳು ತಮ್ಮ ನೌಕರರಿಗೆ ನೀಡಿರುವ ಸೇವಾ ಗುರುತಿನ ಚೀಟಿ

ಸಂಸದರು, ವಿಧಾನಸಭಾ ಸದಸ್ಯರು, ವಿಧಾನ ಪರಿಷತ್ ಸದಸ್ಯರುಗಳಿಗೆ ನೀಡಿರುವ ಅಧಿಕೃತ ಗುರುತಿನ ಚೀಟಿಗಳು

ಅಂಗವಿಕಲರ ಗುರುತಿನ ಚೀಟಿ (ಯುಡಿಐಡಿ ಕಾರ್ಡ್) ಪತ್ರದ ಮೂಲ ಪ್ರತಿಗಳನ್ನು ಮತದಾನದ ವೇಳೆ ಪರ್ಯಾಯ ದಾಖಲೆಗಳನ್ನಾಗಿ ಬಳಸಬಹುದು.

## ಸಿದ್ದರಾಮಯ್ಯ ಹೆಸರಿನಲ್ಲಿ ನಕಲಿ ಪತ್ರ: ಕ್ರಮಕ್ಕೆ ಕಾಂಗ್ರೆಸ್ ಆಗ್ರಹ




ಬೆಂಗಳೂರು: ವಿರೋಧ ಪಕ್ಷದ ನಾಯಕರಾದ ಸಿದ್ದರಾಮಯ್ಯ ಅವರು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಬರೆದಿರುವಂತೆ ನಕಲಿ ಪತ್ರ ಸೃಷ್ಟಿಸಿ, ಸಾಮಾಜಿಕ ಮಾಧ್ಯಮಗಳಲ್ಲಿ ಹರಿಬಿಟ್ಟಿರುವವರ ವಿರುದ್ಧ ಚುನಾವಣಾ ಆಯೋಗ ಕ್ರಮ ಜರುಗಿಸಬೇಕೆಂದು ರಾಜ್ಯ ಕಾಂಗ್ರೆಸ್ ಆಗ್ರಹಿಸಿದೆ.

ಈ ನಕಲಿ ಪತ್ರ ಕುರಿತು ಪ್ರತಿಕ್ರಿಯಿಸಿರುವ ಕಾಂಗ್ರೆಸ್, "ಸೋಲಿನ ಭೀತಿಯಿಂದ ಬಿಜೆಪಿ ತನ್ನ ಫೇಕ್ ಫ್ಯಾಕ್ಟರಿಗೆ ಹೆಚ್ಚಿನ ಕೆಲಸ ನೀಡಿದೆ. ಬಿಜೆಪಿಯ ನಕಲಿ ಮೋರ್ಚಾ ಪ್ರತಿ ಪಕ್ಷದ ನಾಯಕ ಸಿದ್ದರಾಮಯ್ಯ ಅವರ ಹೆಸರಲ್ಲಿ ನಕಲಿ ಪತ್ರ ಸೃಷ್ಟಿಸಿ ಸಾಮಾಜಿಕ ಜಾಲತಾಣಗಳಲ್ಲಿ ಹ-ರಿಬಿಟ್ಟಿದ್ದಾರೆ. ಸರ್ಕಾರಿ ಲೆಟರ್ ಹೆಡ್, ಹಾಗೂ ಸಿದ್ದರಾಮಯ್ಯನವರ ಸಹಿ ನಕಲು ಮಾಡಿದ್ದು ಗಂಭೀರ ಅಪರಾಧ. ಚುನಾವಣಾ ಆಯೋಗ ಹಾಗೂ ಪೊಲೀಸರು ಸಾಮಾಜಿಕ ಜಾಲತಾಣಗಳಲ್ಲಿ ಹಂಚಿದವರೆಲ್ಲರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು"ಎಂದು ಒತ್ತಾಯಿಸಿದೆ.

ನಕಲಿ ಪತ್ರದ ಕುರಿತು ಆಕ್ರೋಶ ವ್ಯಕ್ತಪಡಿಸಿರುವ ಸಿದ್ದರಾಮಯ್ಯ, "ಸೋಲಿನ ಭೀತಿಯಿಂದ ಹತಾಶೆಗೀಡಾಗಿರುವ ಬಿಜೆಪಿ ನನ್ನ ಹೆಸರಿನ ಖೊಟ್ಟಿ ಪತ್ರವನ್ನು ರಚಿಸಿ ಅಪಪ್ರಚಾರ ಮಾಡುತ್ತಿದೆ. ಇಂತಹ ಯಾವ ಪತ್ರವನ್ನೂ ನಾನು ಬರೆದಿಲ್ಲ"ಎಂದು ಸ್ಪಷ್ಟನೆ ನೀಡಿದ್ದಾರೆ.

"ಪಕ್ಷದ ಕಾರ್ಯಕರ್ತರು ಮತ್ತು ಅಭಿಮಾನಿಗಳು ಈ ಸುಳ್ಳು ಪ್ರಚಾರಕ್ಕೆ ಬಲಿಯಾಗಬಾರದು. ನನ್ನ ಮತ್ತು ಡಿ.ಕೆ ಶಿವಕುಮಾರ್ ಸಂಬಂಧ ಸೌಹಾರ್ದಯುತವಾಗಿದೆ, ಇದಕ್ಕೆ ಹುಳಿ ಹಿಂಡುವ ಪ್ರಯತ್ನ ಯಶಸ್ಸು ಕಾಣಲಾರದು. ಶೀಘ್ರದಲ್ಲಿಯೇ ಪೊಲೀಸರಿಗೆ ದೂರು ನೀಡಿ ಈ ಕಿಡಿಗೇಡಿತನದ ಪತ್ರ ಸೃಷ್ಟಿಸಿ ಹಂಚುತ್ತಿರುವವರ ವಿರುದ್ಧ ಕ್ರಮಕೈಗೊಳ್ಳಲು ಒತ್ತಾಯಿಸಲಿದ್ದೇನೆ" ಎಂದಿದ್ದಾರೆ.

**ನಕಲಿ ಪತ್ರದಲ್ಲಿ ಏನಿದೆ?**

ಕಳೆದ ಮೂರು ವರ್ಷದಿಂದ ವಿರೋಧ ಪಕ್ಷದ ನಾಯಕನಾಗಿ ಪ್ರಾಮಾಣಿಕವಾಗಿ ಹೋರಾಟ ಮಾಡಿದ್ದೇನೆ. ಅದರಲ್ಲೂ ಚುನಾವಣೆ ವರ್ಷದಲ್ಲಿ ಅವಕಾಶ ಸಿಕ್ಕಲ್ಲೆಲ್ಲಾ ಬೊಮ್ಮಾಯಿ ಸರ್ಕಾರವನ್ನು ಇಕ್ಕಟ್ಟಿಗೆ ಸಿಲುಕಿರುವ ಪ್ರಯತ್ನ ಮಾಡಿದ್ದೇನೆ. ಮಾಜಿ ಮುಖ್ಯಮಂತ್ರಿಯಾಗಿ ವಿರೋಧ ಪಕ್ಷದ ನಾಯಕಕ್ಕಾಗಿ ಪಕ್ಷಕ್ಕಾಗಿ ನಿಷ್ಠೆಯಿಂದ ನಡೆದುಕೊಂಡು ಬಂದಿದ್ದೇನೆ. ಪಕ್ಷ ನನಗೆ ಸ್ಥಾನಮಾನಗಳನ್ನು ನೀಡಿ ಗೌರವಿಸಿದೆ. ಕಾಂಗ್ರೆಸ್ ಪಕ್ಷಕ್ಕೆ ನಾನು ಜೀವನಪರ್ಯಂತ ಆಭಾರಿಯಾಗಿ ರುತ್ತೇನೆ. ಈ ಭಾರಿ ಮತ್ತೊಮ್ಮೆ ಕರ್ನಾಟಕದಲ್ಲಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರಬೇಕು, ರಾಹುಲ್ ಗಾಂಧಿಯವರನ್ನು ಪ್ರಧಾನಿ ಮಾಡಲು ಅವರ ಕೈ ಬಲಪಡಿಸಬೇಕೆಂಬ ಇಚ್ಛೆ ಅಗಾಧವಾಗಿವೆ.

# ನಾರಾ ಭರತ್‌ರೆಡ್ಡಿ, ಬಿ.ನಾಗೇಂದ್ರನ ಹೆಚ್ಚಿನ ಬಹುಮತದಿಂದ ಆರಿಸಿ ತನ್ನಿ: ಮಲ್ಲಿಕಾರ್ಜುನ ಖರ್ಗೆ



ಬಳ್ಳಾರಿ: ಬಿಜೆಪಿ ಸರಕಾರವನ್ನು ಕಿತ್ತೆಸೆದು ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತನ್ನಿ, ಕಾಂಗ್ರೆಸ್ ಪಕ್ಷಕ್ಕೆ ನಿಮ್ಮ ಮತ ಜನರಿಗೆ ಹಿತ ವೆಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಕರೆ ನೀಡಿದರು. ಈ ಬಾರಿಯ ಚುನಾವಣೆ ಅತ್ಯಂತ ಮಹತ್ವ ಪಡೆದಿದ್ದು, ಕೆಟ್ಟ, 40% ಸರ್ಕಾರವನ್ನು ದೂರಮಾಡಿ ಎಂದರು. ಬಳ್ಳಾರಿ ನಗರ ಅಭ್ಯರ್ಥಿ ನಾರಾ ಭರತ್‌ರೆಡ್ಡಿ ಮತ್ತು ಗ್ರಾಮೀಣ ಕ್ಷೇತ್ರದ ಬಿ.ನಾಗೇಂದ್ರರವರನ್ನು ಹೆಚ್ಚಿನ ಬಹುಮತದಿಂದ ಆರಿಸಿ ತರಬೇಕೆಂದು ಮತದಾರರಲ್ಲಿ ಮನವಿ ಮಾಡಿದರು.

ಬಳ್ಳಾರಿ ನಗರದಲ್ಲಿ ಸೋಮವಾರ ಸಂಜೆ ಕೌಲ್ ಬಜಾರ್ ಪ್ರದೇಶದಲ್ಲಿ ಹಮ್ಮಿಕೊಂಡಿದ್ದ ಈ ಚುನಾವಣೆಯ ಬಹಿರಂಗ ಪ್ರಚಾರದ ಕೊನೆಯ ಸಭೆಯಲ್ಲಿ ಪಾಲ್ಗೊಂಡು ಮಾತನಾಡುತ್ತಿದ್ದರು. ಈ ಭಾಗಕ್ಕೆ 371(ಜೆ) ಕಾಯ್ದೆಯನ್ನು ಜಾರಿಗೆ ತರಲಾಗಿದೆ. ಇದರಿಂದ ಬಳ್ಳಾರಿ ಸೇರಿ ಕಲ್ಯಾಣ ಕರ್ನಾಟಕ ಭಾಗದ ಏಳು ಜಿಲ್ಲೆಗಳಿಗೆ ಅನುಕೂಲವಾಗಿದ್ದು, ವೈದ್ಯಕೀಯ, ಇಂಜಿನೀಯರಿಂಗ್, ನರ್ಸಿಂಗ್ ವಿದ್ಯಾರ್ಥಿಗಳಿಗೆ ಹೆಚ್ಚಿನ ಅನುಕೂಲವಾಗಿದೆ. ಕಾಂಗ್ರೆಸ್ ಅಧಿಕಾರಕ್ಕೆ ಬಂದಲ್ಲಿ ಇನ್ನಷ್ಟು ಯೋಜನೆಗಳನ್ನು ಜಾರಿಗೆ ತರಲು ಅನುಕೂಲವಾಗಲಿದೆಂದರು. ಪ್ರಧಾನಿ ಮೋದಿಯವರು ಬರೀ ಸುಳ್ಳು ಹೇಳುತ್ತಾರೆ. ಖಾತೆಗೆ ಹದಿನೈದು ಲಕ್ಷ ಹಾಕುವುದಾಗಿ ಹೇಳಿದ್ದರು, ವರ್ಷಕ್ಕೆ ಎರಡು ಕೋಟಿ ಉದ್ಯೋಗ ಕೊಡುವುದಾಗಿಯೂ ಹೇಳಿದ್ದರು. ಇಲ್ಲಿಯವರೆಗೂ ಯಾವುದನ್ನೂ ಸಹ ನೀಡಿಲ್ಲ ಎಂದು ಮಳೆಯಲ್ಲೇ ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದರು.

ಕಾಂಗ್ರೆಸ್ ಪಕ್ಷ ಐದು ಗ್ಯಾರೆಂಟಿ ಯೋಜನೆಗಳನ್ನು ಈಗಾಗಲೇ ಘೋಷಿಸಿದೆಂದು ವಿವರಿಸಿದರು. ಪಕ್ಷದ ಅಭ್ಯರ್ಥಿ ಬಿ.ನಾಗೇಂದ್ರ ಮಾತನಾಡಿ, ಅಭಿವೃದ್ಧಿ ಎನ್ನುತ್ತ ಬಳ್ಳಾರಿಯನ್ನು ಲೂಟಿ ಹೊಡೆದವರಿಗೆ ಮತಹಾಕಬೇಡಿ.ನೀವು ಕಾಂಗ್ರೆಸ್ ಪಕ್ಷಕ್ಕೆ ನೀಡುವ ಒಂದೊಂದು ಮತ ಅವರ ಮುಖಕ್ಕೆ ಹೊಡೆದಂತಾಗಬೇಕು ಎಂದರು. ರಾಜ್ಯಸಭೆ ಸದಸ್ಯ ಡಾ. ಸೈಯದ್ ನಾಸೀರ್ ಹುಸೇನ್ ಮಾತನಾಡಿದರು. ಕೆಪಿಸಿಸಿ ಮಾಜಿ ಅಧ್ಯಕ್ಷ ಅಲ್ಲಂ ವೀರಭದ್ರಪ್ಪ, ಜೆ.ಎಸ್. ಆಂಜನೇಯಲು, ಪಾಲಿಕೆ ಮೇಯರ್ ಡಿ.ತ್ರಿವೇಣಿ, ಹಿರಿಯ ಮುಖಂಡ ಮುಂಡ್ರಿಗಿ ನಾಗರಾಜ್, ಎ.ಮಾನಯ್ಯ, ಮಾಜಿ ಉಪಮೇಯರ್ ಬೆಣಕಲ್ ಬಸವರಾಜ,ಹುಮಯುನ್ ಖಾನ್ ಮತ್ತಿತರರು ಉಪಸ್ಥಿತರಿದ್ದರು.

# ನಾಲ್ಕು ತಿಂಗಳಿನಿಂದ ರಾಜ್ಯದ ಅಂಗನವಾಡಿ ಕೇಂದ್ರಗಳಿಗೆ ಹಾಲಿನ ಪುಡಿ ಪೂರೈಕೆ ಆಗಿಲ್ಲ: ಎಐಡಿಎಸ್‌ಓ

ಬಳ್ಳಾರಿ: ಕಳೆದ ಮೂರು ನಾಲ್ಕು ತಿಂಗಳಿಂದ ರಾಜ್ಯದ ಅಂಗನವಾಡಿ ಕೇಂದ್ರಗಳಿಗೆ ಸರ್ಕಾರದಿಂದ ಹಾಲಿನ ಪುಡಿ ಪೂರೈಕೆ ಆಗಿಲ್ಲ. ಮಕ್ಕಳಲ್ಲಿನ ಅಪೌಷ್ಟಿಕತೆ ನಿವಾರಣೆಗೆ ಹಾಲಿನ ಸೇವನೆಯು ಅತ್ಯವಶ್ಯಕವಾಗಿದೆ. ಸರ್ಕಾರದ ಈ ಲೋಪವು ರಾಜ್ಯದಲ್ಲಿ ಪೂರ್ವ ಪ್ರಾಥಮಿಕ ಶಿಕ್ಷಣ ಪಡೆಯುತ್ತಿರುವ 36 ಲಕ್ಷಕ್ಕೂ ಹೆಚ್ಚು ಮಕ್ಕಳನ್ನು ಹಾಗೂ 6 ಲಕ್ಷಕ್ಕೂ ಹೆಚ್ಚು ಗರ್ಭಿಣಿ ಹಾಗೂ ಬಾಣಂತಿಯರನ್ನು ಹಾಲಿನಿಂದ ವಂಚಿತರನ್ನಾಗಿಸಿದೆ.

ಈಗಾಗಲೇ ಸರ್ಕಾರವು ಅವಶ್ಯಕತೆ ಇರುವುದಕ್ಕಿಂತ 5 ಪಟ್ಟು ಕಡಿಮೆ ಹಾಲಿನ ಪುಡಿಯನ್ನು ಪೂರೈಕೆ ಮಾಡುತ್ತಿದೆ. ಮೂರರಿಂದ ಆರು ವರ್ಷದ ಒಳಗಿನ ಒಂದು ಮಗುವಿನ ಸಮರ್ಪಕ ಬೆಳವಣಿಗೆಗೆ ದಿನಕ್ಕೆ ಕನಿಷ್ಟ 450 ಮಿಲಿ ಲೀಟರ್ ಹಾಲಿನ ಅವಶ್ಯಕತೆ ಇದೆ. ಅಂದರೆ 70 ಗ್ರಾಂ ಹಾಲಿನ ಪೌಡರ್ ಬದಲಿಗೆ ಸರ್ಕಾರ ನೀಡುತ್ತಿರುವುದು 15 ಗ್ರಾಂ ಮಾತ್ರ! ಬಡತನ ಮತ್ತು ಆರ್ಥಿಕ ಬಿಕ್ಕಟಿನಿಂದಾಗಿ ರಾಜ್ಯದಲ್ಲಿ ಅಪೌಷ್ಟಿಕತೆಯ ಪ್ರಮಾಣ ಹೆಚ್ಚಿದೆ. ನಮ್ಮ ದೇಶದಲ್ಲಿ ಪ್ರತಿದಿನ ಹಸಿವು ಮತ್ತು ಅಪೌಷ್ಟಿಕತೆಯಿಂದಾಗಿ 5000ಕ್ಕೂ ಹೆಚ್ಚು ಮಕ್ಕಳು ಸಾವನ್ನಪ್ಪುತ್ತಿದ್ದಾರೆ. ಮಕ್ಕಳ ಪೌಷ್ಟಿಕಾಂಶಗಳ ಪೂರೈಕೆಗಾಗಿ ಲಕ್ಷಾಂತರ ಕುಟುಂಬಗಳು ಅಂಗನವಾಡಿ ಕೇಂದ್ರಗಳ ಮೇಲೆ ಅವಲಂಬಿತವಾಗಿವೆ.

ಇಂತಹ ಪರಿಸ್ಥಿತಿಯಲ್ಲಿ ಸರ್ಕಾರವು ಕೃತಕವಾಗಿ ಹಾಲಿನ ಪುಡಿ ಕೊರತೆಯನ್ನು 'ಜಾನುವಾರು ರೋಗ'ದ ನೆಪದಲ್ಲಿ ಹುಟ್ಟು ಹಾಕುತ್ತಿದೆ. ಹಾಗಾದಾಗ, ಹಾಲಿನ ಪುಡಿಯ ಪೂರೈಕೆಯನ್ನು ಖಾಸಗಿ ಸಂಸ್ಥೆಯಾದ ಅಮೂಲ್ ವಹಿಸಿಕೊಂಡು, ಮಾರುಕಟ್ಟೆಗೆ ಪ್ರವೇಶ ಮಾಡಲು ನೇರವಾಗಿ ಸರ್ಕಾರವೇ ಸಹಾಯ ಮಾಡುತ್ತಿದೆ ಎಂಬ ಗುಮಾನಿಯು ಜನಸಾಮಾನ್ಯರನ್ನು ಕಾಡುತ್ತಿದೆ. ಏಕಾಏಕಿ ಹಾಲಿನ ಪುಡಿ ಪೂರೈಕೆ ನಿಲ್ಲಿಸಿರುವುದು ಸರ್ಕಾರವು ಮಕ್ಕಳಿಗೆ ಮಾಡಿರುವ ದ್ರೋಹ ಎಂದೇ ನಾವು ಭಾವಿಸುತ್ತೇವೆ.ಹಾಲಿನ ಕೊರತೆಯು ಲಕ್ಷಾಂತರ ಮಕ್ಕಳ ಬೆಳವಣಿಗೆಯನ್ನು ಕುಂಠಿತಗೊಳಿಸುತ್ತದೆ. ಒಂದು ವೇಳೆ ರಾಜ್ಯದಲ್ಲಿ ಹಾಲಿನ ಪೂರೈಕೆಯಲ್ಲಿ ಕೊರತೆ ಇದ್ದರೆ ನೆರೆ ರಾಜ್ಯಗಳ ನೆರವು ಪಡೆಯಬಹುದು. ಒಟ್ಟಾರೆ ಪರಿಸ್ಥಿತಿಯ ತೀವ್ರತೆಯನ್ನು ಅರಿತು ಕೂಡಲೇ ಹಾಲಿನ ಪುಡಿ ಪೂರೈಕೆ ನಿಲ್ಲಬಾರದು, ಈ ಕೂಡಲೇ ರಾಜ್ಯದ ಅಂಗನವಾಡಿ ಕೇಂದ್ರಗಳಿಗೆ ಹಾಲಿನ ಪುಡಿ ಪೂರೈಸಬೇಕೆಂದು ಎಐಡಿಎಸ್‌ಓ ವಿದ್ಯಾರ್ಥಿ ಸಂಘಟನೆಯು ಸರ್ಕಾರವನ್ನು ಆಗ್ರಹಿಸುತ್ತದೆ.

# ಶಾಂತಿ, ಸುವ್ಯವಸ್ಥೆ ಪಾಲನೆಗೆ ಸಲಹೆ




ಕೊಪ್ಪಳ: ಯಲಬುರ್ಗಾ ವಿಧಾನಸಭಾ ಕ್ಷೇತ್ರದ ಎಲ್ಲಾ 256 ಮತಗಟ್ಟೆಗಳಲ್ಲಿ ಎಲ್ಲ ರೀತಿಯ ಮೂಲಸೌಕರ್ಯಗಳನ್ನು ಕಲ್ಪಿಸಿ ಮೇ 10 ರಂದು ನಡೆಯುವ ಚುನಾವಣೆಗೆ ಸಿದ್ದಪಡಿಸಿಟ್ಟುಕೊಂಡಿರಬೇಕು ಎಂದು ಯಲಬುರ್ಗಾ ಕ್ಷೇತ್ರ ಚುನಾವಣಾಧಿಕಾರಿಗಳಾದ ಕಾವ್ಯರಾಣಿ ಕೆ.ವಿ ಅವರು ಹೇಳಿದರು.

ಯಲಬುರ್ಗಾ ಚುನಾವಣಾಧಿಕಾರಿಗಳ ಕಾರ್ಯಾಲಯದಲ್ಲಿ ಮೇ 07ರಂದು ನಡೆದ ವಿವಿಧ ಅಧಿಕಾರಿಗಳು ಹಾಗೂ ಪಿಡಿಓ, ಕಂದಾಯ ನಿರೀಕ್ಷಕರು, ಗ್ರಾಮ ಆಡಳಿತಾಧಿಕಾರಿಗಳ ಸಭೆಯಲ್ಲಿ ಅವರು ಮಾತನಾಡಿದರು.

ಯಲಬುರ್ಗಾ ವಿಧಾನಸಭಾ ಚುನಾವಣಾ ವ್ಯಾಪ್ತಿಯ ಮತಗಟ್ಟೆಗಳಲ್ಲಿ ಮೇ 10 ರಂದು ನಡೆಯುವ ಚುನಾವಣೆಯ ದಿನ ಮತದಾರರಿಗೆ ಕುಡಿಯುವ ನೀರು, ನೆರಳು, ವಾಹನ, ವ್ಹೀಲ್ ಚೇರ್ ಮುಂತಾದವುಗಳಿಗೆ ಪಿಡಿಓಗಳು ವ್ಯವಸ್ಥೆ ಮಾಡಿಕೊಂಡಿರಬೇಕು. ಯಾವುದೇ ರೀತಿಯ ಸಮಸ್ಯೆ ಕಂಡುಬಂದಲ್ಲಿ ಕೂಡಲೇ ಚುನಾವಣಾಧಿಕಾರಿಗಳ ಗಮನಕ್ಕೆ ತರಬೇಕು ಎಂದರು.

ಮೇ 10 ರಂದು ಮತದಾನ ಜರುಗಲಿದ್ದು, ಮುಕ್ತ ಹಾಗೂ ನ್ಯಾಯ ಸಮ್ಮತ ಚುನಾವಣೆ ಜರುಗಿಸುವ ಸಂಬಂಧವಾಗಿ ಪ್ರಜಾ ಪ್ರಾತಿನಿಧ್ಯ ಕಾಯ್ದೆ 1951ರ 126ನೇ ಪ್ರಕರಣ ಮೇರೆಗೆ ಮತದಾನ ಮುಕ್ತಾಯ ಮಾಡಲು ನಿಗಧಿಪಡಿಸಿದ ಸಮಯ ಕೊನೆಗೊಳ್ಳುವ 48 ಗಂಟೆ ಅವಧಿಯಲ್ಲಿ ರಾಜಕೀಯ ಪಕ್ಷಗಳ ಬಹಿರಂಗ ಪ್ರಚಾರ ಮೆರವಣಿಗೆ ಅಂತ್ಯಗೊಳ್ಳುತ್ತದೆ.

ಮಾದರಿ ನೀತಿ ಸಂಹಿತೆ ಜಾರಿಯಾಗುತ್ತಿರುವುದರಿಂದ ಹಾಗೂ 144 ಸೆಕ್ಷನ್ ಜಾರಿ ಇರುವುದರಿಂದ ಮೇ 08 ರಿಂದ ಮೇ ಹತ್ತರ ರಾತ್ರಿ 11 ಗಂಟೆವರೆಗೆ ನಿಷೇಧಾಜ್ಞೆ ಜಾರಿಯಲ್ಲಿರುತ್ತದೆ. ಆ ಹಿನ್ನೆಲೆಯಲ್ಲಿ ಎಲ್ಲೂ ಕೂಡ ಐದು ಜನಕ್ಕಿಂತ ಹೆಚ್ಚು ಜನರು ಸೇರುವಂತಿಲ್ಲ. ಮದ್ಯ ಮಾರಾಟ ಬಂದ್ ಮಾಡಲಾಗಿರುತ್ತದೆ. ಒಂದು ವೇಳೆ ಆ ರೀತಿ ಮಾರಾಟ ಕಂಡುಬಂದಲ್ಲಿ ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತರಬೇಕು ಎಂದರು.

ಈ ವೇಳೆ ಸಹಾಯಕ ಚುನಾವಣಾಧಿಕಾರಿಗಳಾದ ವಿಠಲ್ ಚೌಗಲೆ, ಕುಕನೂರ ತಾಲೂಕು ತಹಶೀಲ್ದಾರ್ ರಾದ ನೀಲಪ್ರಭಾ, ಯಲಬುರ್ಗಾ ತಾಲೂಕು ಸ್ವೀಪ್ ಸಮಿತಿ ಅಧ್ಯಕ್ಷರಾದ ಸಂತೋಷ ಪಾಟೀಲ್ ಬಿರಾದಾರ್, ಯಲಬುರ್ಗಾ ಪಟ್ಟಣ ಮುಖ್ಯಾಧಿಕಾರಿಗಳಾದ ಪ್ರಕಾಶ ಮಠದ, ಆರ್. ಐ, ವಿ.ಎ ಮತ್ತು ಪಿಡಿಓರವರು ಹಾಜರಿದ್ದರು.

# ಮತಗಟ್ಟೆಗಳತ್ತ ತೆರಳಿದ ಸಿಬ್ಬಂದಿ: ಇಂದಿನ ಮತದಾನ ಕಾರ್ಯಕ್ಕೆ ಸಕಲ ಸಜ್ಜು

ಬಳ್ಳಾರಿ: ವಿಧಾನಸಭೆ ಸಾರ್ವತ್ರಿಕ ಚುನಾವಣೆ ಪ್ರಕ್ರಿಯೆಯಲ್ಲಿ ಜಿಲ್ಲೆಯ ಬಳ್ಳಾರಿ ನಗರ, ಬಳ್ಳಾರಿ ಗ್ರಾಮೀಣ ಹಾಗೂ ಕಂಪ್ಲಿ ವಿಧಾನಸಭಾ ಕ್ಷೇತ್ರಗಳಿಗೆ ಸಂಬಂಧಿಸಿದ ಮತಗಟ್ಟೆ ಸಿಬ್ಬಂದಿಗಳಿಗೆ ಮತ ಯಂತ್ರಗಳು ಹಾಗೂ ಚುನಾವಣಾ ಸಾಮಗ್ರಿಯನ್ನು ವಿತರಿಸುವ ಪ್ರಮುಖ ಘಟ್ಟವಾಗಿರುವ ಮಸ್ಟರಿಂಗ್ ಕಾರ್ಯ ಬಳ್ಳಾರಿ ನಗರದ ವಿವಿಧೆಡೆ ಮಂಗಳವಾರದಂದು ಅಚ್ಚುಕಟ್ಟಾಗಿ ನೆರವೇರಿದ್ದು, ಮತದಾನ ಕರ್ತವ್ಯಕ್ಕೆ ನಿಯೋಜಿತಗೊಂಡ ಅಧಿಕಾರಿ, ಸಿಬ್ಬಂದಿ ಮತಗಟ್ಟೆಗಳತ್ತ ತೆರಳಿದರು.

91–ಕಂಪ್ಲಿ ವಿಧಾನಸಭಾ ಮತಕ್ಷೇತ್ರದ ಮಸ್ಟರಿಂಗ್ ಕಾರ್ಯ ನಗರದ ಸುಧಾಕ್ರಾಸ ಸೆಂಟ್ ಫಿಲೋಮಿನಾಸ್ ಹೈಸ್ಕೂಲ್ ಆವರಣದಲ್ಲಿ ನಡೆಯಿತು, ಚುನಾವಣಾಧಿಕಾರಿ ಡಾ. ನಯನ ಅವರು ಸ್ಥಳದಲ್ಲಿಯೇ ಉಪಸ್ಥಿತರಿದ್ದು, ಮಸ್ಟರಿಂಗ್ ಕಾರ್ಯ ಸುಗಮವಾಗಿ ನಡೆಯಲು ವ್ಯವಸ್ಥೆಗೊಳಿಸಿದ್ದರು. 93–ಬಳ್ಳಾರಿ ಗ್ರಾಮೀಣ ವಿಧಾನಸಭಾ ಮತಕ್ಷೇತ್ರದ ಮಸ್ಟರಿಂಗ್ ಕಾರ್ಯ ನಗರದ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜ್ ಆವರಣದಲ್ಲಿ ನೆರವೇರಿತು, ಚುನಾವಣಾಧಿಕಾರಿ ಹೇಮಂತ್ ಅವರು ಸ್ಥಳದಲ್ಲಿಯೇ ಹಾಜರಿದ್ದು, ಮಸ್ಟರಿಂಗ್ ಕಾರ್ಯ ವ್ಯವಸ್ಥಿತವಾಗಿ ನಡೆಯುವಂತೆ ನೋಡಿಕೊಂಡರು. ಇನ್ನು 94–ಬಳ್ಳಾರಿ ನಗರ ವಿಧಾನಸಭಾ ಮತಕ್ಷೇತ್ರದ ಮಸ್ಟರಿಂಗ್ ಕಾರ್ಯ ನಗರದ ಕೋಟೆ ಪ್ರದೇಶದ ಸೆಂಟ್ ಜಾನ್ಸ್ ಕಂಪೋಸಿಟ್ ಜ್ಯೂನಿಯರ್ ಕಾಲೇಜ್‌ನಲ್ಲಿ ಮಂಗಳವಾರ ಅಚ್ಚುಕಟ್ಟಾಗಿ ಜರುಗಿತು. ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಝುಬೇರಾ, ಚುನಾವಣಾಧಿಕಾರಿ ರುದ್ರೇಶ್ ಅವರು ಬೆಳಿಗ್ಗೆಯಿಂದಲೇ ಹಾಜರಿದ್ದು, ಮಸ್ಟರಿಂಗ್ ಕಾರ್ಯ ಪೂರ್ಣಗೊಳ್ಳುವವರೆಗೂ ಮೇಲುಸ್ತುವಾರಿ ವಹಿಸಿದ್ದರು.



ಮತಗಟ್ಟೆಗಳಿಗೆ ನೇಮಕಗೊಂಡಿರುವ ಅಧಿಕಾರಿ, ಸಿಬ್ಬಂದಿಗಳು ಬೆಳಿಗ್ಗೆ 9 ಗಂಟೆಯ ಹೊತ್ತಿಗೆ ಮಸ್ಟರಿಂಗ್ ಕಾರ್ಯ ಜರುಗುವ ಕಾಲೇಜುಗಳ ಆವರಣದಲ್ಲಿ ಸೇರತೊಡಗಿದರು. ಇದರ ಜೊತೆಗೆ ಚುನಾವಣೆ ಕಾರ್ಯ ಹಾಗೂ ಮತಗಟ್ಟೆಯ ಬಂದೋಬಸ್ತಗಾಗಿ ನಿಯೋಜಿತಗೊಂಡಿರುವ ಪೊಲೀಸರು, ಸಿಆರ್‌ಪಿಎಫ್ ಯೋಧರು, ಗೃಹರಕ್ಷಕದಳದವರು ಕೂಡ ಆಗಮಿಸಿದ್ದರು. ಮತದಾನ ಪ್ರಕ್ರಿಯೆಗೆ ತೆರಳುವ ಅಧಿಕಾರಿ, ಸಿಬ್ಬಂದಿ ಹಾಗೂ ಪೊಲೀಸರು, ಯೋಧರನ್ನು ಕರೆದುಕೊಂಡು ಹೋಗಲು ಬಸ್, ಕ್ರೂಸರ್ ಹಾಗೂ ಜೀಗಳು ಕಾಲೇಜುಗಳ ಆವರಣದಲ್ಲಿ ಸಾಲಾಗಿ ಜಮಾವಣೆಗೊಂಡಿದ್ದವು. ಆಯಾ ವಿಧಾನಸಭಾ ಕ್ಷೇತ್ರಗಳ ಗ್ರಾಮಗಳಲ್ಲಿನ ಮತಗಟ್ಟೆಗಳತ್ತ ತೆರಳುವಂತಹ ಮಾರ್ಗಗಳನ್ನು ಗುರುತಿಸಿ, ಬಸ್, ಕ್ರೂಸರ್ ಹಾಗೂ ಮಿನಿ ಬಸ್ ಮುಂತಾದ ವಾಹನಗಳನ್ನು ನಿಯೋಜಿಸಲಾಗಿತ್ತು. ಕಾಲೇಜು ಆವರಣದಲ್ಲಿ ಅಧಿಕಾರಿ, ಸಿಬ್ಬಂದಿಗಳಿಗೆ ತಾವು ತೆರಳಬೇಕಿರುವ ಮತಗಟ್ಟೆಯ ವಿವರ ಹಾಗೂ ಬಸ್‌ಗಳ ವಿವರವನ್ನು ಧ್ವನಿವರ್ಧಕ ಮೂಲಕ ತಿಳಿಸುವ ವ್ಯವಸ್ಥೆ ಮಾಡಲಾಗಿತ್ತು. ಇನ್ನೊಂದೆಡೆ, ಮತಗಟ್ಟೆ ಅಧಿಕಾರಿ, ಸಿಬ್ಬಂದಿಗಳಿಗೆ ಚುನಾವಣಾ ಸಾಮಗ್ರಿ, ಇವಿಎಂ ಯಂತ್ರಗಳ ಪೆಟ್ಟಿಗೆ, ವಿವಿ ಪ್ಯಾಟ್ ಯಂತ್ರದ ಪೆಟ್ಟಿಗೆ ಹಾಗೂ ವಿಶೇಷ ಕಿಟ್ ಬ್ಯಾಗ್ ಅನ್ನು ವಿತರಿಸಲು ಸೆಕ್ಟರ್‌ವಾರು ಕೌಂಟರ್‌ಗಳನ್ನು ಸ್ಥಾಪಿಸಿ, ಆ ಮೂಲಕ ಸಂಬಂಧಪಟ್ಟ ಮತಗಟ್ಟೆಗಳ ಸಿಬ್ಬಂದಿಗೆ ಚುನಾವಣಾ ಸಾಮಗ್ರಿ ವಿತರಿಸುವ ಕಾರ್ಯ ವ್ಯವಸ್ಥಿತವಾಗಿ ಕೈಗೊಳ್ಳಲಾಯಿತು. ಯಾವುದೇ ಅಧಿಕಾರಿ, ಸಿಬ್ಬಂದಿಗಳಿಗೆ ಗೊಂದಲಕ್ಕೆ ಆಸ್ಪದವಿಲ್ಲದಂತೆ, ಮಸ್ಟರಿಂಗ್ ಕಾರ್ಯಕ್ಕೆ ಅಚ್ಚುಕಟ್ಟಾದ ವ್ಯವಸ್ಥೆಯನ್ನು ಕೈಗೊಳ್ಳಲಾಯಿತು. ಮಸ್ಟರಿಂಗ್ ಕಾರ್ಯಕ್ಕೆ ಆಗಮಿಸಿದ ಅಧಿಕಾರಿ, ಸಿಬ್ಬಂದಿಗಳ ಆರೋಗ್ಯದಲ್ಲಿ ವ್ಯತ್ಯಯ ಉಂಟಾದಲ್ಲಿ, ತ್ವರಿತ ಸ್ಪಂದನೆಗಾಗಿ, ಆಂಬುಲೆನ್ಸ್ ವ್ಯವಸ್ಥೆ ಮಾಡಲಾಗಿತ್ತು.

*ಮಾರ್ಗದರ್ಶನ ಮಾಡಿದ ಡಿಸಿ:* ಮಸ್ಟರಿಂಗ್ ಕಾರ್ಯ ಜರುಗಿದ ಕಾಲೇಜುಗಳ ಆವರಣಕ್ಕೆ ಬೆಳಿಗ್ಗೆಯೇ ಆಗಮಿಸಿದ ಜಿಲ್ಲಾಧಿಕಾರಿ ಪವನ್ ಕುಮಾರ್ ಮಾಲಪಾಟಿ ಅವರು, ಮಸ್ಟರಿಂಗ್ ಕಾರ್ಯದ ಸಮಗ್ರ ವಿವರವನ್ನು ಪಡೆದುಕೊಂಡರು, ಮತಗಟ್ಟೆ ಅಧಿಕಾರಿ, ಸಿಬ್ಬಂದಿಗಳೊಂದಿಗೆ ಮಾತನಾಡಿದ ಜಿಲ್ಲಾಧಿಕಾರಿಗಳು, ಯಾವುದೇ ಆತಂಕವಿಲ್ಲದೆ, ಧೈರ್ಯದಿಂದ ಹಾಗೂ ಪ್ರಾಮಾಣಿಕತೆಯಿಂದ ಚುನಾವಣಾ ಕರ್ತವ್ಯ ನಿರ್ವಹಿಸುವಂತೆ ನೈತಿಕ ಸ್ಥೈರ್ಯ ತುಂಬಿದರು.

*ಅಚ್ಚುಕಟ್ಟಾದ ವ್ಯವಸ್ಥೆ:* ನಗರದ ವಿವಿಧ ಶಾಲಾ ಕಾಲೇಜು ಆವರಣದಲ್ಲಿ ಏರ್ಪಡಿಸಲಾದ ಮಸ್ಟರಿಂಗ್ ಕಾರ್ಯ ಯಶಸ್ವಿಯಾಗಿ, ಯಾವುದೇ ಗೊಂದಲಕ್ಕೆ ಆಸ್ಪದವಿಲ್ಲದಂತೆ ನೆರವೇರಿಸಲು ಪೂರ್ವಭಾವಿಯಾಗಿ ಯೋಜನೆ ರೂಪಿಸಿ, ಅದರಂತೆಯೇ ಕಾರ್ಯಗತಗೊಳಿಸಲಾಯಿತು. ಚುನಾವಣಾ ಸಾಮಗ್ರಿ ವಿತರಣೆ, ಮತಯಂತ್ರಗಳ ವಿತರಣೆ, ಚುನಾವಣೆಗೆ ಮತಗಟ್ಟೆಗಳಿಗೆ ನಿಯೋಜನೆ, ಚುನಾವಣಾ ಕರ್ತವ್ಯಕ್ಕೆ ತೆರಳಲು ಆಗಮಿಸಿದ್ದ ಅಧಿಕಾರಿ, ಸಿಬ್ಬಂದಿಗಳಿಗೆ ಕಾಲೇಜು ಆವರಣದಲ್ಲಿ ಕುಡಿಯುವ ನೀರು, ನೆರಳಿನ ವ್ಯವಸ್ಥೆ ಹಾಗೂ ಉಟೋಪಹಾರದ ವ್ಯವಸ್ಥೆ ಕೈಗೊಳ್ಳಲಾಯಿತು. ಮತಗಟ್ಟೆಗಳತ್ತ ತೆರಳುವ ಮುನ್ನ ಮಧ್ಯಾಹ್ನದ ಊಟ ಪೂರೈಸಿಕೊಂಡು ಹೋಗುವ ರೀತಿ ವ್ಯವಸ್ಥೆ ಮಾಡಲಾಯಿತು. ಮಧ್ಯಾಹ್ನದ ಊಟಕ್ಕೆ ಚಪಾತಿ, ಬದನೆಕಾಯಿ ಪಲ್ಯೆ, ಅನ್ನ ಸಾಂಬಾರ್ ಜೊತೆಗೆ, ಮೈಸೂರ್‌ಪಾಕ್ ಮತ್ತು ಜಿಲೇಬಿ ಸಿಹಿ ತಿನಿಸಿನ ವ್ಯವಸ್ಥೆ ಮಾಡಲಾಗಿತ್ತು. ಊಟದ ವಿತರಣೆ ಸ್ಥಳದಲ್ಲಿ ಗೊಂದಲ ಉಂಟಾಗದಂತೆ, ಸಾಕಷ್ಟು ಸಂಖ್ಯೆಯಲ್ಲಿ ಕೌಂಟರ್‌ಗಳನ್ನು ತೆರೆದು, ಸರದಿ ಸಾಲಿನಲ್ಲಿ ಬಂದು ಊಟ ಸ್ವೀಕರಿಸಲು ವ್ಯವಸ್ಥೆಗೊಳಿಸಲಾಗಿತ್ತು. ಮತದಾನ ಕಾರ್ಯಕ್ಕೆ ನೇಮಕಗೊಂಡಿರುವ ಹಲವು ಅಧಿಕಾರಿ, ಸಿಬ್ಬಂದಿಗಳೂ ಕೂಡ ಮಸ್ಟರಿಂಗ್ ಕಾರ್ಯಕ್ಕೆ ಕೈಗೊಂಡ ವ್ಯವಸ್ಥೆ ಬಗ್ಗೆ ತೃಪ್ತಿ ವ್ಯಕ್ತಪಡಿಸಿದರು. ಮಧ್ಯಾಹ್ನದ ಊಟ ಸವಿದ ಅಧಿಕಾರಿ, ಸಿಬ್ಬಂದಿಗಳು, ತಮಗೆ ನಿಯೋಜಿಸಲಾದ ಮತಗಟ್ಟೆಗಳಿಗೆ ಆಯಾ ಮಾರ್ಗದ ವಾಹನಗಳ ಮೂಲಕ ತೆರಳಿದರು.

*1222 ಮತಗಟ್ಟೆಗಳು:* ಜಿಲ್ಲೆಯಲ್ಲಿ ಗ್ರಾಮೀಣ ವ್ಯಾಪ್ತಿಯಲ್ಲಿ 676 ಮತಗಟ್ಟೆ ಕೇಂದ್ರ, ನಗರ, ಪಟ್ಟಣ ಪ್ರದೇಶದಲ್ಲಿ 515 ಮತಗಟ್ಟೆ ಕೇಂದ್ರಗಳು ಸೇರಿ ಒಟ್ಟು 1,222 ಮತಗಟ್ಟೆ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಕಂಪ್ಲಿ–240, ಸಿರುಗುಪ್ಪ–227, ಬಳ್ಳಾರಿ ಗ್ರಾಮೀಣ–242, ಬಳ್ಳಾರಿ ನಗರ–262 ಹಾಗೂ ಸಂಡೂರು ಕ್ಷೇತ್ರದಲ್ಲಿ 251 ಮತಗಟ್ಟೆಗಳಿವೆ.

ಜಿಲ್ಲೆಯ 5 ವಿಧಾನಸಭಾ ಮತಕ್ಷೇತ್ರಗಳ ವ್ಯಾಪ್ತಿಯಲ್ಲಿ ಒಟ್ಟು 295 ಸೂಕ್ಷ್ಮ ಹಾಗೂ 73 ಮತಗಟ್ಟೆಗಳನ್ನು ಅತಿಸೂಕ್ಷ್ಮ ಎಂದು ಗುರುತಿಸಲಾಗಿದೆ. ಜಿಲ್ಲೆಯ ಐದು ವಿಧಾನಸಭಾ ಕ್ಷೇತ್ರಗಳ 1,222 ಮತಗಟ್ಟೆಗಳಿಗೆ 2445 (ಬ್ಯಾಲೆಟ್ ಯುನಿಟ್), 1716 (ಕಂಟ್ರೋಲ್ ಯುನಿಟ್) ಮತ್ತು 1857 (ವಿ.ವಿ.ಪ್ಯಾಟ್) ಗಳನ್ನು ಬಳಸಲಾಗುತ್ತಿದೆ. ಜಿಲ್ಲೆಯ ಒಟ್ಟು 1,222 ಮತಗಟ್ಟೆಗಳ ಪೈಕಿ 700 ಮತಗಟ್ಟೆಗಳಿಗೆ ಅಂದರೆ ಶೇ. 50 ಕ್ಕಿಂತ ಹೆಚ್ಚು ಮತಗಟ್ಟೆಗಳಲ್ಲಿ ವೆಬ್‌ಕಾಸ್ಟಿಂಗ್ ವ್ಯವಸ್ಥೆ ಮಾಡಿ, ಸಿಸಿ ಟಿವಿ ಕ್ಯಾಮೆರಾ ಮೂಲಕ ನೇರವಾಗಿ ಲೈವ್ ವಿಡಿಯೋ ನೋಡಲು ವ್ಯವಸ್ಥೆ ಮಾಡಿಕೊಳ್ಳಲಾಗಿದೆ.

# ಹಾರೋಗೇರಿ ಗ್ರಾಮದಲ್ಲಿ ಗಾಳಿ ವಿದ್ಯುತ್ ಫ್ಯಾನಗೆ ಸಿಡಿಲು ಬಡಿದು ಬೆಂಕಿ



ಮುಂಡರಗಿ: ಮುಂಡರಗಿ ತಾಲೂಕಿನ ಹಾರೋಗೇರಿ ಗ್ರಾಮದ ಸರಹತ್ತಿನಲ್ಲಿರುವ ಕಪ್ಪತಗುಡ್ಡದಲ್ಲಿರುವ ಸುಜಿಲೋನ್ ಕಂಪನಿಯ ಗಾಳಿ ಉತ್ಪಾದಿಸುವ ಪ್ಯಾನಿಗೆ ಮಧ್ಯಾಹ್ನ 3 ಗಂಟೆಯ ಸುಮಾರಿಗೆ ಸಿಡಿಲು ಬಡಿದು ಬೆಂಕಿ ತಗಲಿ ಪ್ಲಾನಿನ ರೆಕ್ಕೆಗಳು ಸುಟ್ಟು ಹೋಗಿವೆ.

ನಂತರ ಅಗ್ನಿಶಾಮಕ ದಳ ಬರುವ ವೇಳೆದಾಗಲೇ ಬೆಂಕಿ ನಂದಿದ್ದು ಯಾವುದೇ ಪ್ರಾಣ ಅಪಾಯ ಸಂಬವಿಸಿಲ್ಲ ಫ್ಯಾನಿನ ಎರಡು ರೆಕ್ಕೆಗಳು ಸುಟ್ಟು ಹೋಗಿವೆ.

# ಬಳ್ಳಾರಿ ನಗರ ವಿಧಾನಸಭಾ ಚುನಾವಣೆ: ವಯೋವೃದ್ಧರು, ವಿಕಲಚೇತನರಿಗೆ ಮತದಾನ ಮಾಡಲು ವಾಹನ ವ್ಯವಸ್ಥೆ: ರುದ್ರೇಶ್



ಬಳ್ಳಾರಿ: ಕರ್ನಾಟಕ ಸಾರ್ವತ್ರಿಕ ವಿಧಾನಸಭೆ ಚುನಾವಣೆ–2023ರ ಅಂಗವಾಗಿ ಮೇ 10 ರಂದು ನಡೆಯುವ ಮತದಾನ ದಿನದಂದು 94–ಬಳ್ಳಾರಿ ನಗರ ವಿಧಾನಸಭಾ ಕ್ಷೇತ್ರದ ನಗರ ವ್ಯಾಪ್ತಿಯಲ್ಲಿ ಬರುವ ಮತದಾರರ ಪೈಕಿ ವಯೋವೃದ್ದರು, ನಿಶ್ಯಕ್ತಿ ಹೊಂದಿರುವವರು ಮತ್ತು ವಿಶೇಷ ಚೇತನರರು ಮನೆಯಿಂದ ಮತಗಟ್ಟೆಗೆ ಬಂದು ಮತ ಹಾಕಿ ಹೋಗಲು ಆಗದಿರುವವರಿಗೆ ಮಹಾನಗರ ಪಾಲಿಕೆಯಿಂದ ವಾಹನ ವ್ಯವಸ್ಥೆ ಮಾಡಲಾಗಿದೆ.

ಮೇ 10 ರಂದು ನಡೆಯುವ ಮತದಾನ ದಿನದಂದು ಬೆಳಗ್ಗೆ 07 ರಿಂದ ಸಂಜೆ 06 ರವರೆಗೆ ವಾಹನ ವ್ಯವಸ್ಥೆ ಕಲ್ಪಿಸಲಾಗಿದ್ದು, ವಾಹನಗಳು ಮಹಾನಗರ ಪಾಲಿಕೆ ಆವರಣದಲ್ಲಿ ಇರುತ್ತವೆ. ಅರ್ಹ ಮತದಾರರು ಮನೆಯಿಂದ ಮತಗಟ್ಟೆಗೆ ಬಂದು ಮತಹಾಕಲು ಬಯಸಿದಲ್ಲಿ ಈ ಕೆಳಕಂಡ ವ್ಯಕ್ತಿಗಳ ದೂರವಾಣಿ ಸಂಖ್ಯೆಗಳಿಗೆ ಕರೆ ಮಾಡಬಹುದು.

*ಸಂಪರ್ಕಿಸಬೇಕಾದ ವ್ಯಕ್ತಿಗಳ ವಿವರ:*ಸಲಾಂಸಾಬ್ ಅವರ ಮೊ.7411799678, ಶಾಂತಿ ಅವರ ಮೊ.8884328120, ರೂಪ ಅವರ ಮೊ.9035042385 ಹಾಗೂ ಮಹಾಂತೇಶ್ ಅವರ ಮೊ.8073484060 ಗೆ ಇವರನ್ನು ಸಂಪರ್ಕಿಸಿದರೆ ವಾಹನ ಮೂಲಕ ತಮ್ಮ ಮನೆಯಿಂದ ಮತಗಟ್ಟೆ ಕರೆದುಕೊಂಡು ಹೋಗಿ ಮತದಾನದ ನಂತರ ನೇರವಾಗಿ ಮನೆಗೆ ತಲುಪಿಸುತ್ತಾರೆ ಎಂದು ಬಳ್ಳಾರಿ ನಗರ ವಿಧಾನಸಭಾ ಕ್ಷೇತ್ರ ಚುನಾವಣಾಧಿಕಾರಿ ಎಸ್. ಎನ್.ರುದ್ರೇಶ್ ಅವರು ತಿಳಿಸಿದ್ದಾರೆ.

# ಮಸ್ಟರಿಂಗ್ ಕೇಂದ್ರಗಳಿಗೆ ಜಿಲ್ಲಾಧಿಕಾರಿಗಳ ಭೇಟಿ: ಪರಿಶೀಲನೆ

ಕೊಪ್ಪಳ : ಜಿಲ್ಲಾಧಿಕಾರಿಗಳಾದ ಎಂ.ಸುಂದರೇಶಬಾಬು ಅವರು ಮೇ 9ರಂದು ಕೊಪ್ಪಳ ವಿಧಾನಸಭಾ ಕ್ಷೇತ್ರದ ಮಸ್ಟರಿಂಗ್ ಕೇಂದ್ರಕ್ಕೆ ಭೇಟಿ ನೀಡಿದ ನಂತರ ಕುಷ್ಟಗಿ, ಕನಕಗಿರಿ, ಗಂಗಾವತಿ ಮತ್ತು ಯಲಬುರ್ಗಾ ವಿಧಾನಸಭಾ ಕ್ಷೇತ್ರಗಳಿಗೆ ಸಹ ಭೇಟಿ ನೀಡಿ ಮಸ್ಟರಿಂಗ್ ಪ್ರಕ್ರಿಯೆಯ ಬಗ್ಗೆ ಖುದ್ದು ಪರಿಶೀಲಿಸಿದರು.

ಮತಯಂತ್ರ ಸೇರಿದಂತೆ ಎಲ್ಲಾ ಚುನಾವಣಾ ಸಾಮಗ್ರಿಗಳನ್ನು ಸುವ್ಯವಸ್ಥಿತವಾಗಿ ಮತಗಟ್ಟೆಗೆ ತೆಗೆದುಕೊಂಡು ಹೋಗಿ ಮೇ.10ರಂದು ಮತದಾನವು ಶಾಂತಿಯುತವಾಗಿ ನಡೆಸುವ ಮಹತ್ವದ ಜವಾಬ್ದಾರಿಯನ್ನು ಭಾರತ ಚುನಾವಣಾ ಆಯೋಗದ ಮಾರ್ಗಸೂಚಿಯಂತೆ ಪ್ರತಿಯೊಬ್ಬರು ಅಚ್ಚುಕಟ್ಟಾಗಿ ಕಾರ್ಯನಿರ್ವಹಿಸಬೇಕು ಎಂದು ಎಲ್ಲಾ ಮತಗಟ್ಟೆ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಸೂಚಿಸಿದರು.



ಕುಷ್ಟಗಿ ವಿಧಾನಸಭಾ ಕ್ಷೇತ್ರದ ಮಸ್ಟರಿಂಗ್ ಕೇಂದ್ರ ಸರಕಾರಿ ಪ್ರಥಮ ದರ್ಜೆ ಕಾಲೇಜಿಗೆ ಜಿಲ್ಲಾಧಿಕಾರಿಗಳು ಭೇಟಿ ನೀಡಿ ಪರಿಶೀಲಿಸಿದರು. 319 ಪಿಆರ್‌ಓಗಳು, 320 ಎಪಿಆರ್‌ಓಗಳು, 659 ಪಿಓಗಳು 278 ಮತಗಟ್ಟೆಗಳಿಗೆ 49 ವಿವಿಧ ವಾಹನಗಳ ಮೂಲಕ ತೆರಳುವ ವ್ಯವಸ್ಥೆ ಮಾಡಲಾಗಿದೆ ಎಂದು ಕುಷ್ಟಗಿ ಕ್ಷೇತ್ರ ಚುನಾವಣಾಧಿಕಾರಿ ಚಿದಾನಂದ ಅವರು ಜಿಲ್ಲಾಧಿಕಾರಿಗಳಿಗೆ ಮಾಹಿತಿ ನೀಡಿದರು.

ಜಿಲ್ಲಾಧಿಕಾರಿಗಳು ಕನಕಗಿರಿಗೆ ತೆರಳಿ ಅಲ್ಲಿನ ಮಸ್ಟರಿಂಗ್ ಕೇಂದ್ರದ ವ್ಯವಸ್ಥೆಯನ್ನು ಪರಿಶೀಲಿಸಿದರು. ಇದೆ ವೇಳೆ ಕನಕಗಿರಿ ಕ್ಷೇತ್ರ ಚುನಾವಣಾಧಿಕಾರಿ ಸಮೀರ್ ಮುಲ್ಲಾ ಅವರು, 306 ಪಿಆರ್‌ಓಗಳು, 307 ಎಪಿಆರ್‌ಓಗಳು, 632ಪಿಓಗಳು ಸೇರಿದಂತೆ 1245 ಮತಗಟ್ಟೆ ಅಧಿಕಾರಿಗಳು 264 ಮತಗಟ್ಟೆಗಳಿಗೆ 47 ವಿವಿಧ ವಾಹನಗಳ ಮೂಲಕ ತೆರಳಿದ್ದಾರೆ ಎಂದು ತಿಳಿಸಿದರು.

ಗಂಗಾವತಿ ನಗರದ ಲಯನ್ಸ್ ಅನುದಾನಿತ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸಹ ನಿಗದಿತ ಸಮಯಕ್ಕೆ ಮಸ್ಟರಿಂಗ್ ಕಾರ್ಯ ನಡೆದಿದೆ. 275 ಪಿಆರ್‌ಓಗಳು, 276 ಎಪಿಆರ್‌ಓಗಳು, 576 ಪಿಓಗಳು ಸೇರಿದಂತೆ 1127 ಮತಗಟ್ಟೆ ಅಧಿಕಾರಿಗಳನ್ನು 235 ಮತಗಟ್ಟೆಗಳಿಗೆ 59 ವಿವಿಧ ವಾಹನಗಳ ಮೂಲಕ ಕಳುಹಿಸಲಾಗಿದೆ ಎಂದು ಗಂಗಾವತಿ ಕ್ಷೇತ್ರ ಚುನಾವಣಾಧಿಕಾರಿ ಬಸವಣ್ಣೆಪ್ಪ ಕಲಶೆಟ್ಟಿ ಅವರು ಜಿಲ್ಲಾಧಿಕಾರಿಗಳಿಗೆ ಮಾಹಿತಿ ನೀಡಿದರು.

ಯಲಬುರ್ಗಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ನಡೆದ ಮಸ್ಟರಿಂಗ್ ಕಾರ್ಯದಲ್ಲಿ 297 ಪಿಆರ್‌ಓಗಳು, 298 ಎಪಿಆರ್‌ಓಗಳು, 614 ಪಿಓಗಳು ಚುನಾವಣಾ ಸಾಮಗ್ರಿಗಳನ್ನು ಪಡೆದುಕೊಂಡು 256 ಮತಗಟ್ಟೆಗಳಿಗೆ 47 ವಿವಿಧ ವಾಹನಗಳ ಮೂಲಕ ತೆರಳಿದ್ದಾರೆ ಎಂದು ಯಲಬುರ್ಗಾ ಕ್ಷೇತ್ರ ಚುನಾವಣಾಧಿಕಾರಿ ಕಾವ್ಯರಾಣಿ ಕೆ.ವಿ. ಅವರು ಜಿಲ್ಲಾಧಿಕಾರಿಗಳಿಗೆ ಮಾಹಿತಿ ನೀಡಿದರು.

331 ಪಿಆರ್‌ಓಗಳು, 333 ಎಪಿಆರ್‌ಓಗಳು, 683 ಪಿಓಗಳು ಸೇರಿ 1347 ಮತಗಟ್ಟೆ ಅಧಿಕಾರಿಗಳನ್ನು 289 ಮತಗಟ್ಟೆಗಳಿಗೆ 61 ವಿವಿಧ ವಾಹನಗಳ ಮೂಲಕ ಕಳುಹಿಸುವ ಮಸ್ಟರಿಂಗ್ ವ್ಯವಸ್ಥೆಯು ಕೊಪ್ಪಳದ ಗವಿಸಿದ್ದೇಶ್ವರ ಪ್ರೌಢಶಾಲೆ ಆವರಣದಲ್ಲಿ ಮೇ 9ರಂದು ಅಚ್ಚುಕಟ್ಟಾಗಿ ನಡೆದಿದೆ ಎಂದು ಕೊಪ್ಪಳ ಕ್ಷೇತ್ರ ಚುನಾವಣಾಧಿಕಾರಿ ಮಲ್ಲಿಕಾರ್ಜುನ ಅವರು ಜಿಲ್ಲಾಧಿಕಾರಿಗಳಿಗೆ ಮಾಹಿತಿ ನೀಡಿದರು.

# ಅಸಮಾನತೆ ವಿರುದ್ಧ ನನ್ನ ರಾಜಕೀಯ ಹೋರಾಟ; ಯಾರನ್ನು ಗುಲಾಮಗಿರಿ ತಳ್ಳುವ ತಂತ್ರ ಮಾಡಿಲ್ಲ: ಕೆ. ವಿರುಪಾಕ್ಷಪ್ಪ ಸ್ಪಷ್ಟನೆ

ಸಿಂಧನೂರು : ಈ ಸಮಾಜದಲ್ಲಿ ಶೋಷಿತ ವರ್ಗಗಳ ಜನರ ಮೇಲೆ ನಿರಂತರ ದಬ್ಬಾಳಿಕೆ ಮತ್ತು ಗುಲಾಮಗಿರಿ ವ್ಯವಸ್ಥೆಯನ್ನು ಮುಂದುವರಿಸಿಕೊಂಡು ಬಂದಿರುವದು ಮಾಜಿ ಶಾಸಕ ಹಂಪನಗೌಡ ಬಾದರ್ಲಿ ಮತ್ತು ಶಾಸಕ ವೆಂಕಟರಾವ ನಾಡಗೌಡರ ಕುಟುಂಬಗಳೇ ವಿನಹ ನಮ್ಮ ಕುಟುಂಬಗಳು ಅಲ್ಲ. ನಾನು ಈ ಜಾತಿ ವ್ಯವಸ್ಥೆಗಳ ಖಂಡಿಸುತ್ತ ಬಂದಿದ್ದೇನೆ.ಸಮಾಜದಲ್ಲಿ ಅಸಮಾನತೆ ವಿರುದ್ಧ ನನ್ನ ರಾಜಕೀಯ ಹೋರಾಟವಾಗಿದೆ. ಇಲ್ಲಿ ಯಾರನ್ನು ಗುಲಾಮಗಿರಿ ತಳ್ಳುವ ತಂತ್ರಮಾಡಿಲ್ಲ ಮುಂದೆ ನನ್ನ ಜೀವಮಾನದವರೆಗು ಯಾರನ್ನು ಗುಲಾಮಗಿರಿ ತಳ್ಳುವ ತಂತ್ರ ಮಾಡುವದಿಲ್ಲ ಎಂದು ಮಾಜಿ ಸಂಸದ ಹಾಗೂ ಕೆ ಫೇ ಕ್ ನಿಗಮದ ಅಧ್ಯಕ್ಷ : ಕೆ. ವಿರುಪಾಕ್ಷಪ್ಪ ಸುಕಾಲಪೇಟೆಯಲ್ಲಿ ಇನ್ನು ಗುಲಾಮಗಿರಿ ಇದೆ ಎಂದು ಹೇಳಿದ ಶಾಸಕ ವೆಂಕಟರಾವ ನಾಡಗೌಡರಿಗೆ ತಿರುಗೇಟು ನೀಡಿದರು.

ಮಂಗಳವಾರ ನಗರದ ತಮ್ಮ ನಿವಾಸದಲ್ಲಿ ಕರೆದಿದ್ದ ಪತ್ರಿಕಾ ಗೋಷ್ಠಿಯಲ್ಲಿ ಅವರು ಮಾತನಾಡಿ ನಾಡಗೌಡರು ಕಳೆದ ಎರೆಡು ಚುನಾವಣೆಯಲ್ಲಿ ಸುಕಾಲಪೇಟೆ ಜನರಿಂದ ಓಟುಗಳನ್ನು ಪಡೆದು ಶಾಸಕರಾಗಿದ್ದಾರೆ. ಸುಕಾಲಪೇಟೆಯಲ್ಲಿ ಶೇ 60 ರಷ್ಟು ಜನರು ಹಾಲುಮತದವರು ಇದ್ದಾರೆ. ನಮ್ಮ ಸಂಬಂಧಿಕರೇ ಇವತ್ತಿಗೂ ಕಾಂಗ್ರೆಸ್ – ಜೆಡಿಎಸ್ ಪಕ್ಷಗಳಲ್ಲಿದ್ದಾರೆ. ಚುನಾವಣೆಗಳಲ್ಲಿ ಎಜಂಟ್ ರಾಗುತ್ತಾರೆ. ಈ ಸಮಾಜದಲ್ಲಿ ಪ್ರತಿಯೊಬ್ಬರಿಗೂ ಸ್ವತಂತ್ರವಾಗಿ ಬದುಕುವದಕ್ಕೆ ಹಕ್ಕುಯಿದೆ.



ಪ್ರತಿಯೊಬ್ಬರು ಸ್ವಾಭಿಮಾನದಿಂದ ಬದುಕಬೇಕೆಂಬ ಛಲ ಹುಟ್ಟಿಕೊಂಡಿದೆ. ಇಂತಹ ಸ್ವತಂತ್ರದ ಜೀವನದಲ್ಲಿ ಸುಕಾಲಪೇಟೆಯಲ್ಲಿ ಗುಲಾಮಗಿರಿ ಇದೆ ಎಂದು ಶಾಸಕ ನಾಡಗೌಡರು ಹೇಳಿರುವದು ಜನರನ್ನು ದಿಕ್ಕು ತಪ್ಪಿಸುವ ಕೆಲಸ ಮಾಡಿದ್ದಾರೆ. ನಮ್ಮ ಸುಕಾಲಪೇಟೆಯಲ್ಲಿ ಯಾವುದೇ ಗುಲಾಮ ಗಿರಿ ಇಲ್ಲ. ಗುಲಾಮಗಿರಿ ಮಾಡುವದು ಹೇಗೆ ಅಂತ ನಾಡಗೌಡರಿಗೆ ಚನ್ನಾಗಿ ಗೊತ್ತಿದೆ ನನಗೆ ಗೊತ್ತಿಲ್ಲ. ನಾಡಗೌಡರು ತುಂಬಾ ಚಾಣಕ್ಷ ಮತ್ತು ಬುದ್ದಿವಂತರು ಪ್ರಜಾತಂತ್ರದ ವ್ಯವಸ್ತೆಯಲ್ಲಿ ಹೇಗಿರಬೇಕೆಂದು ತಿಳಿದುಕೊಂಡಿದ್ದಾರೆ.

ಆದರೆ ನಾಡಗೌಡರ ಸಹೋದರರಿಗೆ. ಮಕ್ಕಳಿಗೆ ಹೇಗಿರಬೇಕೆಂದು ಗೊತ್ತಿಲ್ಲ. ನಾಡಗೌಡರ ಮನೆತನದಲ್ಲಿ ಬಂದ ದರ್ಪ ಮತ್ತು ಗುಲಾಮಗಿರಿ ವ್ಯವಸ್ಥೆ ಇವತ್ತಿಗೂ ತಿದ್ದಿಕೊಂಡಿಲ್ಲ. ಇದು ಹಾಗೆ ಮುಂದುವರೆದರೆ ಮುಂದಿನ ದಿನಗಳಲ್ಲಿ ಪರಿಣಾಮ ಎದುರಿಸಬೇಕಾಗುತ್ತದೆ ಎಂದರು. ಜವಳಗೇರ ಗ್ರಾಮದಲ್ಲಿ ನಾನು ಚುನಾವಣೆ ಪ್ರಚಾರಕ್ಕೆ ಹೋಗಿದ್ದಾಗ ಗ್ರಾಮದ ಕೆಲವು ಜನ ಸಮುದಾಯಗಳ ಕುರಿತು ಮಾತನಾಡಿ ಈ ಗ್ರಾಮದಲ್ಲಿ ಸರ್ಕಾರದ ಮೂಲಭೂತ ಸೌಲಭ್ಯಗಳ ಕೊರತೆ ಮತ್ತು ಅಲ್ಲಿನ ಜನರ ಅಸಹಾಯಕತೆಗೆ ಕಳವಳ ವ್ಯಕ್ತಪಡಿಸಿ ಉತ್ತಮ ಜೀವನದ ಸಂದೇಶವನ್ನು ನೀಡಿದ್ದೇನೆ. ನಾಡಗೌಡರು ಎರೆಡು ಭಾರಿ ಶಾಸಕರಾಗಿ ಮಂತ್ರಿಯಾಗಿದ್ದರು ಕೂಡ ಸರ್ಕಾರದ ಹೆಚ್ಚುವರಿ ಜಮೀನು ಮಾರಾಟ ಮಾಡಿ ಜನರಿಗೆ ಇವತ್ತಿಗೂ ಹಕ್ಕುಪತ್ರಗಳನ್ನು ನೀಡದಿರುವದು ದೊಡ್ಡ ದುರಂತ. ಅನಧಿಕೃತವಾಗಿ ನಾಡಗೌಡರು ಕೆರೆಗಳಿಗೆ ನೀರು ತುಂಬಿಸಿಕೊಳ್ಳುತ್ತಿರುವದರಿಂದ ಇವತ್ತು ಕೆಳಭಾಗದ ರೈತರ ಜಮೀನುಗಳಿಗೆ ಸರಿಯಾಗಿ ನೀರು ಸಿಗುತ್ತಿಲ್ಲ. ಜವಳಗೇರಾ ಗ್ರಾಮದಲ್ಲಿ ಸರ್ಕಾರಿ ಆಸ್ಪತ್ರೆ ಮತ್ತು ಸರ್ಕಾರಿ ಶಾಲೆ ಆವರಣಗಳು ದುರ್ವಾಸನೆಯಿಂದ ಕೂಡಿದ್ದು. ಆಸ್ಪತ್ರೆಗಳಿಗೆ ಹೋಗುವ ಜನರು ಮತ್ತು ಶಾಲಾ ವಿದ್ಯಾರ್ಥಿಗಳು ಸಂಕಷ್ಟವನ್ನು ಎದುರಿಸುತ್ತಿದ್ದಾರೆ ನಾಡಗೌಡರು ಶಾಸಕರಾಗಿ ಮಂತ್ರಿಯಾಗಿ ಸ್ವಗ್ರಾಮದ ಮೂಲಭೂತ ಸಮಸ್ಯೆಗಳಿಗೆ ಯಾಕೆ ಸ್ಪಂದಿಸಲಿಲ್ಲ? ಎಂದು ಪ್ರಶ್ನಿಸಿದರು.

ಚುನಾವಣೆ ಎದುರಿಸಲು ಆಂಧ್ರದಿಂದ ಗುಂಡಾಗಳನ್ನು ಕರೆಸಿರುವದು ಮಾಹಿತಿ ಸಿಕ್ಕಿದೆ. ಆ ಗುಂಡಾಗಳನ್ನು ಹಂಪನಗೌಡ ಕರೆಸಿದ್ದರೋ ಅಥವಾ ನಾಡಗೌಡ ಕರೆಸಿದ್ದಾರೋ ಗೊತ್ತಿಲ್ಲ. ಕ್ಷೇತ್ರದಲ್ಲಿ ಇದು ದೊಡ್ಡ ದುರಂತ ನಾಡಗೌಡರಿಗೆ ಮತ್ತು ಬಾದರ್ಲಿ ಹಂಪನಗೌಡರಿಗೆ ನಾನು ಹೇಳುವದು ಒಂದೇ ಕ್ಷೇತ್ರದಲ್ಲಿ ಗುಂಡಾಗಿರಿ ರಾಜಕಾರಣ ಮಾಡುವದು ಕೈಬಿಡಬೇಕು. ಅಭ್ಯರ್ಥಿಗಳ ಸೋಲು ಮತ್ತು ಗೆಲುವು ಅವರವರ ಅದೃಷ್ಟದಲ್ಲಿದೆ. ಆಂಧ್ರ ಪ್ರದೇಶಗಳ ವಾಹನಗಳಿಗೆ ಎ. ಪಿ ಅಂತ ಇರುತ್ತದೆ.

ಅಂತ ವಾಹನಗಳು ಕ್ಷೇತ್ರದಲ್ಲಿ ಕಂಡು ಬಂದರೆ ಕೂಡಲೇ ಸಾರ್ವಜನಿಕರು ಮತ್ತು ಯುವ ಜನರು ಪೊಲೀಸ್ ಇಲಾಖಾಧಿಕಾರಿಗಳಿಗೆ ತಿಳಿಸಬೇಕು ಹಾಗೂ ಅಂತ ಗುಂಡಾಗಿರಿ ವ್ಯಕ್ತಿಗಳು ಕಂಡು ಬಂದಲ್ಲಿ ಪೊಲೀಸ್ ಅಧಿಕಾರಿಗಳು ತಕ್ಷಣ ಬಂಧಿಸಿ ಶಾಂತಿಯುತ ಮತದಾನಕ್ಕೆ ಮುಂದಾಗಬೇಕೆಂದು ಒತ್ತಾಯಿಸಿದರು

ಪತ್ರಿಕಾಗೋಷ್ಠಿಯಲ್ಲಿ ಬಿಜೆಪಿ ಮುಖಂಡರಾದ ಕೆ. ಮರಿಯಪ್ಪ. ಹೆಚ್. ಎನ್. ಬಡಿಗೇರ ಇದ್ದರು.

# ಪಕ್ಷೇತರ ಅಭ್ಯರ್ಥಿ ಮೇಲೆ ಮಾಟ ಮಂತ್ರ: ಸಿಸಿಟಿವಿಯಲ್ಲಿ ಸೆರೆ

ಕೋಲಾರ : ಇನ್ನೇನು ಮತದಾನಕ್ಕೆ ಒಂದೇ ಒಂದು ದಿನ ಬಾಕಿ ಇರುವಾಗಲೇ, ಪಕ್ಷೇತರ ಅಭ್ಯರ್ಥಿ ಮೇಲೆ ಮಾಟ ಮಂತ್ರ ಪ್ರಯೋಗ ಮಾಡಲಾಗಿದೆ ಎಂಬ ಆರೋಪ ಕೇಳಿ ಬಂದಿದೆ.



ಬಿಜೆಪಿ ಪಕ್ಷದಿಂದ ಟಿಕೆಟ್ ಕೈತಪ್ಪಿದ ಹಿನ್ನೆಲೆಯಲ್ಲಿ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದ ಹೂಡಿ ವಿಜಯ ಕುಮಾರ್ ಅವರ ವೈಟ್ ಗಾರ್ಡನ್‌ನಲ್ಲಿರುವ ನಿವಾಸದಲ್ಲಿ ಮಾಟ ಮಂತ್ರ ಮಾಡಲಾಗಿದೆ.


ಈ ಮಾಟ ಮಂತ್ರವನ್ನು ತಮಿಳುನಾಡು ಮೂಲದ ವ್ಯಕ್ತಿಗಳು ಮಾಡಿಸಿರುವ ಅನುಮಾನ ವ್ಯಕ್ತವಾಗಿದೆ.

ಪಕ್ಷೇತರ ಅಭ್ಯರ್ಥಿಯ ಮನೆಯ ಕಂಪೌಂಡ್, ಮೇಲ್ಛಾವಣಿ ಹಾಗೂ ರಸ್ತೆಯಲ್ಲಿ ಮಾಟ ಮಂತ್ರದ ಕುರುಹುಗಳು ಪತ್ತೆಯಾಗಿದ್ದು, ಮೂರು ಕಡೆಗಳಲ್ಲಿ ಪ್ರತ್ಯೇಕವಾಗಿ ಮಾಟ ಮಂತ್ರವನ್ನು ಯಾರೋ ಕಿಡಿಗೇಡಿಗಳು ಮಾಡಿಸಿದ್ದಾರೆ.

ತಲೆಯ ಮೇಲೆ ಟವಲ್ ಹಾಕಿಕೊಂಡು ಮುಖವನ್ನು ಮುಚ್ಚಿಕೊಂಡು ಬಂದು ಓರ್ವ ವ್ಯಕ್ತಿ ಮಾಟ ಮಂತ್ರ ಪ್ರಯೋಗಿಸಿದ ದೃಶ್ಯ ಸಿಟಿ ಟಿವಿಯಲ್ಲಿ ರೆಕಾರ್ಡ್ ಆಗಿದ್ದು, ಮಧ್ಯರಾತ್ರಿ 12 ಗಂಟೆಗೆ ಬಂದ ವ್ಯಕ್ತಿ ಈ ಕೃತ್ಯವೆಸಗಿದ್ದಾನೆ.

ಇನ್ನೂ ಎರಡು ಕಡೆಗಳಲ್ಲಿ ಬೊಂಬೆ, ನಿಂಬೆಹಣ್ಣು ಹಾಗೂ ಅರಿಶಿಣ–ಕುಂಕುಮ ಪತ್ತೆಯಾಗಿದೆ. ಮತ್ತೊಂದು ಕಡೆ ಮೂರು ಬ್ಯಾಗ್‌ಗಳಲ್ಲಿ ಮಾಟ ಮಂತ್ರದ ವಸ್ತುಗಳು ಪತ್ತೆಯಾಗಿವೆ.

## ಮುಖ್ಯಮಂತ್ರಿ ಬೊಮ್ಮಾಯಿಯಿಂದ ಹನುಮಾನ್ ಚಾಲೀಸ್ ಪಠಣ



ಹುಬ್ಬಳ್ಳಿ: ಹುಬ್ಬಳ್ಳಿಯ ವಿಜಯನಗರದ ಆಂಜನೇಯ ದೇವಸ್ಥಾನದಲ್ಲಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಹನುಮಾನ್ ಚಾಲೀಸ್ ಪಠಣ ಮಾಡಿದರು.

ಮುಖ್ಯಮಂತ್ರಿಗಳಿಗೆ ಶಿಸ್ತು ಸಮಿತಿ ರಾಜ್ಯಾಧ್ಯಕ್ಷ ಲಿಂಗರಾಜ ಪಾಟೀಲ್, ಪಾಲಿಕೆ ಸದಸ್ಯ ಸಂತೋಷ ಸೇರಿದಂತೆ ಸ್ಥಳೀಯ ನಿವಾಸಿಗಳು ಜೊತೆಯಾದರು.

ಇದೇ ವೇಳೆ ಆಂಜನೇಯನಿಗೆ ಮುಖ್ಯಮಂತ್ರಿಗಳು ವಿಶೇಷ ಪೂಜೆ ಸಲ್ಲಿಸಿದರು.

**ತಪ್ಪು ಮಾಡಿದವರ ಮೇಲೆ ಐ.ಟಿ ದಾಳಿಯಾಗುವುದು ಸಹಜ:** ಶಿಗ್ಗಾವಿ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯ ಮನೆಯ ಮೇಲೆ ಐಟಿ ದಾಳಿ ನಡೆದಿರುವ ಸಂಬಂಧ ಮಾತನಾಡಿದ ಸಿಎಂ ಬೊಮ್ಮಾಯಿ ಅವರು, ತಪ್ಪು ಮಾಡಿದವರ ಮೇಲೆ ದಾಳಿಯಾಗುವುದು ಸಹಜ ಎಂದರು. ಕಾಂಗ್ರೆಸ್ ಹೋಮ ಹವನ ಕೈಗೊಂಡಿರುವ ಬಗ್ಗೆ ಮಾತನಾಡಿ ತಂತ್ರಮಂತ್ರ ಯಾವುದೂ ನಡೆಯುವುದಿಲ್ಲ ಎಂದರು.

## 5 ರಿಂದ 16 ವರ್ಷದೊಳಗಿನ ಮಕ್ಕಳಿಗಾಗಿ ಉಚಿತ ಬೇಸಿಗೆ ಶಿಬಿರ

ಬೆಳಗಾವಿ: ಬೆಳಗಾವಿ ಜಿಲ್ಲಾ ಬಾಲಭವನ ಹಾಗೂ ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಂಯುಕ್ತಾಶ್ರಯದಲ್ಲಿ 05 ರಿಂದ 16 ವರ್ಷದೊಳಗಿನ ಮಕ್ಕಳಿಗಾಗಿ 15 ದಿನಗಳ ಉಚಿತ ಬೇಸಿಗೆ ಶಿಬಿರವನ್ನು ಮೇ.16 2023 ರಿಂದ ಮೇ.30 ರವರೆಗೆ ಬೆಳಿಗ್ಗೆ 10 ರಿಂದ ಸಂಜೆ 4ಗಂಟೆಯವರೆಗೆ ಆಯೋಜಿಸಲಾಗಿದೆ.

ಶಿಬಿರದಲ್ಲಿ ಮಕ್ಕಳ ಸರ್ವಾಂಗೀಣ ವಿಕಾಸಕ್ಕೆ ಅನುಕೂಲವಾಗುವ ಉಪನ್ಯಾಸ, ಚಿತ್ರಕಲೆ, ಕರಕುಶಲ ಕಲೆ, ಜೇಡಿ ಮಣ್ಣಿನ ಕಲೆ, ಸಮೂಹ ನೃತ್ಯ, ಸಮೂಹ ಗೀತೆ, ಯೋಗ, ಕರಾಟೆ ಆಯೋಜಿಸಲಾಗುವುದು.

ಶಿಬಿರವು ಕಣಬರ್ಗಿ ರಸ್ತೆಯ ಭಾರತ ಕಾಲೋನಿಯಲ್ಲಿರುವ ಮಹಿಳಾ ಕಲ್ಯಾಣ ಸಂಸ್ಥೆಯ ಸಭಾಗೃಹದಲ್ಲಿ ಜರುಗುವುದು.

ಶಿಬಿರದಲ್ಲಿ ಭಾಗವಹಿಸಲು ಇಚ್ಛಿಸುವ ವಿದ್ಯಾರ್ಥಿಗಳು ಮೇ.15 2023 ರ ಸಂಜೆ 5 ಗಂಟೆಯೊಳಗೆ ಹೆಸರು ನೊಂದಾಯಿಸಬಹುದು. ಹೆಚ್ಚಿನ ಮಾಹಿತಿಗಾಗಿ ಎಮ್. ಎಸ್. ಚೌಗಲಾ, ದೂರವಾಣಿ ಸಂಖ್ಯೆ: 9663218860 ಇವರನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಬಾಲಭವನ ಸಮಿತಿ ಕಾರ್ಯದರ್ಶಿ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಿಡಿಲು ಬಡಿದು ವ್ಯಕ್ತಿ ಸಾವು



ಬೆಳಗಾವಿ: ಬೆಳಗಾವಿ ಸೇ–ರಿದಂ ತೆ ರಾಜ್ಯದ ಹಲವು ಜಿಲ್ಲೆಗಳಲ್ಲಿ ಗುಡುಗು ಸಹಿತ ಮಳೆಯಾಗುತ್ತಿದ್ದು, ವಿವಿಧ ಜಿಲ್ಲೆಗಳಲ್ಲಿ ಅವಾಂತರಗಳು ಸೃಷ್ಟಿಯಾಗಿವೆ.

ಬೆಳಗಾವಿಯ ಹಲವೆಡೆ ಧಾರಾಕಾರ ಮಳೆಯಾಗುತ್ತಿದ್ದು, ರಾಮದುರ್ಗದಲ್ಲಿ ಸಿಡಿಲು ಬಡಿದ ಪರಿಣಾಮ ಓರ್ವ ರೈತ ಸಾವನ್ನಪ್ಪಿರುವ ಘಟನೆ ನಡೆದಿದೆ.

ರಾಮದುರ್ಗದ ಓಬಳಾಪುರ ಗ್ರಾಮದಲ್ಲಿ ಈ ದುರಂತ ಸಂಭವಿಸಿದೆ.

ಪಾರ್ಲೆಷ್ ರಾಠೋಡ್ ಮೃತ ವ್ಯಕ್ತಿ. ಸ್ಥಳಕ್ಕೆ ರಾಮದುರ್ಗ ಠಾಣಾ ಪೊಲೀಸರು ಧಾವಿಸಿ ಪರಿಶೀಲನೆ ನಡೆಸಿದ್ದಾರೆ.

## ಇಂದಿನ ಮತದಾನಕ್ಕೆ ಎಲ್ಲ ಸಿದ್ಧತೆ ನಡೆಸಲಾಗಿದೆ: ಚುನಾವಣಾಧಿಕಾರಿ ಜೆ.ಕೆ.ಹರೀಶ್ ಮಾಹಿತಿ

ಕಾಗವಾಡ: ವಿಧಾನಸಭಾ ಮತಕ್ಷೇತ್ರದ 231 ಮತಗಟ್ಟೆಗಳಲ್ಲಿ ನಾಳಿನ ಮತದಾನಕ್ಕೆ 1350 ನೌಕರರನ್ನು ನೇಮಿಸಲಾಗಿದ್ದು, 34 ಬಸ್ಗಳಲ್ಲಿ ಮತಗಟ್ಟೆಗೆ ಸಾಗಿಸುವ ಕಾರ್ಯ ಪೂರ್ಣಗೊಂಡಿದೆ ಎಂದು ಕಾಗವಾಡ ಕೇಂದ್ರದ ಚುನಾವಣಾಧಿಕಾರಿ ಜೆ.ಕೆ.ಹರೀಶ್ ತಿಳಿಸಿದ್ದಾರೆ.

ಕಾಗವಾಡ ಕ್ಷೇತ್ರದ ಮತಗಟ್ಟೆಯಲ್ಲಿ ಯಶಸ್ವಿಯಾಗಿ ಮತದಾನ ನಡೆಸಲು 400 ಸ್ವಯಂಸೇವಕರು, 133 ಸೆಕ್ಟರ್ ಇಲಾಖೆಗಳು, 600 ಪೊಲೀಸ್ ಸಿಬ್ಬಂದಿ ಮತ್ತು ಅಧಿಕಾರಿಗಳು, 34 ಸೆಕ್ಟರ್ ಅಧಿಕಾರಿಗಳು ತೊಡಗಿಸಿಕೊಂಡಿದ್ದಾರೆ.

ಕಾಗವಾಡ ಮತಕ್ಷೇತ್ರದಲ್ಲಿ 1 ಲಕ್ಷ 91 ಸಾವಿರ ಮತದಾರರಿದ್ದು, 231 ಮತಗಟ್ಟೆಗಳ ಪೈಕಿ 146 ಕೇಂದ್ರಗಳಲ್ಲಿ ವೆಬ್ಕಾಸ್ಟ್ ಕ್ಯಾಮೆರಾ ಅಳವಡಿಸಲಾಗಿದೆ. ಮಹಿಳೆಯರಿಗಾಗಿ ಸಖಿ ಮತಗಟ್ಟೆ, ಒಂದು ಮಾದರಿ ವಿಕಲಚೇತನರ ಮತಗಟ್ಟೆ, 21 ಕೇಂದ್ರಗಳನ್ನು ಸೂಕ್ಷ್ಮ




ಕೇಂದ್ರಗಳನ್ನಾಗಿ ಮಾಡಲಾಗಿದ್ದು, 15 ಸೂಕ್ಷ್ಮ ಹಾಗೂ 6 ಅತಿ ಸೂಕ್ಷ್ಮ ಮತಗಟ್ಟೆಗಳಿವೆ ಎಂದು ತಿಳಿಸಿದರು.

ತಹಸೀಲ್ದಾರ್ ಎಂ.ಎನ್.ಬಳಿಗಾರ ಮಾಹಿತಿ ನೀಡಿ, ಮತಗಟ್ಟೆಗೆ ಮತದಾನ ಮಾಡಲು ಬರುವ ಮತದಾರರಿಗೆ ಬಿಸಿಲಿನ ತೊಂದರೆಬಾರದಂತೆ ನೆರಳು ಹಾಗೂ ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗಿದೆ.

ಶಿಕ್ಷಣಾಧಿಕಾರಿ ಎಂ.ಆರ್.ಮುಂಜೆ, ಗ್ರೇಡ್–2 ತಹಸೀಲ್ದಾರ್ ಎಂ.ಎನ್.ಬುವಾ, ಪಿಎಸ್ಐ ಹನುಮಂತ ನರಳೆ ಮೊದಲಾದವರು ಉಪಸ್ಥಿತ–ರಿದ್ದರು.

## ನಾನು ಬಿಜೆಪಿಯ ನಿಷ್ಠಾವಂತ ಕಾರ್ಯಕರ್ತ: ಡಾ.ಪ್ರಭಾಕರ ಕೋರೆ



ಬೆಳಗಾವಿ: ನಾನು ಬಿಜೆಪಿ ಪಕ್ಷದ ನಿಷ್ಠಾವಂತ ಕಾರ್ಯಕರ್ತ ಜನರು ಯಾವುದೆ ಸುಳ್ಳು ವದಂತಿಗಳಿಗೆ ಕಿವಿಗೊಡಬೇಡಿ ಎಂದು ಡಾ. ಪ್ರಭಾಕರ ಕೋರೆ ಹೇಳಿದರು.ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ಡಾ. ಪ್ರಭಾಕರ ಕೋರೆ ನಾನು ಬಿಜೆಪಿಯ ನಿಷ್ಠಾವಂತ ಕಾರ್ಯಕರ್ತ ನನ್ನ ಬಗ್ಗೆ ಸುಳ್ಳು ವದಂತಿಗಳನ್ನು ಹಬ್ಬಿಸುತ್ತಿದ್ದಾರೆ.

ನಾನು ಎಂದಿಗೂ ಪಕ್ಷ ವಿರೋಧಿ ಕೆಲಸ ಮಾಡುವುದಿಲ್ಲ ನಾನು ಭಾರತೀಯ ಜನತಾ ಪಕ್ಷದ ನಿಷ್ಠಾವಂತ ಕಾರ್ಯಕರ್ತ ಪಕ್ಷ ನನಗೆ ಒಂದು ಜವಾಭ್ದಾರಿಯನ್ನು ನೀಡಿದೆ ನಾನೆಂದು ಪಕ್ಷ ದ್ರೋಹ ಮಾಡುವುದಿಲ್ಲ ಜನರು ಇದ್ಯಾವುದನ್ನು ಗಮನದಲ್ಲಿಟ್ಟುಕೊಂಡು ಉಹಾಪೋಹಗಳಿಗೆ ಆಸ್ಪದ ಮಾಡಿಕೊಡಬೇಡಿ ಎಂದು ಮನವಿ ಮಾಡಿದರು.

## ಇಂದು ವೇತನ ಸಹಿ ರಜೆ

ಬೆಳಗಾವಿ: ಭಾರತ ಚುನಾವಣಾ ಆಯೋಗವು ಮೇ.10 2023 ಬುಧವಾರ ದಂದು ಕರ್ನಾಟಕ ವಿಧಾನ ಸಭೆ ಸಾರ್ವತ್ರಿಕ ಚುನಾವಣೆ ನಿಗದಿಪಡಿಸಿದೆ.

ಸದರಿ ದಿನದಂದು ರಾಜ್ಯಾದ್ಯಂತ ಎಲ್ಲಾ ಕಾರ್ಖಾನೆಗಳು, ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು ಹಾಗೂ ಇತರೆ ಸಂಸ್ಥೆಗಳಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ 1951 ರ ಪ್ರಜಾ ಪ್ರತಿನಿಧಿ ಕಾಯ್ದೆ, ಸೆಕ್ಷೆನ್ 135 (ಬಿ) ರಡಿ ಹಾಗೂ ಕೈಗಾರಿಕಾ ಸಂಸ್ಥೆಗಳ (ರಾಷ್ಟ್ರೀಯ ಮತ್ತು ಹಬ್ಬದ ರಜೆಗಳು) ಕಾಯ್ದೆ–1963 ಕಲಂ 3 (ಎ) ರನ್ವಯ ಅರ್ಹ ಮತದಾರರಿಗೆ ವೇತನ ಸಹಿತ ರಜೆ ಘೋಷಿಸಿ ಸಂವಿಧಾನಾತ್ಮಕ ಹಕ್ಕಾದ ಮತವನ್ನು ಚಲಾಯಿಸುವುದಕ್ಕಾಗಿ ಎಲ್ಲಾ ಮಾಲೀಕರು/ನಿಯೋಜಕರು ಅನುವು ಮಾಡಿ ಕೊಡಬೇಕಾಗಿ ತಿಳಿಸಿದ್ದಾರೆ.

ತಪ್ಪಿದ್ದಲ್ಲಿ ಸಂಬಂಧಪಟ್ಟ ಸಂಸ್ಥೆ/ನಿಯೋಜ–ಕರ ವಿರುದ್ಧ ನಿಯಮಾನುಸಾರ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಕಾರ್ಮಿಕ ಅಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಒಗ್ಗಟ್ಟು ಪ್ರದರ್ಶಿಸಿದ ಸಿದ್ದರಾಮಯ್ಯ–ಡಿ.ಕೆ.ಶಿವಕುಮಾರ್

ಮೈಸೂರು: ವಿಧಾನಸಭಾ ಚುನಾವಣೆಗೆ ಕ್ಷಣಗಣನೆ ಆರಂಭವಾಗಿದ್ದು, ಈ ಮಧ್ಯೆ ವಿಪಕ್ಷ ನಾಯಕ ಸಿದ್ದರಾಮಯ್ಯ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಇಬ್ಬರೂ ಇಂದು ಚಾಮುಂಡಿ ಬೆಟ್ಟಕ್ಕೆ ತೆರಳಿ ನಾಡ ಅಧಿದೇವತೆ ಚಾಮುಂಡೇಶ್ವರಿಗೆ ವಿಶೇಷ ಪೂಜೆ ಸಲ್ಲಿಸಿದರು.



ಚುನಾವಣೆಗೆ ಒಂದು ದಿನ ಬಾಕಿಯಿರುವಾಗ ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ಇಬ್ಬರೂ ಶ್ರೀ ಚಾಮುಂಡೇಶ್ವರಿ ದೇವಿಗೆ ವಿಶೇಷ ಪೂಜೆ ಸಲ್ಲಿಸಿದ್ದು, ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಕೂಡಲೇ ಪಕ್ಷ ಘೋಷಿಸಿರುವ ಗ್ಯಾರಂಟಿಗಳನ್ನು ಜಾ–ರಿಗೆ ತರುವುದಾಗಿ ಪ್ರಮಾಣ ಮಾಡಿದರು.

ವಿಪಕ್ಷ ನಾಯಕ ಸಿದ್ದರಾಮಯ್ಯ ಬರೆದಿದ್ದಾರೆ ಎನ್ನಲಾದ ನಕಲಿ ಪತ್ರ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ಬೆನ್ನಲ್ಲೇ ಕಾಂಗ್ರೆಸ್ ನಾಯಕ–ರಿಬ್ಬರೂ ಒಟ್ಟಾಗಿ ಚಾಮುಂಡಿ ಬೆಟ್ಟದಲ್ಲಿ ಪೂಜೆ ಸಲ್ಲಿಸಿದ್ದು, ಈ ಮೂಲಕ ರಾಜ್ಯದ ಜನತೆಗೆ ಒಗ್ಗಟ್ಟಿನ ಸಂದೇಶ ರವಾನಿಸಿದ್ದಾರೆ.

## ಪಾಕಿಸ್ತಾನ ಮಾಜಿ ಪ್ರಧಾನಿ ಇಮ್ರಾನ್ ಖಾನ್ ಅರೆಸ್ಟ್



ಇಸ್ಲಾಮಾಬಾದ್: ಪಾಕಿಸ್ತಾನ ಮಾಜಿ ಪ್ರಧಾನಿ ಇಮ್ರಾನ್ ಖಾನ್ ಅವರನ್ನು ಇಸ್ಲಾಮಾಬಾದ್ ನಲ್ಲಿ ಪೊಲೀಸರು ಬಂಧಿಸಿದ್ದಾರೆ.

ಅಲ್ ಖಾದಿರ್ ಟ್ರಸ್ಟ್ ಪ್ರಕರಣದಲ್ಲಿ ಇಮ್ರಾನ್ ಖಾನ್ ಅವರನ್ನು ಬಂಧಿಸಲಾಗಿದೆ. ವಿಶ್ವವಿದ್ಯಾಲಯಕ್ಕೆ ಕೋಟ್ಯಂತರ ರೂಪಾಯಿ ಮೌಲ್ಯದ ಭೂಮಿಯನ್ನು ಅಕ್ರಮವಾಗಿ ವಶ ಪಡಿಸಿಕೊಂಡಿದ್ದಾರೆ ಎಂದು ಉದ್ಯಮಿ ಮಲ್ಲಿಕ್ ರಿಯಾಜ್ ಆರೋಪಿಸಿದ್ದರು. ಅಲ್ಲದೇ ರಿಯಾಜ್ ಹಾಗೂ ಅವರ ಪುತ್ರಿಯ ಆಡಿಯೋ ವೈರಲ್ ಆಗಿತ್ತು. ಇಮ್ರಾನ್ ಪತ್ನಿ ಬುಶ್ರಾ ಬಿಬಿ ತನಕೆ ಐದು ಕ್ಯಾರೆಟ್ ವಜ್ರದ ಉಂಗುರ ಬೇಕೆಂದು ಬೇಡಿಕೆ ಇಟ್ಟಿದ್ದಾಗಿ ರಿಯಾಜ್ ಪುತ್ರಿ ಹೇಳಿದ್ದರು. ಪ್ರಕರಣ ಸಂಬಂಧ ಇಮ್ರಾನ್ ಖಾನ್ ಬಂಧನವಾಗಿದೆ.

ಇಮ್ರಾನ್ ಖಾನ್ ಬಂಧನ ಬೆನ್ನಲ್ಲೇ ಇಸ್ಲಾಮಾಬಾದ್ ನಲ್ಲಿ ಮಾರಾಮಾರಿ ನಡೆದಿದೆ. ಇಸ್ಲಾಮಾಬಾದ್ ಹೈಕೋರ್ಟ್ ಬಳಿ ಹೆಚ್ಚಿನ ಪೊಲೀಸರನ್ನು ನಿಯೋಜಿಸಲಾಗಿದೆ ಎಂದು ತಿಳಿದುಬಂದಿದೆ.

## ತಪ್ಪದೇ ಮತ ಚಲಾಯಿಸಿ, ಸಾಧ್ಯವಾದಷ್ಟು ಬೆಳಗ್ಗೆಯೇ ಮತ ಹಾಕಿ: ಲಕ್ಷ್ಮೀ ಹೆಬ್ಬಾಳಕರ್ ಕರೆ



ಬೆಳಗಾವಿ: ಬುಧವಾರ ನಡೆಯಲಿರುವ ಕರ್ನಾಟಕ ವಿಧಾನಸಭೆ ಚುನಾವಣೆಯಲ್ಲಿ ಎಲ್ಲರೂ ತಪ್ಪದೇ ಮತದಾನ ಮಾಡುವಂತೆ ಶಾಸಕಿ ಲಕ್ಷ್ಮೀ ಹೆಬ್ಬಾಳಕರ್ ಕರೆ ನೀಡಿದ್ದಾರೆ.

ಈ ಕುರಿತು ಹೇಳಿಕೆ ನೀಡಿರುವ ಅವರು, ಬೆಳಗ್ಗೆ 7 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಮತದಾನಕ್ಕೆ ಅವಕಾಶವಿದೆ. ಆದರೆ ಮಧ್ಯಾಹ್ನ ನಂತರ ಮಳೆಯಾಗುವ ಸಾಧ್ಯತೆ ಇರುವುದ–ರಿಂದ ಸಾಧ್ಯವಾದಷ್ಟು ಬೆಳಗ್ಗೆಯೇ ಮತದಾನ ಮಾಡಬೇಕು. ಪ್ರಜಾಪ್ರಭುತ್ವದಲ್ಲಿ ಮತದಾನ ಅತ್ಯಂತ ಪವಿತ್ರ ಕಾರ್ಯವಾಗಿರುವದ–ರಿಂದ ಮತದಾನದಿಂದ ಯಾರೂ ವಂಚಿತರಾಗಬಾರದು. ಪ್ರತಿಯೊಬ್ಬರು ತಮ್ಮ ಹಕ್ಕು ಚಲಾಯಿಸಬೇಕು ಎಂದು ಕೋರಿದ್ದಾರೆ.

## ದೇವೇಂದ್ರ ಜಿನಗೌಡ ಆಂಗ್ಲ ಮಾಧ್ಯಮ ಶಾಲೆಗೆ ಉತ್ತಮ ಫಲಿತಾಂಶ



ಬೆಳಗಾವಿ: ಶಿಂದೊಳ್ಳಿ ಗ್ರಾಮದ ಗೋಪಾಲ ಜಿನ ಗೌಡ ಎಜ್ಯುಕೇಶನ ಟ್ರಸ್ಟ್‌ನ ದೇವೇಂದ್ರ ಜಿನಗೌಡ ಆಂಗ್ಲ ಮಾಧ್ಯಮ ಶಾಲೆಯ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿದ್ದಾರೆ. ಕು. ಸೃಷ್ಟಿ ಅಪ್ಪೇಕರ–613 ಪ್ರಥ–ಮ, ಕು.ಕೀರ್ತಿ ಸುನಕುಂಪಿ–601 ದ್ವಿತೀಯ, ಕು.ಆರೇಶಾ ದೊಡ್ಡನವೇರ–598 ತೃತೀಯ ಸ್ಥಾನ ಪಡೆದುಕೊಂಡಿದ್ದಾರೆ. ಸಂಸ್ಥೆಯ ಅಧ್ಯಕ್ಷರು, ಕಾರ್ಯದರ್ಶಿಯವರು, ಆಡಳಿತ ಮಂಡಳಿಯವರು ಶಾಲೆಯ ಶಿಕ್ಷಕರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.



### ಕುನೋ ರಾಷ್ಟ್ರೀಯ ಉದ್ಯಾನದಲ್ಲಿ ಮತ್ತೊಂದು ಚಿರತೆ ಸಾವು

ಮಧ್ಯ ಪ್ರದೇಶ: ಮಧ್ಯ ಪ್ರದೇಶದ ಕುನೋ ರಾಷ್ಟ್ರೀಯ ಉದ್ಯಾನದಲ್ಲಿ ಮತ್ತೊಂದು ಚಿರತೆ ಸಾವನ್ನಪ್ಪಿದೆ. ದಕ್ಷಿಣ ಆಫ್ರಿಕಾದಿಂದ ತರಲಾಗಿದ್ದ ದಕ್ಷಾ ಹೆಣ್ಣು ಚಿರತೆ ಮೃತಪಟ್ಟಿರುವುದಾಗಿ ಮಧ್ಯ ಪ್ರದೇಶ ಮುಖ್ಯ ಅರಣ್ಯಾ ಸಂರಕ್ಷಣಾಧಿಕಾರಿ ಜೆ ಎಸ್ ಚೌಹ್ವಾಣ್ ತಿಳಿಸಿದ್ದಾರೆ.

ಕುನೋ ರಾಷ್ಟ್ರೀಯ ಉದ್ಯಾನದಲ್ಲಿ ಕಳೆದ ಮಾರ್ಚ್ ನಿಂದ ಇಲ್ಲಿಯವರೆಗೂ ಮೂರು ಚಿರತೆಗಳು ಸಾವನ್ನಪ್ಪಿರುವುದಾಗಿ ಅವರು ಮಾಹಿತಿ ನೀಡಿದ್ದಾರೆ.

ಫೆಬ್ರವರಿಯಲ್ಲಿ ದಕ್ಷಿಣ ಆಫ್ರಿಕಾದಿಂದ ಕರೆತರಲಾಗಿದ್ದ ಆರು ವರ್ಷದ ಗಂಡು ಚಿರತೆ ಕಳೆದ ತಿಂಗಳು ಸಾವನ್ನಪ್ಪಿತ್ತು. ಅದರ ಸಾವಿಗೆ ಕಾರಣಗಳು ಇನ್ನೂ ತಿಳಿದಿಲ್ಲ.

ಇತ್ತೀಚಿಗೆ ಉದಯ್ ಎಂದು ಹೆಸರಿಡಲಾದ ಚಿರತೆ ಭಾನುವಾರ ಇದ್ದಕ್ಕಿದ್ದಂತೆ ಅಸ್ವಸ್ಥಗೊಂಡಿತ್ತು ಎಂದು ಮಧ್ಯಪ್ರದೇಶ ಅರಣ್ಯ ಇಲಾಖೆಯ ಅಧಿಕಾರಿಗಳು ತಿಳಿಸಿದ್ದಾರೆ. ಮಾರ್ಚ್‌ನಲ್ಲಿ, ಸಶಾ ಎಂಬ ನಮೀಬಿಯಾ ಚಿರತೆ ಮೂತ್ರಪಿಂಡದ ತೊಂದರೆಗಳಿಂದ ಸಾವನ್ನಪ್ಪಿತ್ತು.

## ಕರ್ನಾಟಕ ಚುನಾವಣೆ: ಉದ್ಧಟತನ ತೋರಿದ ಮಹಿಳಾ ಇನ್ಸ್ ಪೆಕ್ಟರ್ ಅಮಾನತು

ಬೆಂಗಳೂರು/ಶಿವಮೊಗ್ಗ: ಕರ್ನಾಟಕ ವಿಧಾನಸಭೆ ಚುನಾವಣೆಗೆ ಮೇ 10ರಂದು ಮತದಾನ ನಡೆಯಲಿದ್ದು ಹೀಗಾಗಿ ಮತದಾನಕ್ಕೆ ಅಗತ್ಯವಾದ ವಿದ್ಯುನ್ಮಾನ ಮತಯಂತ್ರ(ಇವಿಎಂ) ಸೇರಿ ವಿವಿಧ ವಸ್ತುಗಳ ಜತೆಗೆ ಸಿಬ್ಬಂದಿಯನ್ನು ಮತಗಟ್ಟೆಗಳಿಗೆ ನಿಯೋಜಿಸಲಾಗುತ್ತಿದೆ.

ಮತಗಟ್ಟೆ ತರಬೇತಿ ನೀಡುವಾಗ ಉದ್ಧಟತನ ತೋರಿದ ಮಹಿಳಾ ಇನ್ಸ್‌ಪೆಕ್ಟರ್ ಭವ್ಯ ಎಂಬುವರನ್ನು ಅಮಾನತು ಮಾಡಲಾಗಿದೆ. ಅಂಬೇಡ್ಕರ್ ವಿಶ್ವವಿದ್ಯಾಲಯದಲ್ಲಿ ಮತಗಟ್ಟೆಗಳಲ್ಲಿ ಕಾರ್ಯನಿರ್ವಹಿಸುವ ಬಗ್ಗೆ ತರಬೇತಿಗೆ ನಿಯೋಜನೆ ಮಾಡಲಾಗಿತ್ತು. ಈ ವೇಳೆ




ತರಬೇತಿಗೆ ಹಾಜರಾಗದೆ ಪೇಪರ್ ಓದುತ್ತಾ ಕುಳಿತಿದ್ದ ಭವ್ಯರನ್ನು ನೋಡಲ್ ಅಧಿಕಾರಿ ಹಾಗೂ ಸೆಕ್ಟರ್ ಅಧಿಕಾರಿ ಪ್ರಶ್ನಿಸಿದರು. ಈ ವೇಳೆ ಉದ್ಧಟತನ ಮಾತುಗಳನ್ನು ಆಡಿದ ಹಿನ್ನೆಲೆಯಲ್ಲಿ ಇನ್ಸ್‌ಪೆಕ್ಟರ್ ಭವ್ಯ ಅವರನ್ನು ಅಮಾನತು ಮಾಡಲಾಗಿದೆ.

ನಾನು ಮಾಡುತ್ತಿರುವುದು ಸರಿ, ತರಬೇತಿ ಕೊಡುವುದು ನಿಮ್ಮ ಕೆಲಸ, ತರಬೇತಿ ಪಡೆಯುವುದು ಬಿಡುವುದು ನಮ್ಮಿಷ್ಟ. ನೀವ್ ಹೇಳಿದಂತೆ ಕೇಳುವುದಕ್ಕೆ ನಾನು ನಿಮ್ಮ ಡಿಪಾರ್ಟ್‌ಮೆಂಟ್ ಅಲ್ಲ. ಈ ತರಬೇತಿ ಉಪಯೋಗಕ್ಕಿಲ್ಲ. ಯಾರಿಗಾದರೂ ಹೇಳಿಕೊಳ್ಳಿ ಎಂದು ಮಹಿಳಾ ಇನ್ಸ್‌ಪೆಕ್ಟರ್ ಉದ್ಧಟತನ ಮೆರೆದಿದ್ದಾರೆ. ಹೀಗಾಗಿ ಅಧಿಕಾ–ರಿಗಳು ಬಿಬಿಎಂಪಿ ಆಯುಕ್ತರಿಗೆ ತಿಳಿಸಿದ ಹಿನ್ನೆಲೆಯಲ್ಲಿ ಪ್ರಜಾಪ್ರತಿನಿಧಿ ಕಾಯ್ದೆಯಡಿ ಮಹಿಳಾ ಇನ್ಸ್‌ಪೆಕ್ಟರ್ ಭವ್ಯಾರನ್ನು ಜಿಲ್ಲಾ ಚುನಾವಣಾಧಿಕಾರಿ ಅಮಾನತು ಮಾಡಿದ್ದಾರೆ.

ಈ ಮಧ್ಯೆ ಶಿವಮೊಗ್ಗದಲ್ಲಿ ಸಿಬ್ಬಂದಿಗಳ ನಿಯೋಜನೆ ವೇಳೆ ಇಬ್ಬರು ಮದ್ಯ ಸೇವನೆ ಮಾಡಿರುವ ಶಂಕೆ ಮೇರೆಗೆ ಇಬ್ಬರು ಸಿಬ್ಬಂದಿಯನ್ನು ವೈದ್ಯಕೀಯ ಪರೀಕ್ಷೆಗೆ ಕಳುಹಿಸಲಾಗಿದೆ. ಶಿವಮೊಗ್ಗ ಗ್ರಾಮಾಂತರ ಕ್ಷೇತ್ರದ ಮಸ್ಟರಿಂಗ್ ಕೇಂದ್ರಕ್ಕೆ ಆಗಮಿಸಿದ್ದ ಇಬ್ಬರು ಚುನಾವಣಾ ಸಿಬ್ಬಂದಿಯನ್ನು ವೈದ್ಯಕೀಯ ಪರೀಕ್ಷೆಗೆ ರವಾನೆ ಮಾಡಲಾಗಿದೆ.

ಈ ಇಬ್ಬರು ಸಿಬ್ಬಂದಿ ಪ್ರಜ್ಞೆ ಇಲ್ಲದಂತೆ ವರ್ತಿಸುತ್ತಿದ್ದುದ್ದನ್ನು ಗಮನಿಸಿದ ಚುನಾವಣಾ ಅಧಿಕಾರಿಗಳು ಮದ್ಯ ಸೇವನೆ ಮಾಡಿರುವ ಬಗ್ಗೆ ಖಚಿತಪಡಿಸಿಕೊಳ್ಳಲು ಅವರನ್ನು ವೈದ್ಯಕೀಯ ತಪಾಸಣೆಗೆ ಕಳುಹಿಸಿದ್ದಾರೆ.

## ಅಭಿವೃದ್ಧಿ ಮಾಡುವ ವ್ಯಕ್ತಿಗಳಿಗೆ ನಿಮ್ಮ ಮತನೀಡಿ: ಗಂಗಾಧರ



ಬಳ್ಳಾರಿ: ಸಾರ್ವತ್ರಿಕ ವಿಧಾನಸಭೆ ಚುನಾವಣೆ ಇದೇ ತಿಂಗಳು 10–05–23 ರಂದು ಮತದಾನ ನಡೆಯಲಿದ್ದು,ಈ ಒಂದು ಚುನಾವಣೆಯಲ್ಲಿ ಪಕ್ಷ ಮುಖ್ಯ ಅಲ್ಲ, ವ್ಯಕ್ತಿಯನ್ನು ನೋಡಿ ಯಾವುದೇ ಜಾತಿ,ಧರ್ಮ,ಹಣಬಲ, ತೋರಿಸುವ ಮತ್ತು ಶಾಂತಿಕದಡುವ ಅಭ್ಯರ್ಥಿಗಳನ್ನು ಸೋಲಿಸಿ ಹಾಗೂ ಸಮಾನತೆ, ಸಹೋದರತೆ,ಭ್ರಾತೃತ್ವ, ಮೆರೆಯುವ ಹಾಗೂ ಅಭಿವೃದ್ಧಿ ಮಾಡುವ ವ್ಯಕ್ತಿಗಳಿಗೆ

ನಿಮ್ಮ ಮತನೀಡಿ ಪ್ರಜಾಪ್ರಭುತ್ವ ಘನತೆ ಎತ್ತಿ ಹಿಡಿಯುವ ಮೂಲಕ ಮೆರಗನ್ನು ತಂದುಕೋಡಿ ಎಂದು ಪ್ರಬುದ್ಧ ಮತದಾರ ಬೆಣಕಲ್ಲು ಗಂಗಾಧರ ತಿಳಿಸಿದರು.

## ಸಲಿಂಗ ವಿವಾಹ: ಸುಪ್ರೀಂ ವಿಚಾರಣೆ



ನವದೆಹಲಿ: ಭಾರತದಲ್ಲಿ ಸಲಿಂಗ ವಿವಾಹಗಳಿಗೆ ಕಾನೂನು ಮಾನ್ಯತೆ ಕೋರಿ ಸಲ್ಲಿಸಲಾದ ಅರ್ಜಿಗಳ ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್, "ಭಾರತೀಯ ಸಂವಿಧಾನವು 'ಸಂಪ್ರದಾಯ ಮುರಿಯುವಿಕೆ' ಆಗಿದೆ ಎಂದು ಹೇಳಿದೆ.

ಭಾರತದ ಮುಖ್ಯ ನ್ಯಾಯಮೂರ್ತಿ ಡಿವೈ ಚಂದ್ರಚೂಡ್, ನ್ಯಾಯಮೂರ್ತಿಗಳಾದ ಸಂಜಯ್ ಕಿಶನ್ ಕೌಲ್, ಎಸ್ ರವೀಂದ್ರ ಭಟ್, ಹಿಮಾ ಕೊಹ್ಲಿ ಮತ್ತು ಪಿಎಸ್ ನರಸಿಂಹ ಅವರನ್ನೊಳಗೊಂಡ ಸಂವಿಧಾನ ಪೀಠವು ಇದರ ವಿಚಾರಣೆ ನಡೆಸಿದೆ. ಈ ವೇಳೆ ಪ್ರತಿವಾದಿಗಳ ಪರ ಹಿರಿಯ ವಕೀಲ ರಾಕೇಶ್ ದ್ವಿವೇದಿ ಅವರ ವಿಚಾರಣೆ ನಡೆಸುತ್ತಿದ್ದಾಗ, ನ್ಯಾಯಮೂರ್ತಿ ಭಟ್ ಸಂಪ್ರದಾಯ ಮು–ರಿಯುವಿಕೆ' ಬಗ್ಗೆ ಪ್ರಸ್ತಾಪಿಸಿದರು.

ನೀವು ಸಂಪ್ರದಾಯವನ್ನು ತಂದ ಕ್ಷಣ, ಸಂವಿಧಾನವೇ ಸಂಪ್ರದಾಯವನ್ನು ಮುರಿಯುತ್ತದೆ. ಏಕೆಂದರೆ ನೀವು ಮೊದಲ ಬಾರಿಗೆ 14 ಅನ್ನು ತಂದಿದ್ದೀರಿ, ನೀವು 15 ಮತ್ತು 17 ಅನ್ನು ತಂದಿದ್ದೀರಿ, ಆ ಸಂಪ್ರದಾಯಗಳು ಮುರಿದುಹೋಗಿವೆ. ಆ ಸಂಪ್ರದಾಯಗಳನ್ನು ಮುರಿದರೆ, ನಮ್ಮ ಸಮಾಜದಲ್ಲಿ ಜಾತಿಯ ವಿಷಯದಲ್ಲಿ ಯಾವುದನ್ನು ಪವಿತ್ರವೆಂದು ಪರಿಗಣಿಸಲಾಗಿದೆ? ನಾವು ಪ್ರಜ್ಞಾಪೂರ್ವಕವಾಗಿ ಬ್ರೇಕ್ ಮಾಡಿದ್ದೇವೆ ಮತ್ತು ಅದು ನಮಗೆ ಬೇಡ ಎಂದು ಹೇಳಿದೆ.

ಅಸ್ಪೃಶ್ಯತೆ ಅಸಾಂವಿಧಾನಿಕ ಎಂದು ಹೇಳಲು ನಾವು ಇಲ್ಲಿಯವರೆಗೆ ಹೋಗಿದ್ದೇವೆ. ಬೇರೆ ಯಾವುದೇ ಸಂವಿಧಾನವು ಹಾಗೆ ಹೇಳುತ್ತದೆ ಎಂದು ನಾನು ಭಾವಿಸುವುದಿಲ್ಲ.

ಸಂಪ್ರದಾಯಗಳು ಇರುವ ಮಟ್ಟಿಗೆ ಇವೆ. ಆದರೆ ಅದೇ ಸಮಯದಲ್ಲಿ ಮದುವೆಯ ಪರಿಕಲ್ಪನೆಯು ವಿಕಸನಗೊಂಡಿದೆ ಎಂಬ ಅಂಶವನ್ನು ನಾವು ಜೀವಂತವಾಗಿರಿಸಬೇಕು" ಎಂದು ಪೀಠವು ಹೇಳಿದೆ.

ಈ ಸಂದರ್ಭದಲ್ಲಿ ಪ್ರತಿವಾದಿಗಳ ಪರ ಹಿರಿಯ ವಕೀಲ ರಾಕೇಶ್ ದ್ವಿವೇದಿ ಮಾತನಾಡಿ, "ವರದಕ್ಷಿಣೆ ನಿಷೇಧದಂತಹ ಸುಧಾರಣೆಗಳನ್ನು ಶಾಸಕಾಂಗವು ತೀರ್ಮಾನಿಸಬೇಕೆಂದು ನ್ಯಾಯಾಲಯಗಳು ಅಭಿಪ್ರಾಯಪಟ್ಟಿತ್ತು. ಈಗ ಸಲಿಂಗ ವಿವಾಹದ ವಿಷಯವನ್ನು ಸಂಸತ್ತಿಗೆ ಬಿಡುವುದು ಉತ್ತಮ ಎಂದು ವಾದಿಸಿದರು.

ಸಲಿಂಗ ಸಂಬಂಧ ಹೊಂದಿರುವ ವ್ಯಕ್ತಿಗಳಿಗೆ ಮದುವೆಯಾಗಲು ಸಂವಿಧಾನದ ಅಡಿಯಲ್ಲಿ ಮೂಲಭೂತ ಹಕ್ಕು ಇದೆಯೇ ಎಂಬುದು ಪರಿಗಣಿಸಬೇಕಾದ ಮೊದಲ ಪ್ರಶ್ನೆಯಾಗಿದೆ ಎಂದು ಅವರು ಹೇಳಿದರು. ಭಿನ್ನಲಿಂಗೀಯ ದಂಪತಿಗಳು ತಮ್ಮ ವೈಯಕ್ತಿಕ ಕಾನೂನು, ಸಂಪ್ರದಾಯ, ಧರ್ಮದ ಪ್ರಕಾರ ಮದುವೆಯಾಗುವ ಹಕ್ಕನ್ನು ಹೊಂದಿದ್ದಾರೆ ಎಂದು ದ್ವಿವೇದಿ ಹೇಳಿದರು.

ಅಂತರ್ಜಾತಿ ವಿವಾಹಕ್ಕೂ ಸಾಂಪ್ರದಾಯಿಕವಾಗಿ ಅನುಮತಿ ಇಲ್ಲ ಎಂದು ನ್ಯಾಯಮೂರ್ತಿ ರವೀಂದ್ರ ಭಟ್ ಇಲ್ಲಿ ಸೂಚಿಸಿದರು. ಆದಾಗ್ಯೂ, ಕಾಲಾನಂತರದಲ್ಲಿ, ಮದುವೆಯ ಸನ್ನಿವೇಶವು ಬದಲಾಗಿದೆ. ನ್ಯಾಯಾಧೀಶರು ಮೌಖಿಕವಾಗಿ ಹೇಳಿದರು.

## ಅನಧಿಕೃತ ಭೇಟಿ: ರಾಹುಲ್ ಗೆ ನೋಟೀಸ್ ಕಳಿಸಲಿರುವ ದೆಹಲಿ ವಿವಿ



ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿಗೆ ನೋಟೀಸ್ ಕಳಿಸಲಿರುವ ದೆಹಲಿ ವಿವಿ ಯಾವುದೇ ಅನಧಿಕೃತ ಭೇಟಿ ನೀಡದಂತೆ ಎಚ್ಚರಿಕೆ ನೀಡಲಿದೆ ಎಂದು ಹಿರಿಯ ಅಧಿಕಾರಿಯೊಬ್ಬರು ಹೇಳಿದ್ದಾರೆ.

ದೆಹಲಿ ವಿವಿ ಹಾಸ್ಟೆಲ್ ನಲ್ಲಿ ರಾಹುಲ್ ಗಾಂಧಿ ವಿದ್ಯಾರ್ಥಿಗಳನ್ನು ಭೇಟಿ ಮಾಡಿದ ಕೆಲವೇ ದಿನಗಳ ಬೆನ್ನಲ್ಲೇ ದೆಹಲಿ ವಿವಿ ಎಚ್ಚೆತ್ತುಕೊಂಡಿದ್ದು, ನೋಟೀಸ್ ಜಾರಿಗೊಳಿಸಲು ಮುಂದಾಗಿದೆ.

ಮಂಗಳವಾರ ಅಥವಾ ಬುಧವಾರದಂದು ನೋಟೀಸ್ ಜಾ–ರಿಯಾಗುವ ಸಾಧ್ಯತೆ ಇದೆ ಎಂದು ದೆಹಲಿ ವಿವಿ ರಿಜಿಸ್ಟಾರ್ ವಿಕಾಸ್ ಗುಪ್ತಾ ತಿಳಿಸಿದ್ದಾರೆ. ಈ ರೀತಿಯ ಭೇಟಿಯು ವಿದ್ಯಾರ್ಥಿಗಳ ಸುರಕ್ಷತೆಗೆ ಅಪಾಯವನ್ನುಂಟುಮಾಡುತ್ತದೆ ಮತ್ತು ಅಂತಹ ಯಾವುದೇ ಸಂವಹನಕ್ಕಾಗಿ ಸರಿಯಾದ ಶಿಷ್ಟಾಚಾರವನ್ನು ಅನುಸ–ರಿಸುವ ಅಗತ್ಯವಿದೆ ಎಂದು ವಿಶ್ವವಿದ್ಯಾಲಯ, ರಾಹುಲ್ ಗಾಂಧಿಗೆ ತಿಳಿಸುತ್ತದೆ ಎಂದು ವಿಕಾಸ್ ಗುಪ್ತಾ ತಿಳಿಸಿದ್ದಾರೆ.

ರಾಹುಲ್ ಗಾಂಧಿ ಶುಕ್ರವಾರ ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಪುರುಷರ ಹಾಸ್ಟೆಲ್‌ಗೆ ಭೇಟಿ ನೀಡಿದ ಗಾಂಧಿ, ಕೆಲವು ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು ಮತ್ತು ಅವರೊಂದಿಗೆ ಊಟ ಮಾಡಿದ್ದರು.

**ವಿಧಾನಸಭೆ ಸಾರ್ವತ್ರಿಕ ಚುನಾವಣೆ–ಮಾದರಿ ನೀತಿ ಸಂಹಿತೆ ಉಲ್ಲಂಘನೆ**

## 64.81 ಲಕ್ಷ ನಗದು, 137 ಲೀ. ಮದ್ಯ ವಶಕ್ಕೆ: ಜಿಲ್ಲಾ ಚುನಾವಣಾಧಿಕಾರಿ ಪವನ್‌ಕುಮಾರ್ ಮಾಲಪಾಟಿ

ಬಳ್ಳಾರಿ: ವಿಧಾನಸಭೆ ಸಾರ್ವತ್ರಿಕ ಚುನಾವಣೆ ಅಂಗವಾಗಿ ಜಿಲ್ಲೆಯಲ್ಲಿ ತಂಡ ಹಾಗೂ ಪೊಲೀಸ್ ಇಲಾಖೆ ತಪಾಸಣೆ ವೇಳೆ ಸೋಮವಾರದಂದು ಸೂಕ್ತ ದಾಖಲೆಯಿಲ್ಲದ 64,81,110 ರೂ. ಮೊತ್ತದ ನಗದು ಮತ್ತು ಅನಧಿಕೃತವಾಗಿ ಸಾಗಿಸುತ್ತಿದ್ದ 60,513 ರೂ. ಮೌಲ್ಯದ 137.08 ಲೀಟರ್ ಮದ್ಯ ವಶಪಡಿಸಿಕೊಳ್ಳಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಪವನ್‌ಕುಮಾರ್ ಮಾಲಪಾಟಿ ಅವರು ತಿಳಿಸಿದ್ದಾರೆ.



ಜಿಲ್ಲೆಯಾದ್ಯಂತ ಮಾದರಿ ನೀತಿ ಸಂಹಿತೆ ಕಟ್ಟುನಿಟ್ಟಿನ ಜಾರಿಗಾಗಿ ಜಿಲ್ಲೆಯಲ್ಲಿ 3 ಚುನಾವಣಾ ವೆಚ್ಚ ವೀಕ್ಷಕರು, 51 ಫ್ಲೈಯಿಂಗ್ ಸ್ಕ್ವಾಡ್, 27 ತಂಡ ಹಾಗೂ 7 ಅಬಕಾರಿ ತಂಡಗಳು ಈಗಾಗಲೇ ಕಾರ್ಯಪ್ರವೃತ್ತವಾಗಿ ತಪಾಸಣೆ ನಡೆಸುತ್ತಿವೆ.

ಫ್ಲೈಯಿಂಗ್ ಸ್ಕ್ವಾಡ್ ತಂಡವು ತಪಾಸಣೆ ವೇಳೆ 61,70,310 ರೂ. ಮೊತ್ತದ ನಗದು ಹಾಗೂ ಪೊಲೀಸ್ ಇಲಾಖೆ ತಪಾಸಣೆ ವೇಳೆ 3,10,800 ರೂ. ನಗದು ಸೇರಿದಂತೆ ಒಟ್ಟು 64,81,110 ರೂ. ಮೊತ್ತದ ನಗದು ಮೊತ್ತವನ್ನು ವಶಪಡಿಸಿಕೊಳ್ಳಲಾಗಿದೆ.

ಅಬಕಾರಿ ಇಲಾಖೆಯಿಂದ 20,117 ರೂ. ಮೌಲ್ಯದ 46.48 ಲೀಟರ್ ಮದ್ಯ ಹಾಗೂ ಪೊಲೀಸ್ ಇಲಾಖೆಯಿಂದ 40,396 ರೂ. ಮೌಲ್ಯದ 90.60 ಲೀಟರ್ ಮದ್ಯ ಸೇರಿದಂತೆ ಒಟ್ಟು 60,513 ರೂ. ಮೌಲ್ಯದ 137.08 ಲೀಟರ್ ಮದ್ಯ ವಶಪಡಿಸಿಕೊಂಡು ಪ್ರಕರಣ ದಾಖಲಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ತಿಳಿಸಿದ್ದಾರೆ.

## ಸಿಡಿಲು ಬಡಿದು ಯುವಕ ಸ್ಥಳದಲ್ಲಿಯೇ ಸಾವು



ಕೊಪ್ಪಳ : ತಾಲೂಕಿನ ಬೀರಲದಿನ್ನಿ ಗ್ರಾಮದ ಮಂಗಳವಾರ ಸಂಜೆ ಸುರಿದ ಗಾಳಿಗೆ ಗ್ರಾಮದ ಪಕ್ಕದಲ್ಲೇ ಇರುವ ಹೊಲದಲ್ಲಿ ಕೆಲಸ ಮಾಡುವಾಗ ಕನಕಪ್ಪ ತಂದೆ ಹೊನ್ನನಗೌಡ ಎಂಬುವರಿಗೆ ಸಿಡಿಲು ಬಡಿದು ಸ್ಥಳದಲ್ಲಿಯೇ ಮೃತ ಪಟ್ಟಿರುತ್ತಾನೆ.

ವಿಷಯ ತಿಳಿದು ಸ್ಥಳಕ್ಕೆ ಬೇವೂರು ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ರಮೇಶ ಜಾರಕಿಹೊಳಿ ವಿರುದ್ಧ ಸಂಚು

## ಎಚ್ಚರಿಕೆ ನೀಡಿದ ಅಭಿಮಾನಿಗಳು

ಬೆಳಗಾವಿ : ವಿಧಾನಸಭಾ ಚುನಾವಣೆಯಲ್ಲಿ ಹೇಗಾದರೂ ಮಾಡಿ ರಮೇಶ ಜಾರಕಿಹೊಳಿಯವರ ವರ್ಚಸ್ಸು ಕಡಿಮೆ ಮಾಡಲು ಪ್ರತಿಪಕ್ಷ ದಂಡು ಇನ್ನಿಲ್ಲದ ಷಡ್ಯಂತ್ರ ನಡೆಸಿರುವುದು ಇದೀಗ ಬಯಲಾಗಿದೆ ಎಂಬ ಮಾಹಿತಿ ಲಭ್ಯವಾಗಿದೆ.

ಅತ್ಯಂತ ಪ್ರಬಲರಾಗಿರುವ ಎದುರಾಳಿಗಳನ್ನು ಹಣಿಯಲು ವಿರೋಧ ಪಕ್ಷದ ಸುಳ್ಳಿನ ಫ್ಯಾಕ್ಟರಿಯಲ್ಲಿ ವಿಡಿಯೋ– ಆಡಿಯೋಗಳ ಬಹುದೊಡ್ಡ ಸಂಗ್ರಹವೇ ಇದೆ. ಇದು ರಾಜ್ಯದ ಜನತೆಗೆ ಗೊತ್ತಿರುವ ವಿಷಯ. ಕಾಲಕಾಲಕ್ಕೆ ಇದನ್ನು ಹೊರತಂದು ತಲ್ಲಣ ಉಂಟುಮಾಡಲಾಗುತ್ತಿದೆ. ಇದೀಗ ವಿಧಾನಸಭಾ ಚುನಾವಣೆ ಕಾಲಕ್ಕೆ ರಾಜ್ಯ ರಾಜಕಾರಣದ ಗತಿಯನ್ನೇ ಬದಲಾಯಿಸಲು ಸುಳ್ಳಿನ ಸರಮಾಲೆಯ ಆಡಿಯೋ ವಿಡಿಯೋ ಸಜ್ಜುಗೊಳಿಸಿಕೊಂಡು ಇಟ್ಟುಕೊಂಡಿದ್ದಾರೆ ಎಂದು ಸುಳ್ಳಿನ ಫ್ಯಾಕ್ಟರಿಯಿಂದಲೇ ಖಚಿತ ಮೂಲಗಳು ಮಾಹಿತಿ ನೀಡಿವೆ.

ಬೆಳಗಾವಿಯಲ್ಲಿ ರಾಣಿ ಚನ್ನಮ್ಮ, ಸಂಗೊಳ್ಳಿ ರಾಯಣ್ಣ ಹಾಗೂ ಇನ್ನಿತರ ಮಹಾಪುರುಷರ ಬಗ್ಗೆ ರಮೇಶ ಜಾರಕಿಹೊಳಿಯವರು ಅವಹೇಳನಕಾರಿಯಾಗಿ ಮಾತನಾಡಿದ್ದಾರೆ ಎಂಬ ಆಡಿಯೋ–ವಿಡಿಯೋ ವೈರಲ್ ಮಾಡಲು ಪ್ರತಿಪಕ್ಷ ವೇದಿಕೆ ಸಜ್ಜುಗೊಳಿಸಿ



ಇಟ್ಟುಕೊಂಡಿದೆ. ಚುನಾವಣೆಗೆ ಇನ್ನೇನು ಒಂದೇ ದಿನ ಬಾಕಿ ಇರುವಾಗಲೇ ಇದನ್ನು ಯಾವುದೇ ಕ್ಷಣದಲ್ಲಾದರೂ ಸ್ಫೋಟಗೊಳಿಸಲು ಮುಂದಾಗಿರುವುದು ತಿಳಿದು ಬಂದಿದ್ದು ಈ ನಿಟ್ಟಿನಲ್ಲಿ ಬೆಳಗಾವಿ ಪೊಲೀಸರು ಇದರ ಹಿಂದೆ ಯಾರು ಯಾರು ಇದ್ದಾರೆ ಎಂಬ ಬಗ್ಗೆ ನಿಖರ ಮಾಹಿತಿ ಕಲೆ ಹಾಕಿದ್ದಾರೆ ಎಂದು ತಿಳಿದು ಬಂದಿದೆ.

ರಾಜ್ಯ ರಾಜಕಾರಣದಲ್ಲಿ ಪ್ರಭಾವ ಬೀರಿರುವ ಗೋಕಾಕ ಬಿಜೆಪಿ ಅಭ್ಯರ್ಥಿ ರಮೇಶ ಜಾರಕಿಹೊಳಿ ಅವರು ಈಗಾಗಲೇ ಇಂತಹ ಕುತಂತ್ರದ ಬಗ್ಗೆ ಹಲವಾರು ಕಾರ್ಯಕ್ರಮಗಳಲ್ಲಿ ಸಾರ್ವಜನಿಕರ ಮುಂದೆ ಸತ್ಯ ಬಿಚ್ಚಿಟ್ಟಿದ್ದಾರೆ. ಆದರೂ ಇದೀಗ ಚುನಾವಣೆ ಹೊತ್ತಲ್ಲಿ ಹೇಗಾದರೂ ಆಗಲಿ,

ಒಟ್ಟಾರೆ ತಮಗೆ ಲಾಭವಾಗಬೇಕು ಎಂಬ ದುಃಸಾಹಸಕ್ಕಿಳಿದು ಆಡಿಯೋ–ವಿಡಿಯೋ ಬಿಡುಗಡೆಗೆ ಮುಂದಾಗಿದ್ದಾರೆ. ಆದರೆ.

ರಾಜ್ಯದಲ್ಲಿ ಈಗಾಗಲೇ ಹತ್ತು ಹಲವು ಸುಳ್ಳು ಸುದ್ದಿಗಳನ್ನು ಹರಿಬಿಡುವ ಮೂಲಕ ಬಿಜೆಪಿ ಬಗ್ಗೆ ಜನರಲ್ಲಿ ತಪ್ಪು ಅಭಿಪ್ರಾಯ ಮೂಡಿಸುತ್ತಿರುವ ಪ್ರತಿಪಕ್ಷದವರ ಇಂತಹ ಯಾವುದೇ ಆಟಕ್ಕೆ ಮತದಾರ ಪ್ರಭುಗಳು ಕಿವಿಗೊಡದೆ ತಕ್ಕ ಪಾಠ ಕಲಿಸುವಂತೆ ರಮೇಶ ಜಾರಕಿಹೊಳಿ ಅಭಿಮಾನಿಗಳು ಜನರಲ್ಲಿ ಮನವಿ ಮಾಡಿಕೊಂಡಿದ್ದಾರೆ.

ರಮೇಶ ಜಾರಕಿಹೊಳಿಯವರು ಕಳೆದ ನಾಲ್ಕು ದಶಕಗಳಿಂದ ರಾಜ್ಯ ರಾಜಕಾರಣದಲ್ಲಿ ಗುರುತಿಸಿಕೊಂಡಿದ್ದಾರೆ.

ಅವರು ಎಂದಿಗೂ ಜಾತಿ ಹಾಗೂ ಮಹಾಪುರುಷರ ಬಗ್ಗೆ ಅವಹೇಳನಕಾರಿಯಾಗಿ ಮಾತನಾಡಿಲ್ಲ. ಸರ್ವ ಜಾತಿ ಹಾಗೂ ಧರ್ಮ ಬಾಂಧವರನ್ನು ಸಮಾನವಾಗಿ ಕಾಣುತ್ತ ಬಂದಿದ್ದಾರೆ. ಅವರ ವ್ಯಕ್ತಿತ್ವಕ್ಕೆ ಮಸಿ ಬಳಿಯಲು ಯಾರೇ ಪ್ರಯತ್ನ ನಡೆಸಿದರೂ ತಕ್ಕ ಪಾಠ ಕಲಿಸಲಾಗುತ್ತದೆ ಎಂದು ರಮೇಶ ಜಾರಕಿಹೊಳಿ ಅಭಿಮಾನಿಗಳು ಉಗ್ರ ಎಚ್ಚರಿಕೆ ರವಾನಿಸಿದ್ದಾರೆ.

# ಕಾರಿನಲ್ಲಿ ಸಾಗಿಸ್ತಿದ್ದ ಟೀ ಶರ್ಟ್ ಬಂಡಲ್ ಜಪ್ತಿ

ಬಾಗಲಕೋಟೆ: ಕಾರಿನಲ್ಲಿ ಸಾಗಾಟ ಮಾಡುತ್ತಿದ್ದ ಟೀ ಶರ್ಟ್ ಬಂಡಲ್ ಇದ್ದ ವಾಹನವನ್ನು ಪೊಲೀಸರು ಜಪ್ತಿ ಮಾಡಿರುವ ಘಟನೆ ಬಾಗಲಕೋಟೆ ನಗರದ ಬಸವೇಶ್ವರ ಸರ್ಕಲ್ ಬಳಿ ನಡೆದಿದೆ.

ನಗರದ ಬಸವೇಶ್ವರ್ ಸರ್ಕಲ್ ಬಳಿಯ ಪ್ರಭು ನಾರಾ ಎಂಬ ವ್ಯಾಪಾರಸ್ಥರ ಗೋದಾಮಿನಲ್ಲಿದ್ದ ಕಾರು ಒಂದರಲ್ಲಿ ಟೀಶರ್ಟ್ ಬಂಡಲ್ ಇರುವುದು ಪತ್ತೆಯಾಗಿದೆ. ನಾರಾ ಅವರು ಬಿಜೆಪಿ ಅಭ್ಯರ್ಥಿ ವೀರಣ್ಣ ಚರಂತಿಮಠ ನಿಕಟವರ್ತಿಯಾಗಿದ್ದು, ಮತದಾರರಿಗೆ ಟೀ ಶರ್ಟ್ ಉಡುಗೊರೆ ನೀಡಲು ತರಿಸಿದ್ದಾರೆಂದು ಆರೋಪಿಸಿ, ಕೇಸ್ ದಾಖಲಿಸುವಂತೆ ಆಗ್ರಹಿಸಿ ಕಾಂಗ್ರೆಸ್ ಹಾಗೂ ಪಕ್ಷೇತರ ಅಭ್ಯರ್ಥಿಯ ಬೆಂಬಲಿಗರು ಪ್ರತಿಭಟನೆ ನಡೆಸಿದರು.

ತಪಾಸಣೆ ನಡೆಸಿ ಅವರ ವಿರುದ್ಧ ದೂರು ದಾಖಲಿಸಿ ಎಂದು ಪೊಲೀಸರಿಗೆ ಆಗ್ರಹಿಸಿದರು. ಆದರೆ ಪ್ರಭು ನಾರಾ ಅವರು ಕಾರು ಕೀ ನೀಡದೇ ಕೆಲ ಹೊತ್ತು ಅಧಿಕಾ–ರಿಗಳನ್ನ ಕಾಯಿಸಿ, ಹೈಡ್ರಾಮಾ ಸೃಷ್ಟಿಸಿದರು. ನಂತರ ಕಾರಿನಲ್ಲಿದ್ದ ಬಂಡಲ್ಗಳನ್ನ ಓಪನ್



ಮಾಡಿಸುವಂತೆ ಕೆಲ ಕಾರ್ಯಕರ್ತರು ಅಧಿಕಾರಿಗಳ ಎದುರೇ ಪ್ರತಿಭಟನೆ ನಡೆಸಿದಾಗ, ಕಾರ್ ಡೋರ್ ಓಪನ್ ಮಾಡಿಸಲಾಯಿತು. ಈ ವೇಳೆ ಕಾರಿನಲ್ಲಿದ್ದ ಟೀ ಶರ್ಟ್ ಮೇಲೆ '4' ಸಂಖ್ಯೆ ಇರುವುದು ಬೆಳಕಿಗೆ ಬಂತು. ಇದನ್ನೂ ಓದಿ: ಮತದಾನದ ಮಮತೆಯ ಕರೆಯೋಲೆ ಆಮಂತ್ರಣ ಪತ್ರಿಕೆ ಬಿಡುಗಡೆ

ಬಿಜೆಪಿ ಅಭ್ಯರ್ಥಿ ವೀರಣ್ಣ ಚರಂತಿಮಠ ಅವರ ಕ್ರಮಸಂಖ್ಯೆ ಸಹ '4' ಆಗಿರೋದ್ರಿಂದ, ಮತದಾರರಿಗೆ ಆಮಿಷ ಒಡ್ಡಲು ಟೀ ಶರ್ಟ್ ನೀಡಲು ಮುಂದಾಗಿದ್ದಾರೆಂದು ಎಂದು ಕಾಂಗ್ರೆಸ್ ಕಾರ್ಯಕರ್ತರು ಆಕ್ರೋಶ ಹೊರಹಾಕಿದರು. ಟೀ ಶರ್ಟ್ ಬಂಡಲ್ ಗಳು ಇದ್ದ ಕಾರನ್ನು ಜಪ್ತಿ ಮಾಡಿದ ಅಧಿಕಾ–ರಿಗಳು. ನಂತರ ನಾರಾ ಅವರ ಗೋದಾಮು ಪರಿಶೀಲಿಸಿದ್ರು. ಈ ಬಗ್ಗೆ ಸೂಕ್ತ ತನಿಖೆ ನಡೆಸಿ ತಪ್ಪಿತಸ್ಥರಾಗಿದ್ರೆ, ಅವರ ವಿರುದ್ಧ ಕೇಸ್ ದಾಖಲಿಸಲಾಗುವುದು ಎಂಬ ಭರವಸೆ ನೀಡಿದರು.

ಇತ್ತ ಗೋದಾಮಿನ ಮಾಲೀಕ ಪ್ರಭು ನಾರಾ, ಈ ಟೀ ಶರ್ಟ್ ಗಳಿಗೂ ಹಾಗೂ ಚುನಾವಣೆಗೂ ಸಂಬಂಧ ಇಲ್ಲ, ಯಾವುದೇ ಪಕ್ಷದ ಚಿನ್ಹೆ ಇಲ್ಲ, ಕ್ರಿಕೆಟ್ ಪಂದ್ಯಾವಳಿ ಆಯೋಜನೆ ಮಾಡಲು ಟೀ ಶರ್ಟ್ ತ–ರಿಸಲಾಗಿದೆ.

ಇದರ ಎಲ್ಲಾ ಬಿಲ್ಗಳು ನಮ್ಮ ಬಳಿ ಇವೆ. ಇಂದು ಬೆಳಗ್ಗೆ ಅಧಿಕಾರಿಗಳಿಗೆ ಬಿಲ್ ತೋ–ರಿಸುವುದಾಗಿ ಹೇಳಿದರು. ಕೆಲ ಹೊತ್ತು ಬಸವೇಶ್ವರ ಸರ್ಕಲ್ ನಲ್ಲಿ ಬಿಗುವಿನ ವಾತಾವರಣ ನಿರ್ಮಾಣವಾಗಿತ್ತು. ನಂತರ ಪೊಲೀಸರು ಅಲ್ಲಿದ್ದ ಜನರನ್ನು ಚದುರಿಸಿ, ಟೀ ಶರ್ಟ್ ಬಂಡಲ್ ಇದ್ದ ಕಾರನ್ನು ಸೀಜ್ ಮಾಡಿ ಪೊಲೀಸ್ ಠಾಣೆಗೆ ಒಯ್ದರು.

## ಡಾಕ್ಟರೇಟ್ ಪ್ರಶಸ್ತಿ ಪ್ರಧಾನ



ಬೈಲಹೊಂಗಲ: ಪಟ್ಟಣದ ಹೊಸೂರು ರಸ್ತೆಯಲ್ಲಿನ ಶ್ರೀ ಭಗಳಾಂಭಾದೇವಿ ದೇವಸ್ಥಾನದ ಧರ್ಮದರ್ಶಿ ಹಾಗೂ ದೇವಿಯ ಆರಾಧಕ ಪೂಜ್ಯ ಈರಯ್ಯಸ್ವಾಮಿ ಅಡವಯ್ಯಾ ಹಿರೇಮಠ ಅವರಿಗೆ ಗೌರವ ಡಾಕ್ಟರೇಟ್ ಪ್ರಶಸ್ತಿ ಲಭಿಸಿದೆ.

ಗೋವಾದ ಇಂಟರರ್ನ್ಯಾಶನಲ್ ಹ್ಯೂಮನ್ ಡೆವಲಪಮೆಂಟ ಯೂನಿವರ್ಸಿಟಿ ಸಂಸ್ಥೆಯ ವತಿಯಿಂದ ಪಣಜಿಯ ಬ್ರಿಗ್ಯಾಂಜಾ ಮೇನ್ ಹಾಲ್‌ದಲ್ಲಿ ಈಚೆಗೆ ನಡೆದ ವಿವಿಧ ಕ್ಷೇತ್ರದ ಸಾಧಕರ ಸನ್ಮಾನ ಮತ್ತು ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ಧಾರ್ಮಿಕ ಹಾಗೂ ಸಾಮಾಜಿ–ಕ ಸೇವೆ ಪರಿಗಣಿಸಿ ಶ್ರೀಗಳಾದ ಈರಯ್ಯಸ್ವಾಮಿ ಅವರಿಗೆ ಗೌರವ ಡಾಕ್ಟರೇಟ್ ಪ್ರಶಸ್ತಿ ನೀಡಿ ಗೌರವಿಸಲಾಗಿದೆ.

ಶ್ರೀಗಳಿಗೆ ಗೌರವ ಡಾಕ್ಟರೇಟ್ ಪ್ರಶಸ್ತಿ ದೊರೆತಿದ್ದಕ್ಕೆ ಪಟ್ಟಣದ ಗಣ್ಯ ಮಾನ್ಯರು ಅಭಿನಂದಿಸಿದ್ದಾರೆ.

## ಮಿಕ್ಸರಿಗೆ ಬೆಂಕಿ ಇಟ್ಟ, ಬೆಳಗಾವಿ ಗ್ರಾಮೀಣ ಕ್ಷೇತ್ರದ ಮರಾಠಿ ಮತದಾರರು



ಬೆಳಗಾವಿ : ರಾಜ್ಯ ವಿಧಾನಸಭೆ ಚುನಾವಣೆ ಹಿನ್ನೆಲೆಯಲ್ಲಿ, ಬೆಳಗಾವಿ ಗ್ರಾಮೀಣ ಕ್ಷೇತ್ರದಲ್ಲಿ ಕೆಲವು ದಿನಗಳ ಹಿಂದೆ ಮತದಾರರಿಗೆ ಕಾಣಿಕೆ ( ಮಿಕ್ಸರ) ನೀಡಿ ಮತ ಸೆಳೆಯುವ ಮಾಹಿತಿ ದೊರಕಿದೆ.

ಕ್ಷೇತ್ರದ ತುಂಬೆಲ್ಲ ಮಹಿಳೆಯರು ಬಂದು ಮೀಕ್ಸರ ತಗೆದುಕೊಂಡು ಹೋಗುತ್ತಿದ್ದರು ಎಂಬ ಸುದ್ದಿ ಇತ್ತು, ಕ್ಷೇತ್ರದ ಮತದಾರರು ಆಮಿಷ ಒಡ್ಡಿ, ಮತದಾರರನ್ನು ದಾರಿ ತಪ್ಪಿಸಿ, ಮತಗಳಿಸುವ ಹುನ್ನಾರ ಇದೆಂದು, ಬಿಜೆಪಿ ಕಾರ್ಯಕರ್ತರು ಆರೋಪ ಮಾಡಿದ್ದರು.

ಈಗ ಚುನಾವಣೆ ಇನ್ನೇನು ಎರಡು ದಿನ ಇರುವಾಗ ಬೆಳಗಾವಿ ಗ್ರಾಮೀಣ ಮತಕ್ಷೇತ್ರದ ಬೇನಕನಹಳ್ಳಿ ಗ್ರಾಮದ ಮರಾಠಿ ಮತದಾರರು ತಮಗೆ ನೀಡಿದ ಮಿಕ್ಸರಗಳನ್ನು ಸುಟ್ಟು ಹಾಕಿದ್ದಾರೆ.

ಅವರು ಹೇಳಿದ ಪ್ರಕಾರ, ಹಿಂದೆ ಗ್ರಾಮೀಣ ಕಾಂಗ್ರೆಸ್ ಶಾಸಕಿ ಅವರ ಭಾವಚಿತ್ರ ಇರುವ ಮಿಕ್ಸರ್ ನಮಗೆ ದೊರೆತದ್ದು, ಈಗ ಅವರ ಕಡೆಯವರು ಬಂದು ನಾವು ನಿಮಗೆ ಮೀಕ್ಸರ್ ನೀಡಿದ್ದೇವೆ ಕಾಂಗ್ರೆಸ್ಸಿಗೆ ಮತ ನೀಡಿ ಎಂದು ಕೇಳಿದಾಗ, "ನಾವು ಸ್ವಾಭಿಮಾನಿಗಳು ನಮ್ಮ ಮತ ಮಾರಾಟಕ್ಕಿಲ್ಲ" ಎಂದು ಹೇಳಿ ನಮಗೆ ದೊರೆತ ಈ ಮೀಕ್ಸರಗಳನ್ನು ಸುಟ್ಟಿದ್ದೇವೆ ಎಂದಿದ್ದಾರೆ.

## ಗೋವಾದಿಂದ ನಿಪ್ಪಾಣಿಗೆ ಆಗಮಿಸಿದ ಯುದ್ಧವಿಮಾನದ ಬಿಡಿ ಭಾಗಗಳು



ನಿಪ್ಪಾಣಿ: ನಗರಕ್ಕೆ ಬೆಳಗಾವಿ ನಾಕಾ ಬಳಿಯ ಛತ್ರಪತಿ ಶಿವಾಜಿ ಉದ್ಯಾನವನದಲ್ಲಿರುವ ಯುದ್ಧ ಸ್ಮಾರಕದಲ್ಲಿ ಪ್ರದರ್ಶನಗೊಳ್ಳಲಿರುವ ಬೃಹತ್ ಆಕಾರದ ವಿಮಾನವನ್ನು ಗೋವಾದಿಂದ ನಗರಕ್ಕೆ ಮಂಗಳವಾರ ಬಂದಿದೆ.

4 ದೊಡ್ಡ ಲಾರಿಗಳ ಮೂಲಕ ಈ ಯುದ್ಧವಿಮಾನದ ಬಿಡಿಭಾಗಗಳು ಬಂದಿವೆ. ಶೀಘ್ರದಲ್ಲೇ ಈ ವಿಮಾನದ ಬಿಡಿಭಾಗಗಳನ್ನು ಜೋಡಿಸಿ ಬೃಹತ್ ವಿಮಾನವನ್ನು ಪ್ರದರ್ಶನಕ್ಕೆ ಇಡಲಾಗಲಿದೆ. ಇದನ್ನು ನೋಡಲು ನಾಗರಿಕರಲ್ಲಿ ಕುತೂಹಲ ಮೂಡಿದೆ.

ಸ್ಥಳೀಯ ವಿದ್ಯಾರ್ಥಿಗಳಿಗೆ, ಯುವಕರಿಗೆ ಇದು ದೇಶದ ಸೇವೆಗಾಗಿ ಪ್ರೇರಣೆ ಸಿಗಲಿ ಎಂಬ ಸದುದ್ದೇಶದಿಂದ ಕೇಂದ್ರ ಸಕಾರವು ಈ ಮ್ಯುಜಿಯಂಗೆ ಅನುಮತಿ ನೀಡಿ ವಿಮಾನವನ್ನು ನಗರಕ್ಕೆ ಕಳುಹಿಸಿದೆ.

ಸಂಸದ ಅಣ್ಣಾಸಾಹೇಬ ಜೊಲ್ಲೆ ಹಾಗೂ ಸಚಿವೆ ಶಶಿಕಲಾ ಜೊಲ್ಲೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರನ್ನು ಭೇಟಿ ಮಾಡಿ ನಗರದಲ್ಲಿ ಯುದ್ಧವಿಮಾನ ಸ್ಮಾರಕ ನಿರ್ಮಾಣಕ್ಕೆ ಒತ್ತಾಯಿಸಿದ್ದರು.

ಅದರಂತೆ ಈ ಯುದ್ಧ ವಿಮಾನವು ನಗರಢಕ್ಕೆ ಆಗಮಿಸಿದೆ.

ಇದಕ್ಕೆ ಸುಮಾರು ಎರಡೂವರೆ ಕೋಟಿ ರೂಪಾಯಿ ವೆಚ್ಚವಾಗಲಿದೆ.

ಈ ವಿಮಾನವನ್ನು ರಾಜಾ ಛತ್ರಪತಿ ಶಿವಾಜಿ ಉದ್ಯಾನವನದ ಸೌಂದರ್ಯೀಕರಣದ ಜೊತೆಗೆ ಯುದ್ಧವಿಮಾನದ ಸ್ಥಾಪಿನೆ ಕಾರ್ಯ ನಡೆಯಲಿದೆ.

ತಾಲೂಕು ಸೇರಿದಂತೆ ಸುತ್ತಮುತ್ತಲಿನ ಪ್ರದೇಶಗಳ ಮಕ್ಕಳಿಂದ ವೃದ್ಧರವರೆಗೆ ಎಲ್ಲರೂ ನಿಜವಾದ ಯುದ್ಧ ವಿಮಾನ ತಮ್ಮ ಕಣ್ಣುಗಳಿಂದ ನೋಡಲಿದ್ದಾರೆ.

## 15 ಲಕ್ಷ ಹಣ ಪತ್ತೆ

ಚಿಕ್ಕೋಡಿ: ತಾಲೂಕಿನ ಮಾಂಜರಿ ಚೆಕ್ಪೋಸ್ಟ್ ಬಳಿ ಹಣ ವಶ. ಕಾರು ತಪಾಸಣೆ ವೇಳೆ ಚೀಲದಲ್ಲಿ 15 ಲಕ್ಷ ಹಣ ಪತ್ತೆ ಮಹಾರಾಷ್ಟ್ರದ ಗಡಹಿಂಗ್ಲಜನಿಂದ ನಿಂದ ಮಾ–ಂಜರಿಗೆ ಬರುತ್ತಿದ್ದ ಕಾರು. ವ್ಯಕ್ತಿ ಬಳಿ ಇದ್ದ ಹಣವನ್ನು ವಶಕ್ಕೆ ಪಡೆದ ಪೊಲೀಸರು ಆದಾಯ ತೆರಿಗೆ ಇಲಾಖೆಗೆ ಮಾಹಿತಿ ನೀಡಿದ ಪೊಲೀಸರು ಚಿಕ್ಕೋಡಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ.

## ಮತಗಟ್ಟೆಗೆ ತೆರಳಿದ ಚುನಾವಣಾ ಸಿಬ್ಬಂದಿ: ಮತದಾನಕ್ಕೆ ಕ್ಷಣಗಣನೆ

ದೇವರಹಿಪ್ಪರಗಿ: ಪಟ್ಟಣದ ಎ ಬಿ ಸಾಲಕ್ಕಿ ಪದವಿಪೂರ್ವ ಕಾಲೇಜಿನ ಆವರಣದಲ್ಲಿ 2023ನೇ ಸಾಲಿನ ವಿಧಾನಸಭೆ ಚುನಾವಣೆಯ ನಿಮಿತ್ತ ಎಲ್ಲಾ ಮತಗಟ್ಟೆಗಳಿಗೆ ಚುನಾವಣಾ ಕಂಟ್ರೋಲ್ ಯುನಿಟ್, ಬ್ಯಾಲೆಟ್ ಯುನಿಟ್, ವಿವಿಪ್ಯಾಡ್, ಶಾಹಿ, ಇನ್ನಿತರ ಸಾಮಗ್ರಿಗಳನ್ನು ಸಿಬ್ಬಂದಿಗಳಿಗೆ ನೀಡಿ ಆಯಾ ಮತಗಟ್ಟೆಗಳಿಗೆ ಕಳುಹಿಸಿಕೊಡಲಾಯಿತು.

ಚುನಾವಣಾಧಿಕಾರಿ ಡಾ ದುರಗೇಶ ಮಾತನಾಡಿ ತಾಲೂಕಿನಲ್ಲಿ ಒಟ್ಟು 219131




ಮತದಾರರಿದ್ದು, ಹೆಚ್ಚುವರಿ ಮತಗಟ್ಟೆ ಸೇರಿ 252 ಮತಗಟ್ಟೆಗಳಿದ್ದು, ಪ್ರತಿ ಮತಗಟ್ಟೆಗೆ ಪಿಆರ್‌ಓ, ಎಪಿಆರ್‌ಓ, ಪಿ.ಓ, ಆಯಾ ಮತ್ತು ಭದ್ರತೆ ಸಿಬ್ಬಂದಿಗಳನ್ನು ನೇಮಿಸಲಾಗಿದೆ.

ಎಲ್ಲಾ ಸಿಬ್ಬಂದಿಗಳಿಗೆ ರೂಟ್ ಮೂಲಕ ಸಾರಿಗೆ ಬಸ್ಸು ಮತ್ತು ಟ್ರಕ್ಸ್ ಮೂಲಕ ಮತಗಟ್ಟೆಗಳಿಗೆ ತಲುಪಿಸಲಾಗುತ್ತದೆ.

ಮತದಾನಕ್ಕೆ ಕ್ಷಣಗಣನೆ ಆರಂಭವಾಗಿದ್ದು, ಶಾಂತಿಯುತ ಹಾಗೂ ಪಾರದರ್ಶಕ ಚುನಾವಣೆ ನಡೆಸಲು ಪೊಲೀಸ್ ಇಲಾಖೆಯಿಂದ 531 ಸಿಬ್ಬಂದಿ ಯೋಜನೆ ಮಾಡಲಾಗಿದೆ, ಆಯೋಗದ ಮಾರ್ಗದರ್ಶನದಂತೆ ಸಕಲ ಸಿದ್ದತೆಯನ್ನು ಕೈಗೊಳ್ಳಲಾಗಿದೆ ಎಂದು ಹೇಳಿದರು.

ಪ್ರತಿಯೊಬ್ಬರು ತಪ್ಪದೇ ಮತದಾನ ಮಾಡಿ ಪ್ರಜಾಪ್ರಭುತ್ವದ ಮೌಲ್ಯ ಕಾಪಾಡಬೇಕೆಂದು ತಿಳಿಸಿದರು.

ಇದೇ ವೇಳೆ ತಹಶೀಲ್ದಾರ್ ಕವಿತಾ ಆರ್ ಉಪ ತಹಶೀಲ್ದಾರುಗಳಾದ ಶ್ರೀಮತಿ ಇಂದಿರಾ ಬಳಗನೂರ, ಮಹಿಪತಿ ದೇಸಾಯಿ, ಎಸ್ ಎಸ್ ತಾವರಖೇಡ, ಡಿವೈಎಸ್‌ಪಿ ವಿದ್ಯಾಧರ ನಾಯಕ, ಪಿಎಸ್ಐ ಆರ್ ವೈ ಬೀಳಗಿ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು, ಕಂದಾಯ ಇಲಾಖೆಯ ಅಧಿಕಾರಿಗಳು ಚುನಾವಣೆ ಪ್ರಕ್ರಿಯೆಗೆ ಸಾಥ್ ನೀಡಿದರು.

## ಕೊನೆ ಕ್ಷಣದಲ್ಲಿ ಜೆಡಿಎಸ್ ಗೆ ಶಾಕ್: ಜಾಕೀರ್ ನಿವೃತ್ತಿ ಘೋಷಣೆ

ಸಾಗರ: ಸಾಗರ ವಿಧಾನಸಭಾ ಕ್ಷೇತ್ರದಲ್ಲಿ ಜೆಡಿಎಸ್ ಪಕ್ಷದ ಅಧಿಕೃತ ಅಭ್ಯರ್ಥಿಯಾಗಿದ್ದ ನಗರಸಭೆ ಸದಸ್ಯ ಸೈಯ್ಯದ್ ಜಾಕೀರ್ ಚುನಾವಣಾ ಕಣದಿಂದ ಹಿಂದಕ್ಕೆ ಸರಿದಿರುವುದಾಗಿ ಸೋಮವಾರ ಹೇಳಿಕೆ ನೀಡಿದ್ದಾರೆ.

ಕಳೆದ ಮೂರ್ನಾಲ್ಕು ದಿನಗಳಿಂದ ಕಾಡಿರುವ ಅನಾರೋಗ್ಯ ಹಾಗೂ ಕೌಟುಂಬಿಕ ಕಾರಣಗಳಿಂದ ಈ ರೀತಿಯ ನಿವೃತ್ತಿಯ ಘೋಷಣೆ ಮಾಡಬೇಕಾಯಿತು ಎಂದು ಅವರು ಸ್ಪಷ್ಟನೆ ನೀಡಿದ್ದಾರೆ.

ನನ್ನ ನಿರ್ಧಾರದ ಹಿಂದೆ ಯಾರದ್ದೇ ಒತ್ತಡ ಇಲ್ಲ. ಕೆಲವು ಹಿರಿಯರು ಈ ಬಾರಿ ಚುನಾವಣೆಯ ಸ್ಪರ್ಧೆ ಬೇಡ ಎಂದು ಸಲಹೆ ನೀಡಿದ್ದರಷ್ಟೇ. ನನ್ನ ನಿರ್ಧಾರದ ಕುರಿತು



ಪಕ್ಷದ ಅಧ್ಯಕ್ಷ ಸಿ.ಎಂ.ಇಬ್ರಾಹಿಂ ಹಾಗೂ ಹಿರಿಯರಾದ ವೈ. ಎಸ್.ವಿ.ದತ್ತ ಅವರನ್ನು ಸಂಪರ್ಕಿಸುವ ಪ್ರಯತ್ನ ನಡೆಸಿದರೂ ಯಶಸ್ವಿಯಾಗಿಲ್ಲ ಎಂದು ಅವರು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಜಾತ್ಯಾತೀತ ಶಕ್ತಿಗಳನ್ನು ಬೆಂಬಲಿಸಬೇಕು ಎಂಬುದಷ್ಟೇ ನನ್ನ ವೈಯಕ್ತಿಕ ನಿಲುವು. ಚುನಾವಣೆಗೆ ಸ್ಪರ್ಧಿಸಿದಾಗ ಬಿಜೆಪಿಯ ಹಾಲಪ್ಪ ಅವರಿಂದ ಹಣ ಪಡೆದೆ ಎಂದು ವದಂತಿ ಹಬ್ಬಿತ್ತು. ಈಗ ಬೇಳೂರು ಅವರ ಆಮಿಷಕ್ಕೆ ಬಲಿಯಾದೆ ಎಂಬ ವದಂತಿ ಹರಡಬಹುದು. ನಾನು ಯಾರಿಂದಲೂ ಹಣ ಪಡೆದಿಲ್ಲ. ಒಂದೊಮ್ಮೆ ಹಣ ಕೊಟ್ಟವರು ನಾನು ನಿವೃತ್ತನಾದರೆ ಸುಮ್ಮನೆ ಬಿಡುತ್ತಾರೆಯೇ ಎಂಬುದ ನ್ನಾದರೂ ಯೋಚಿಸಬೇಕು. ತಾಲೂಕು ಜೆಡಿಎಸ್ ಕಣದಲ್ಲಿರುವ ಯಾವ ಅಭ್ಯರ್ಥಿಯನ್ನು ಬೆಂಬಲಿಸಬೇಕು ಎಂದು ಘೋಷಿಸುವ ಅಧಿಕಾರ ತಾಲೂಕು ಅಧ್ಯಕ್ಷ ಕನ್ನಪ್ಪ ಹಾಗೂ ಇತರ ಪದಾಧಿಕಾ–ರಿಗಳದ್ದೇ ವಿನಾ ನನ್ನದಲ್ಲ ಎಂದು ತಿಳಿಸಿದರು.

## ಪುಟ್ಟ ಕಂದಮ್ಮನೊಂದಿಗೆ ಚುನಾವಣೆ ಕರ್ತವ್ಯಕ್ಕೆ ಹಾಜರಾದ ತಾಯಿ

ಬೆಂಗಳೂರು: ಕರ್ನಾಟಕ ಸಾರ್ವತ್ರಿಕ ವಿಧಾನಸಭಾ ಚುನಾವಣೆಗೆ ಮೇ 10 ರಂದು ಮತದಾನ ನಡೆಯಲಿದೆ. ಮತದಾನಕ್ಕೆ ಕೌಂಟ್‌ಡೌನ್ ಶುರುವಾಗಿದ್ದು, ಅಧಿಕಾರಿಗಳು ಸಕಲ ಸಿದ್ಧತೆ ಮಾಡಿಕೊಂಡಿದ್ದಾರೆ.

ಸಿಬ್ಬಂದಿ ಕರ್ತವ್ಯಕ್ಕೆ ಹಾಜರಾಗುತ್ತಿದ್ದಾರೆ. ಬೆಂಗಳೂರಿನಲ್ಲಿ ಸಿಬ್ಬಂದಿಯೊಬ್ಬರು ತನ್ನ ಪುಟ್ಟ ಕಂದಮ್ಮನೊಂದಿಗೆ ಚುನಾವಣಾ ಕರ್ತವ್ಯಕ್ಕೆ ಹಾಜರಾಗಿ ಗಮನ ಸೆಳೆದರು.

ಮಲ್ಲೇಶ್ವರಂ ಮತಗಟ್ಟೆಯಲ್ಲಿ ಕರ್ತವ್ಯಕ್ಕೆ ಈ ಮಹಿಳೆಯನ್ನು ನಿಯೋಜಿಸಲಾಗಿತ್ತು. ತನ್ನ ಪುಟ್ಟ ಕಂದಮ್ಮನೊಂದಿಗೆ ಮಹಿಳೆ



ಕರ್ತವ್ಯಕ್ಕೆ ಹಾಜರಾಗಿದ್ದಾರೆ. ಆ ಮೂಲಕ ಕರ್ತವ್ಯದ ಜವಾಬ್ದಾರಿ ಮೆರೆದಿದ್ದಾರೆ.

ನಾಳೆ ಚುನಾವಣೆ ನಡೆಯಲಿದ್ದು, ಬೆಂಗಳೂರಿನಲ್ಲೂ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ.

ಈ ಕುರಿತು ಬೆಂಗಳೂರು ಚುನಾವಣಾಧಿಕಾರಿ ತುಷಾರ್ ಗಿರಿನಾಥ್ ಸುದ್ದಿಗೋಷ್ಠಿ ನಡೆಸಿ ಮಾಹಿತಿ ನೀಡಿದ್ದಾರೆ. ಬೆಂಗಳೂರು ಜಿಲ್ಲೆಯಲ್ಲಿ ಒಟ್ಟು 8,802 ಮತಗಟ್ಟೆಗಳಿಗೆ ಮಂಗಳವಾರ ಸಿಬ್ಬಂದಿ ತೆರಳಲಿದ್ದಾರೆ.42 ಸಾವಿರ ಸಿಬ್ಬಂದಿಯನ್ನು ಚುನಾವಣಾ ಕೆಲಸಕ್ಕೆ ನಿಯೋಜನೆ ಮಾಡಿದ್ದೇವೆ. ಮಸ್ಟರಿಂಗ್ ಸೆಂಟರ್‌ನಲ್ಲಿ ತಿಂಡಿ, ಊಟದ ವ್ಯವಸ್ಥೆ ಮಾಡಿದ್ದೇವೆ. ನಿಯೋಜಿತ ಸಿಬ್ಬಂದಿ ಆಯಾ ಮಸ್ಟರಿಂಗ್ ಸೆಂಟರ್‌ಗಳಲ್ಲಿ ಇವಿಎಂ ಪಡೆದು ಇಂದು ಸಂಜೆ ವೇಳೆಗೆ ಮತಗಟ್ಟೆಗೆ ತೆರಳುತ್ತಾರೆ. ನಾವು ಈಗಾಗ್ಲೇ ರೂಟ್ ಮ್ಯಾಪ್ ಫಿಕ್ಸ್ ಮಾಡಿದ್ದೇವೆ ಎಂದು ತಿಳಿಸಿದ್ದಾರೆ.

## ಚಲಿಸುವ ಸ್ಕೂಟರ್ ಸವಾರರ ಮೇಲೆ ಬಿದ್ದ ಮರದ ಕೊಂಬೆ



ಬೆಂಗಳೂರು : ಬೆಂಗಳೂರು ನಗರದಲ್ಲಿ ಸ್ಕೂಟರ್ನಲ್ಲಿ ಹೋಗುತ್ತಿದ್ದ ವೇಳೆ ಸವಾರ ಮತ್ತು ಹಿಂಬದಿ ಸವಾರನ ಮೇಲೆ ಏಕಾಏಕಿ ಮರದ ಕೊಂಬೆ ಮುರಿದು ಬಿದ್ದ ಘಟನೆ ಬೆಳಕಿಗೆ ಬಂದಿದೆ.

ಶ್ರೀನಗರದ ಜಲಗೇರಮ್ಮ ದೇಗುಲದ ಸಮೀಪ ಬೈಕ್ ಸವಾರ ಮತ್ತು ಆತನೊಂದಿಗೆ ಕುಳಿತ ಹಿಂಬದಿ ಸವಾರನ ಮೇಲೆ ಏಕಾಏಕಿ ಮರದ ಕೊಂಬೆಯೊಂದು ಬಿದ್ದಿದೆ.

ತಕ್ಷಣ ಎಚ್ಚೆತ್ತುಕೊಂಡ ಸ್ಕೂಟರ್ ಸವಾರ ಬ್ರೇಕ್ ಹಿಡಿದು ಸ್ಕೂಟರ್ ನಿಲ್ಲಿಸಲು ಯತ್ನಿಸಿದಾದರೂ ಅವರಿಬ್ಬರ ಮೈಮೇಲೆ ಕೊಂಬೆ ಬಿದ್ದಿದೆ.

ಸವಾರನಿಗೂ ಮತ್ತು ಹಿಂಬದಿಯ ಸವಾರ ಅದೃಷ್ಟವಶಾತ್ ಪಾರಾಗಿದ್ದಾರೆ. ಅವರಿಗೆ ಸಣ್ಣ ಪುಟ್ಟ ಗಾಯಗಳಾಗಿವೆ. ಇನ್ನು ಮರದ ಕೊಂಬೆ ಬಿದ್ದ ರಭಸಕ್ಕೆ ಬೈಕ್ ನಜ್ಜುಗುಜ್ಜಾಗಿದೆ ಎಂದು ತಿಳಿದುಬಂದಿದೆ.

## ಮತಗಟ್ಟೆಗಳಿಗೆ ತೆರಳಿದ ಚುನಾವಣಾ ಸಿಬ್ಬಂದಿ

# ಸುಗಮ ಮತದಾನಕ್ಕೆ ಸಕಲ ಸಿದ್ಧತೆ: ಜಿಲ್ಲಾಧಿಕಾರಿ ನಿತೇಶ್ ಪಾಟೀಲ

ಬೆಳಗಾವಿ: ವಿಧಾನಸಭಾ ಚುನಾವಣೆಯ ಹಿನ್ನೆಲೆಯಲ್ಲಿ ಜಿಲ್ಲೆಯ ಹದಿನೆಂಟು ಮತಕ್ಷೇತ್ರಗಳ ಮತಗಟ್ಟೆಗಳಿಗೆ ನಿಯೋಜನೆಗೊಂಡಿರುವ ಇಪ್ಪತ್ತು ಸಾವಿರಕ್ಕೂ ಅಧಿಕ ಚುನಾವಣಾ ಸಿಬ್ಬಂದಿಯು ವಿದ್ಯುನ್ಮಾನ ಮತಯಂತ್ರಗಳು ಹಾಗೂ ಇತರೆ ಸಾಮಗ್ರಿಗಳ ಜತೆಗೆ ಮತಗಟ್ಟೆಗಳಿಗೆ ತೆರಳಿದರು.

ಜಿಲ್ಲೆಯ ಹದಿನೆಂಟು ಮತಕ್ಷೇತ್ರಗಳಲ್ಲಿ 4434 ಮತಗಟ್ಟೆಗಳು ಮತ್ತು 5 ಹೆಚ್ಚುವ–ರಿ(ಆಕ್ಸಿಲರಿ) ಮತಗಟ್ಟೆಗಳು ಸೇರಿದಂತೆ ಒಟ್ಟು 4439 ಮತಗಟ್ಟೆಗಳಿವೆ. ಈ ಎಲ್ಲ



ಮತಗಟ್ಟೆಗಳಿಗೆ ನಿಯೋಜಿಸಲಾಗಿರುವ ಚುನಾವಣಾ ಸಿಬ್ಬಂದಿ ತಮ್ಮ ಮತಗಟ್ಟೆಗಳಿಗೆ ತೆರಳಿರುತ್ತಾರೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ತಿಳಿಸಿದ್ದಾರೆ.

ಜಿಲ್ಲಾಧಿಕಾರಿಗಳು ಸ್ವತಃ ಬೆಳಗಾವಿ ನಗರ ಹಾಗೂ ಹುಕ್ಕೇರಿ ಮತಕ್ಷೇತ್ರಗಳ ಶ್ರೀ ಕಾಡಸಿದ್ಧೇಶ್ವರ ಪಬ್ಲಿಕ್ ಶಾಲೆಯ ಆವರಣದಲ್ಲಿ ಇರುವ ಮಸ್ಟರಿಂಗ್ ಕೇಂದ್ರಗಳಿಗೆ ಭೇಟಿ ನೀಡಿದರಲ್ಲದೇ ಎಲ್ಲ ಸಿಬ್ಬಂದಿ ನಿಗದಿತ ಬಸ್ ಗಳ ಮೂಲಕ ಸುರಕ್ಷಿತವಾಗಿ ಮತಗಟ್ಟೆಗಳಿಗೆ ತೆರಳುವುದನ್ನು ಖಚಿತಪಡಿಸಿದರು.

ಜಿಲ್ಲೆಯ ಕೆಲವೆಡೆ ಮಳೆಯಾಗುತ್ತಿದ್ದು, ಚುನಾವಣಾ ಪ್ರಕ್ರಿಯೆಗೆ ಯಾವುದೇ ರೀತಿಯ ಅನಾನುಕೂಲ ಆಗದಂತೆ ಎಚ್ಚ–ರಿಕೆ ವಹಿಸಲಾಗಿದೆ ಎಂದು ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಸಂಜೀವ್ ಪಾಟೀಲ ಅವರು ಕೂಡ ವಿವಿಧ ಮತಗಟ್ಟೆಗಳಿಗೆ ಭೇಟಿ ನೀಡುವ ಮೂಲಕ ಭದ್ರತಾ ಕ್ರಮಗಳನ್ನು ಪರಿಶೀಲಿಸಿದರು.

ಕೇಂದ್ರೀಯ ಪೊಲೀಸ್ ಪಡೆ ಸೇರಿದಂತೆ ವಿವಿಧ ಭದ್ರತಾ ತುಕಡಿಗಳನ್ನು ಸಂಬಂಧಿಸಿದ ಮತಗಟ್ಟೆಗಳಿಗೆ ಕಳಿಸುವ ವ್ಯವಸ್ಥೆ ಮಾಡಿದರು.

ಪ್ರಜಾಪ್ರಭುತ್ವದ ಹಬ್ಬವಾಗಿರುವ ಚುನಾವಣೆಯನ್ನು ಸುಗಮ, ಶಾಂತಿಯುತ ಮತ್ತು ನ್ಯಾಯಸಮ್ಮತವಾಗಿ ನಡೆಸುವ ನಿಟ್ಟಿನಲ್ಲಿ ಎಲ್ಲ ರೀತಿಯ ಸಿದ್ಧತೆಗಳನ್ನು ಮಾಡಲಾಗಿದೆ. ಎಲ್ಲರೂ ತಪ್ಪದೇ ಮತ ಚಲಾಯಿಸುವ ಮೂಲಕ ಚುನಾವಣಾ ಪ್ರಕ್ರಿಯೆಯಲ್ಲಿ ಸಕ್ರೀಯವಾಗಿ ಭಾಗವಹಿಸಬೇಕು ಎಂದು ಜಿಲ್ಲಾ ಚುನಾವಣಾಧಿಕಾ–ರಿಯೂ ಆಗಿರುವ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಮನವಿ ಜಿಲ್ಲೆಯ ಜನರಲ್ಲಿ ಮನವಿ ಮಾಡಿಕೊಂಡಿದ್ದಾರೆ.

## ಕರ್ನಾಟಕ ಚುನಾವಣೆ: ಹಿನ್ನೆಲೆಯಲ್ಲಿ ಕೊಲ್ಲಾಪುರ ಪ್ರದೇಶದಲ್ಲಿ 4.41 ಕೋಟಿ ಮೌಲ್ಯದ ವಸ್ತುಗಳ ವಶ

ಕರ್ನಾಟಕ ವಿಧಾನಸಭಾ ಚುನಾವಣೆ ಹಿನ್ನೆಲೆಯಲ್ಲಿ ಕೊಲ್ಲಾಪುರ ಪ್ರದೇಶದಲ್ಲಿ 4.41 ಕೋಟಿ ಮೌಲ್ಯದ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ.

ಇದರಲ್ಲಿ 88 ಲಕ್ಷ ನಗದು, 35 ಸಾವಿರ ಲೀಟರ್ ಮದ್ಯ, ಎರಡೂವರೆ ಲಕ್ಷ ಮೌಲ್ಯದ ಗಾಂಜಾ, 3.25 ಕೋಟಿ ಮೌಲ್ಯದ ರಾಸಾಯನಿಕಗಳು, 5 ಲಕ್ಷ ಮೌಲ್ಯದ 11 ಕಂಟ್ರಿ ಪಿಸ್ತೂಲ್, ಸೇರಿವೆ . 2 ಸಾವಿರದ 890 ಜನರ ವಿರುದ್ಧ ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗಿದೆ ಎಂದು ಕೊಲ್ಲಾಪುರದ ಪೊಲೀಸ್ ಮಹಾನಿರೀಕ್ಷಕ ಸುನೀಲ್ ಫುಲಾರಿ ಮಾಧ್ಯಮಗಳಿಗೆ ತಿಳಿಸಿದ್ದಾರೆ.ಕರ್ನಾಟಕ ವಿಧಾನಸಭಾ ಚುನಾವಣೆ ಹಿನ್ನೆಲೆಯಲ್ಲಿ ಕೊಲ್ಲಾಪುರ, ಸಾಂಗಲಿ, ಸೊಲ್ಲಾಪುರ ಜಿಲ್ಲೆಗಳ ಗಡಿ ಭಾಗದ ವಿವಿಧೆಡೆ ಪೊಲೀಸ್ ತಪಾಸಣಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ.

ಗಡಿ ಭಾಗದ ಎಲ್ಲಾ ಪೊಲೀಸ್ ಠಾಣೆಗಳಿಗೆ ಎಚ್ಚ–ರಿಕೆಯ ಆದೇಶ ನೀಡಲಾಗಿದೆ. ಗಡಿ ಭಾಗದ ಹೆದ್ದಾ–ರಿಗಳು, ರಾಜ್ಯ ರಸ್ತೆಗಳು, ಜಿಲ್ಲಾ ರಸ್ತೆಗಳು ಮತ್ತು ಇತರ ರಸ್ತೆಗಳಲ್ಲಿ ಪೊಲೀಸರು ಕಟ್ಟುನಿಟ್ಟಿನ ನಿಗಾ ಇರಿಸಿದ್ದಾರೆ. ಗಡಿ ಪ್ರದೇಶಗಳಲ್ಲಿ ಚೆಕ್ಪೋಸ್ಟ್‌ಗಳನ್ನು ಸ್ಥಾಪಿಸಲಾಗಿದೆ. ಕರ್ನಾಟಕ ಚುನಾವಣೆ ಹಿನ್ನೆಲೆಯಲ್ಲಿ ಮಹಾರಾಷ್ಟ್ರ ಪೊಲೀಸರು ಕಳೆದ 15 ದಿನಗಳಿಂದ ಗಡಿ ಭಾಗದಲ್ಲಿ ಮಹತ್ವದ ಕ್ರಮ ಕೈಗೊಂಡಿದ್ದಾರೆ.

ಕೊಲ್ಲಾಪುರ ವ್ಯಾಪ್ತಿಯಲ್ಲಿ 7 ಪ್ರಕರಣಗಳನ್ನು ದಾಖಲಿಸಿ 5.16 ಲಕ್ಷ ಮೌಲ್ಯದ 11 ಕಂಟ್ರಿ ಪಿಸ್ತೂಲ್, 4 ಆಯುಧಗಳನ್ನು ವಶಪಡಿಸಿಕೊಳ್ಳಲಾಗಿದೆ. ಸಿಆರ್‌ಪಿಸಿ 107ರಂತೆ 1 ಸಾವಿರದ 875 ಮಂದಿ, 108ರಂತೆ 7 ಮಂದಿ, 109ರಂತೆ 18 ಮಂದಿ, 110ರಂತೆ 86, 149ರಂತೆ 728, 144ರಂತೆ 89ರಂತೆ 2ರಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗಿದೆ ಎಂದು ಫುಲಾರಿ ತಿಳಿಸಿದಾರೆ .ಸೊಲ್ಲಾಪುರ ಗ್ರಾಮಾಂತರ ಕ್ಷೇತ್ರದಲ್ಲೂ ಬಿಗ್ ಆ್ಯಕ್ಷನ್

ಇದೇ ವೇಳೆ ಸೊಲ್ಲಾಪುರ ಗ್ರಾಮಾಂತರ ವ್ಯಾಪ್ತಿಯಲ್ಲಿ 88 ಲಕ್ಷ ಮೌಲ್ಯದ ನಗದನ್ನು ವಶಪಡಿಸಿಕೊಳ್ಳಲಾಗಿದೆ. 20.30 ಲಕ್ಷ ಮೌಲ್ಯದ 35 ಸಾವಿರ ಲೀಟರ್ ಮದ್ಯ ವಶಪಡಿಸಿಕೊಳ್ಳಲಾಗಿದೆ. 2.33 ಲಕ್ಷ ಗುಟ್ಕಾ ಪ್ಯಾಕೆಟ್ಗಳನ್ನು ವಶಪಡಿಸಿಕೊಳ್ಳಲಾಗಿದ್ದು, ಟೆಂಪೋ, ಲಾರಿ, ಕಾರು, 3 ಮೊಬೈಲ್ಗಳನ್ನು ವಶಪಡಿಸಿಕೊಳ್ಳಲಾಗಿದೆ. 3.25 ಕೋಟಿ ಮೌಲ್ಯದ ಮದ್ಯದ ಕಚ್ಚಾ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದರು.

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089